₹ 4 | ಪುಟ: 4 | ಸಂಪುಟ: 4 | ಸಂಚಿಕೆ 56 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 56 | Friday, 14, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಹೆಲಿಪ್ಯಾಡ್ ಬಳಿ ಬೆಂಕಿ ಸಿಎಂ ಬೊಮ್ಮಾಯಿ ಬಚಾವ್



ಉಡುಪಿ: ಸಿಎಂ ಬಸವರಾಜ ಬೊಮ್ಮಾಯಿ ಅವರ ಹೆಲಿಕಾಪ್ಟರ್ ಲ್ಯಾಂಡ್ ಆಗುತ್ತಿದ್ದ ಹೆಲಿಪ್ಯಾಡ್ ಬಳಿ ಬೆಂಕಿ ಕಾಣಿಸಿಕೊಂಡಿದೆ. ಉಡುಪಿ ಜಿಲ್ಲೆ ಬೈಂದೂರಿನ ಅರೆಶಿರೂರು ಹೆಲಿಪ್ಯಾಡ್ ಬಳಿ ಮುಖ್ಯಮಂತ್ರಿಗಳ ಎಸ್ಕಾರ್ಟ್ ಹೋದ ಬಳಿಕ ಬೆಂಕಿ ಕಾಣಿಸಿಕೊಂಡಿದ್ದು ಕೆಲ ಕ್ಷಣ ಆತಂಕದ ವಾತಾವರಣ ಸೃಷ್ಟಿಯಾಗಿತ್ತು.

ಬೈಂದೂರು ಅಗ್ನಿಶಾಮಕದಳ ಸಿಬ್ಬಂದಿ ಕೂಡಲೇ ಬೆಂಕಿ ನಂದಿಸಿದ್ದು ಅರೆಶಿರೂರು ಹೆಲಿಪ್ಯಾಡ್ ಮೂಲಕ ಕೊಲ್ಲೂರಿಗೆ ಸಿಎಂ ಆಗಮಿಸಿದ್ದಾರೆ.

## 71 ಸಾವಿರ ಉದ್ಯೋಗಿಗಳಿಗೆ ನೇಮಕಾತಿ ಪತ್ರ: ರೋಜ್‌ಗಾರ್ ಮೇಳ ಕುರಿತು ಪ್ರಧಾನಿ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ

ನವದೆಹಲಿ: ರಾಷ್ಟ್ರೀಯ ಉದ್ಯೋಗ ಮೇಳದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ 71,000ಕ್ಕೂ ಹೆಚ್ಚು ಯುವಕರಿಗೆ ಪ್ರಧಾನಿ ನರೇಂದ್ರ ಮೋದಿ ನೇಮಕಾತಿ ಪತ್ರ ವಿತರಿಸಿದ್ದು ಇದಕ್ಕೆ ಪ್ರತಿಕ್ರಿಯಿಸಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇದು ಕಡಿಮೆ ಪ್ರಮಾಣದ ನೇಮಕಾತಿ ಹಾಗೂ ತುಂಬ ತಡವಾಯಿತು ಎಂದು ವ್ಯಂಗ್ಯವಾಡಿದ್ದಾರೆ.

ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ 71 ಸಾವಿರಕ್ಕೂ ಹೆಚ್ಚು ಯುವಕರು ಸರ್ಕಾರಿ ನೌಕರಿ



ಪಡೆದಿದ್ದು ಅವರೆಲ್ಲರಿಗೂ ಪ್ರಧಾನಿ ಅಭಿನಂದನೆ ಸಲ್ಲಿಸಿದ್ದರು.

ಎನ್‌ಡಿಎ ಮತ್ತು ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಸರ್ಕಾರಿ ಉದ್ಯೋಗ ನೀಡುವ ಪ್ರಕ್ರಿಯೆ ತ್ವರಿತ ಗತಿಯಲ್ಲಿ ನಡೆಯುತ್ತಿದೆ. ನಿನ್ನೆಯಷ್ಟೇ ಮಧ್ಯ ಪ್ರದೇಶದಲ್ಲಿ 22,000ಕ್ಕೂ ಹೆಚ್ಚು ಶಿಕ್ಷಕ–ರಿಗೆ ನೇಮಕಾತಿ ಪತ್ರಗಳನ್ನು ಹಸ್ತಾಂತರಿ ಸಲಾಗಿದೆ ಎಂದರು.

ಉದ್ಯೋಗ ಮೇಳ'ದಡಿ ಇತ್ತೀಚಿಗೆ ನೇಮಕಾತಿ ಪತ್ರ ವಿತರಣೆ ಕುರಿತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇಂದು ವ್ಯಂಗ್ಯವಾಡಿದ್ದು, 'ತುಂಬಾ ಕಡಿಮೆ, ತಡವಾಗಿ' ಇದು ಕೇವಲ 'ಸ್ಟಂಟ್' ಎಂದು ಹೇಳಿದರು.

ಪ್ರಧಾನಿಯನ್ನು ಗು–ರಿಯಾಗಿಸಿಕೊಂಡು ಟ್ವೀಟ್ ಮಾಡಿರುವ ಖರ್ಗೆ, 'ಮೋದಿ ಜೀ, ಉದ್ಯೋಗದ ಹೆಸರಿನಲ್ಲಿ ಮತ್ತೆ 'ನೇಮಕಾತಿ ಪತ್ರ' ಹಂಚುತ್ತಿದ್ದಾರೆ. ಈ ಸಂದರ್ಭದಲ್ಲಿ ರೈಲ್ವೇ ಸಚಿವಾಲಯದಿಂದ ಬರೋಬ್ಬರಿ 50,000 ಪತ್ರಗಳು ಬಂದಿವೆ. ರೈಲ್ವೆಯಲ್ಲಿ 3,01,750 ಹುದ್ದೆಗಳು ಖಾಲಿ ಇವೆ. ಸರ್ಕಾರಿ ಸಚಿವಾಲಯಗಳಲ್ಲಿ 30 ಲಕ್ಷ ಹುದ್ದೆಗಳು ಖಾಲಿ ಇವೆ. ಹೀಗಾಗಿ ಇದು 'ತುಂಬಾ ಕಡಿಮೆ, ತುಂಬಾ ತಡವಾಗಿದೆ' ಎಂದು ಟ್ವೀಟಿಸಿದ್ದಾರೆ.

## ಇಂದು ಸಿದ್ದರಾಮಯ್ಯ ಬೆಳಗಾವಿಗೆ

### ಬೆಳಗಾವಿಯ ಭೂತರಾಮನಹಟ್ಟಿಯಲ್ಲಿ ಕಾಂಗ್ರೆಸ್ 'ಪ್ರಜಾಧ್ವನಿ' ಸಮಾವೇಶ



ಬೆಳಗಾವಿ: ಬೆಳಗಾವಿಯ ಭೂತರಾಮನಹಟ್ಟಿಯ ಮೈದಾನದಲ್ಲಿ ಏ. 14ರಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ನಡೆಯುವ ಕಾಂಗ್ರೆಸ್ 'ಪ್ರಜಾಧ್ವನಿ' ಸಮಾವೇಶದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ವಿವಿಧ ಕಾಂಗ್ರೆಸ್ ಮುಖಂಡರು ಭಾಗವಹಿಸಲಿದ್ದಾರೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ್ ನಾವಲಗಟ್ಟಿ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ತಿಳಿಸಿದ ಅವರು, ಇಂದು ಮಾಜಿ ಸಿಎಂ ಸಿದ್ದರಾಮಯ್ಯ ಅವರು ಸಂಜೆ 5.45ಕ್ಕೆ ಸಾಂಬ್ರಾ ನಿಲ್ದಾಣ ಮೂಲಕ ಬೆಳಗಾವಿಗೆ ಆಗಮಿಸಿ ನಂತರ 6.30ಕ್ಕೆ ಭೂತರಾಮನಹಟ್ಟಿಗೆ ಬರಲಿದ್ದಾರೆ. ಅಲ್ಲಿ ನಡೆಯುವ ಕಾಂಗ್ರೆಸ್ 'ಪ್ರಜಾಧ್ವನಿ' ಸಮಾವೇಶದಲ್ಲಿ ರಾಜ್ಯ ಬಿಜೆಪಿ ಸರ್ಕಾರ ಆಡಳಿತದಲ್ಲಿ ಸಂಪೂರ್ಣ ವಿಫಲವಾಗಿರುವ ಹಾಗೂ ಬಿಜೆಪಿ ಸರ್ಕಾರ ಮಾಡಿರುವ ಭ್ರಷ್ಟಾಚಾರ ಕುರಿತು ಮಾತನಾಡಲಿದ್ದಾರೆ ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ 'ಪ್ರಜಾಧ್ವನಿ' ಸಮಾವೇಶದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಶಾಸಕರಾದ ಗಣೇಶ ಹುಕ್ಕೇರಿ, ಲಕ್ಷ್ಮೀ ಹೆಬ್ಬಾಳಕರ, ಅಂಜಲಿ ನಿಂಬಾಳ್ಕರ, ಮಹಾಂತೇಶ ಕೌಜಲಗಿ, ಚಿಕ್ಕೋಡಿ ಜಿಲ್ಲಾಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಬೆಳಗಾವಿ ಜಿಲ್ಲೆ ಕಾಂಗ್ರೆಸ್ ಅಭ್ಯರ್ಥಿಗಳು ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

## ಲಕ್ಷ್ಮಣ ಸವದಿ ದುಡುಕಿನ ನಿರ್ಧಾರ ತೆಗೆದುಕೊಳ್ಳದಿರಲಿ: ರಮೇಶ ಜಾರಕಿಹೊಳಿ

ಗೋಕಾಕ : ಗೋಕಾಕ ಮತಕ್ಷೇತ್ರದ ಜನತೆಯ ಆಶೀರ್ವಾದ, ಪ್ರೀತಿಯಿಂದ ನಾನು 6ಬಾರಿ ಶಾಸಕನಾಗಿ ಆಯ್ಕೆಯಾಗಿದ್ದೇನೆ. ಕ್ಷೇತ್ರದ ಜನ ಅಪಪ್ರಚಾರಕ್ಕೆ ಕಿವಿ ಕೊಟ್ಟಿಲ್ಲ. ಜಾತ್ಯಾತೀತವಾಗಿ ನನ್ನ ಬೆಂಬಲಿಸಿದ್ದಾರೆ ಎಂದು ಮಾಜಿ ಸಚಿವ ಹಾಗೂ ಬಿಜೆಪಿ ಅಭ್ಯರ್ಥಿ ರಮೇಶ ಜಾರಕಿಹೊಳಿ ತಿಳಿಸಿದರು.

ಅವರು, ಗುರುವಾರದಂದು ನಗರ ತಾಲೂಕಾಡಳಿತ ಸೌಧ (ತಹಶೀಲ್ದಾರ ಕಾರ್ಯಾಲಯ)ಕ್ಕೆ ತೆರಳಿ, ಗೋಕಾಕ ಮತಕ್ಷೇತ್ರದ ಚುನಾವಣಾಧಿಕಾರಿ ಗೀತಾ ಕೌಲಗಿ ಅವರಿಗೆ ತಮ್ಮ ನಾಮಪತ್ರ ಸಲ್ಲಿಸಿದ ನಂತರ ಪತ್ರಕರ್ತರೊಂದಿಗೆ ಮಾತನಾಡಿದರು.

ನಾನು ಜಾತಿಕಾರಣ ಮಾಡಿಲ್ಲ, ಎಲ್ಲ ಜಾತಿ ಧರ್ಮದ ಜನರನ್ನು ಒಗ್ಗೂಡಿಸಿಕೊಂಡು ಹೋಗುತ್ತಿದ್ದೇನೆ. ಕಾಂಗ್ರೆಸ್ ನಾಯಕರು ಮಾಡಿದ ಷಡ್ಯಂತ್ರ ನೋಡಿದರೆ ನಾನು ಮೇಲೆದ್ದು ಬರುತ್ತಿರಲಿಲ್ಲ. ಜನರ ಪ್ರೀತಿ, ವಿಶ್ವಾಸದಿಂದ ಮತ್ತೆ ಎಲ್ಲರ ಎದುರು ನಿಂತಿದ್ದೇನೆ. ಕೆಳಮಟ್ಟದ ರಾಜಕಾರಣದಿಂದ ನನಗೆ ಬೇಜಾರಾಗಿದೆ ಇದೇ ಬಾರಿ ನಾನು ಸ್ಪರ್ಧೆ ಮಾಡುತ್ತಿರಲಿಲ್ಲ ವೈರಿಗಳಿಗೆ ತಕ್ಕ ಉತ್ತರ ನೀಡಲು ಈ ಬಾರಿ ಸ್ಪರ್ಧೆ ಮಾಡುತ್ತಿದ್ದೇನೆ ಮುಂದಿನ ಬಾರಿ ಸ್ಪರ್ಧೆ ಮಾಡೋದಿಲ್ಲ ಎಂದರು.

ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಬಿಜೆಪಿ ವಿರುದ್ಧ ಬಂಡಾಯ ವಿಚಾರವಾಗಿ ಮಾತನಾಡಿದ ರಮೇಶ ಜಾರಕಿಹೊಳಿ ಅವರು, ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಮತ್ತು ನಾನು ನಿಜವಾಗಿಯೂ




ನಾವಿಬ್ಬರೂ ಉತ್ತಮ ಸ್ನೇಹಿತರು, ಕೆಟ್ಟ ಘಳಿಗೆಯಲ್ಲಿ ನಾವಿಬ್ಬರೇ ಬೇರೆ ಬೇರೆಯಾಗಿದ್ದೇವೆ. ನಾನು ಕಾಂಗ್ರೆಸ್ ನಲ್ಲಿದ್ದೆ ಅವರು ಬಿಜೆಪಿಯಲ್ಲಿದ್ದರು, ಅಚಾನಕ್ ನಾವಿಬ್ಬರೂ ಒಂದೇ ಪಕ್ಷದಲ್ಲಿದ್ದೇವೆ.

ಲಕ್ಷ್ಮಣ ಸವದಿಗೆ ಮಾಧ್ಯಮಗಳ ಮೂಲಕ ಮನವಿ ಮಾಡುತ್ತೇನೆ. ನಿಮ್ಮ ನಿರ್ಧಾರವನ್ನ ಪುನರ್ ಪರಿಶೀಲನೆ ಮಾಡಿ, ಯಾವುದೇ ದುಡುಕಿನ ನಿರ್ಧಾರ ಬೇಡ. ನಾವಿಬ್ಬರೂ ಸೇರಿ 2023ಕ್ಕೆ ಜಿಲ್ಲೆ, ರಾಜ್ಯದಲ್ಲಿ ಬಿಜೆಪಿ ಸರ್ಕಾರ ತರೋಣ, ಬಿಜೆಪಿ ಕಟ್ಟೋಣ ಬೇಕಿದ್ದರೆ ನಾನೇ ಒಂದು ಹೆಜ್ಜೆ ಹಿಂದೆ ಸರಿಯುತ್ತೇನೆ. ಮತ್ತೊಮ್ಮೆ ವಿಚಾರ ಮಾಡಿ ಬಿಜೆಪಿಯಲ್ಲಿ ಮುಂದುವರೆಯಬೇಕು ಎಂದು ಮನವಿ ಮಾಡಿದರು.

ನಮ್ಮಿಬ್ಬರಲ್ಲಿ ಯಾವುದೇ ಭಿನ್ನಾಭಿಪ್ರಾಯ ಇದ್ದರೆ ಕುಳಿತು ಬಗೆಹರಿಸಿಕೊಳ್ಳೋಣ. ಮಹೇಶ್ ಕುಮಟಳ್ಳಿ ಪರ ಬ್ಯಾಟಿಂಗ್ ಮಾಡೋದು ನನ್ನ ಧರ್ಮ, ನಾನು ಮಾಡಿದ್ದೀನಿ. ಆದರೆ ಲಕ್ಷ್ಮಣ ಸವದಿ ವಿರುದ್ಧ ಅಲ್ಲ, ನಿಮ್ಮ ಸ್ಥಾನಮಾನ ಕಸಿದುಕೊಂಡಿಲ್ಲ. ಹಿಂದಿನ ಕಾಂಗ್ರೆಸ್ ಪಕ್ಷದಲ್ಲಿದ್ದಾಗ ಕಾಂಗ್ರೆಸ್ ಗೆಲ್ಲಿಸುವುದು ನನ್ನ ಕರ್ತವ್ಯ, ಮಾಡಿದ್ದೀನಿ. ಈಗ ಎಂ–ಎಲ್‌ಸಿ ಇದ್ದೀರಿ 5 ವರ್ಷ ಅಧಿಕಾರ ಅವಧಿ ಇದೆ. ಕುಮಠಳ್ಳಿ ಎಂಎಲ್‌ಎ ಆಗಬೇಕು. ಮುಂದಿನ ದಿನದಲ್ಲಿ ಇಬ್ಬರೂ ಸೇರಿ ಬಿಜೆಪಿಗಾಗಿ ಕೆಲಸ ಮಾಡೋಣ ಎಂದರು.

ಕಾಂಗ್ರೆಸ್ ಮೋಸಗಾರ ಪಕ್ಷ ಅಲ್ಲಿಗೆ ಹೋಗಬೇಡಿ ಎಂದು ಸವದಿಯವರಿಗೆ ಮನವಿ ಮಾಡುತ್ತೇನೆ. ನಾನು–ನೀನು ಬೊಮ್ಮಾಯಿ ಸ್ನೇಹಿತರು, ಹೈಕಮಾಂಡ್ ಹೇಳಿದರೆ ಸಂಧಾನ ಮಾಡುತ್ತೇನೆ. ಜಿಲ್ಲೆ ರಾಜ್ಯದಲ್ಲಿ ನಾನು ನೀನು ಸೇರಿ ಕೆಲಸ ಮಾಡೋಣ, ಯಾವುದೇ ದುಡುಕಿನ ತೀರ್ಮಾನ ಮಾಡಬೇಡಿ ಎಂದು ಮತ್ತೊಮ್ಮೆ ಮನವಿ ಮಾಡಿದರು. ಅಥ–ಣಿಗೆ ಎಲ್ಲವು ಸರಿ ಹೋದ ಮೇಲೆ ಹೋಗುತ್ತೇನೆ.

## ಬೆಂಗಳೂರಿನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 1 ಕೋಟಿ ನಗದು ಜಪ್ತಿ



ಬೆಂಗಳೂರು: ನಗರದಲ್ಲಿ ಅಕ್ರಮವಾಗಿ ಆಟೋದಲ್ಲಿ ಸಾಗಿಸುತ್ತಿದ್ದಂತ 1 ಕೋಟಿ ನಗದನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಈ ಮೂಲಕ ಪ್ರಕರಣ ಸಂಬಂಧ ಇಬ್ಬರನ್ನು ವಶಕ್ಕೆ ಪಡೆದು, ವಿಚಾರಣೆ ನಡೆಸುತ್ತಿದ್ದಾರೆ.

ಬೆಂಗಳೂರಿನ ಹಲಸೂರು ಗೇಟ್ ಠಾಣೆ ಸಮೀಪವೇ ಆಟೋವೊಂದು ಕೆಟ್ಟು ನಿಂತಿತ್ತು. ಸಮೀಪ ತೆರಳಿದಂತ ಹಲಸೂರು ಗೇಟ್ ಚೆಕ್ ಪೋಸ್ಟ್ ಪೊಲೀಸರು ಆಟೋವನ್ನು ಪರಿಶೀಲಿಸಿದಾಗ ಸೂಕ್ತ ದಾಖಲೆ ಇಲ್ಲದಂತ 1 ಕೋಟಿ ನಗದು ಪತ್ತೆಯಾಗಿದೆ.

ಆಟೋದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದಂತ 1 ಕೋಟಿ ನಗದನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಅಲ್ಲದೇ ಅಕ್ರಮವಾಗಿ 1 ಕೋಟಿ ಹಣ ಸಾಗಿಸುತ್ತಿದ್ದಂತ ಪ್ರವೀಣ್, ಸುರೇಶ್ ಎಂಬ ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಮೆರವಣಿಗೆಯಲ್ಲಿ ಹಿಂಸಾಚಾರ, 43 ಬಂಧನ, ಇಂಟರ್ನೆಟ್ ಸ್ಥಗಿತ



ಸಂಬಲ್ಪುರ: ಹನುಮ ಜಯಂತಿ ಮೆರವಣಿಗೆ ಹಿಂಸಾಚಾರಕ್ಕೆ ತಿರುಗಿದ ನಂತರ ಸುಳ್ಳು ವದಂತಿಗಳ ಹರಡುವಿಕೆ ತಡೆಯಲು ಒಡಿಶಾ ಸರ್ಕಾರ ಗುರುವಾರ ಬೆಳಗ್ಗೆ 10 ರಿಂದ 48 ಗಂಟೆಗಳ ಕಾಲ ಸಂಬಲ್ಪುರ ಜಿಲ್ಲೆಯಲ್ಲಿ ಇಂಟರ್ನೆಟ್ ಸೇವೆಯನ್ನು ಸ್ಥಗಿತಗೊಳಿಸಿದೆ.

ಬುಧವಾರ ಸಂಜೆ ಹನುಮ ಜಯಂತಿ ಆಚ–ರಿಸುತ್ತಿದ್ದ ಬೈಕ್ ರ್ಯಾಲಿಯ ಮೇಲೆ ಕಲ್ಲು ತೂರಾಟ ನಡೆದಿದ್ದು, ಹಿಂಸಾಚಾರ ಭುಗಿಲೆದ್ದಿತ್ತು. ಇದರಲ್ಲಿ ಪೊಲೀಸ್ ಮಹಿಳೆ ಸೇರಿದಂತೆ ಕನಿಷ್ಠ 10 ಪೊಲೀಸರು ಗಾಯಗೊಂಡಿದ್ದಾರೆ. ಈ ಘಟನೆ ಸಂಬಂಧ ಇದುವರೆಗೆ ಸುಮಾರು 43 ಜನರನ್ನು ಬಂಧಿಸಲಾಗಿದೆ.

ಆದಾಗ್ಯೂ, ಘಟನೆಯಲ್ಲಿ ಗಾಯಗೊಂಡ ನಾಗ–ರಿಕರ ಸಂಖ್ಯೆಯನ್ನೂ ಇನ್ನೂ ಬಹಿರಂಗಗೊಳಿಸಿಲ್ಲ.

ನಗರದಲ್ಲಿ ಸಂಭವನೀಯ ಹಿಂಸಾಚಾರವನ್ನು ತಡೆಗಟ್ಟಲು ಎಲ್ಲಾ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಶೀಘ್ರದಲ್ಲೇ ಪಥ ಸಂಚಲನ ನಡೆಸಲು ನಿರೀಕ್ಷೆಯಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ಸಂಬಲ್ಪುರದಲ್ಲಿ ಪರಿಸ್ಥಿತಿ ಗಂಭೀರವಾಗಿದೆ. ದುಷ್ಕರ್ಮಿಗಳು ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತರಲು ಸಾಮಾಜಿಕ ಮಾಧ್ಯಮಗಳ ಮೂಲಕ ಸುಳ್ಳು ವದಂತಿಗಳನ್ನು ಹರಡುತ್ತಿದ್ದು, ಇಂಟ–ರ್ನೆಟ್ ಬಳಕೆ ನಿಷೇಧಿಸಿ ಗೃಹ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಿಕೆ ಸಿಂಗ್ ಅಧಿಸೂಚನೆ ಹೊರಡಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ಜಿಲ್ಲೆಯ ಆರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಲಂ 144ರ ಅನ್ವಯ ನಿಷೇಧಾಜ್ಞೆ ಹೊರಡಿಸಲಾಗಿದೆ. ವಾಟ್ಸಾಪ್, ಟ್ವಿಟರ್ ಸೇರಿದಂತೆ ಎಲ್ಲಾ ಸಾಮಾಜಿ–ಕ ಮಾಧ್ಯಮಗಳ ಬಳಕೆಯನ್ನು ನಿರ್ಬಂಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೂ 43 ಜನರನ್ನು ಬಂಧಿಸಲಾಗಿದೆ. 26 ಜನರ ವಿರುದ್ಧ ವಿವಿಧ ಸೆಕ್ಷನ್ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಪರಿಸ್ಥಿತಿ ಸದ ಹತೋಟಿಗೆ ಬಂದಿದೆ ಎಂದು ಎಸ್ ಪಿ ಗಂಗಾಧರ್ ತಿಳಿಸಿದ್ದಾರೆ.

## ಸಿಎಂ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ ನೆಹರೂ ಓಲೇಕಾರ್

ಹಾವೇರಿ: ಬಿಜೆಪಿ ರಾತ್ರೋರಾತ್ರಿ ಬಿಡುಗಡೆ ಮಾಡಿದ 2ನೇ ಹಂತದ ಅಭ್ಯರ್ಥಿಗಳ ಪಟ್ಟಿಯಲ್ಲಿ ಟಿಕೆಟ್ ಕೈತಪ್ಪಿದ್ದಕ್ಕೆ ಹಾಲಿ ಶಾಸಕ ನೆಹರೂ ಓಲೇಕಾರ್ ಕೆಂಡಾಮಂಡಲರಾಗಿದ್ದಾರೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ 2ನೇ ಪಟ್ಟಿಯಲ್ಲಿ ಹಾವೇರಿ ಮೀಸಲು ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕ ನೆಹರೂ ಓಲೇಕಾರ್‌ಗೆ ಟಿಕೆಟ್ ಮಿಸ್ ಆಗಿದೆ.

ಹಾವೇರಿಯ ತಮ್ಮ ನಿವಾಸದಲ್ಲಿ ಮಾತನಾಡಿದ ಅವರು, ನನಗೆ ಟಿಕೆಟ್ ಮಿಸ್ ಆಗಲು ಸಿಎಂ ಬಸವರಾಜ ಬೊಮ್ಮಾಯಿ ಹಾಗೂ ಜಿಲ್ಲಾಧ್ಯಕ್ಷ ಸಿದ್ದರಾಜ ಕಲ್ಲಕೋಟಿ ಕಾರಣ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಅವನ ಕ್ಷೇತ್ರದ ಚುನಾವಣೆ ಹೇಗೆ ಮಾಡುತ್ತಾನೆ ಎಂಬುದನ್ನ ನೋಡುತ್ತೇನೆ. ಜಿಲ್ಲೆಯಲ್ಲಿ ಎಷ್ಟು ಸೀಟು ಬಿಜೆಪಿ ಗೆಲ್ಲಿಸುತ್ತಾನೆ.

ಯಡಿಯೂರಪ್ಪ ಹೆಸರಿನಲ್ಲಿ ಸಿಎಂ ಆದವನು.



ಯಡಿಯೂರಪ್ಪನವರಿಗೆ ಮೋಸ ಮಾಡಿದ್ದಾನೆ ಎಂದು ಕಿಡಿಕಾರಿದ್ದಾರೆ.

ರಾಷ್ಟ್ರೀಯ ನಾಯಕರಿಗೆ ಸ್ವಲ್ಪ ದಿನದಲ್ಲಿ ಗೊತ್ತಾಗುತ್ತೆ. ಉದ್ದೇಶಪೂರ್ವಕವಾಗಿ ಟಿಕೆಟ್ ತಪ್ಪಿಸಿದ್ದಾರೆ. ರಾಜಕಾರಣದಲ್ಲಿ ನನ್ನ ಬೆಳವಣಿಗೆ ಸಹಿಸಲಾರದೆ ತಪ್ಪಿಸಿದ್ದಾರೆ.

ಮುಖ್ಯಮಂತ್ರಿ ಮಾಡಿದ ಹಗರಣವನ್ನ ಬಯಲಿಗೆ ಎಳೆಯುತ್ತೇನೆ. ಆತ ಮಾಡಿದ ಘನಕಾರ್ಯವನ್ನ ಜನರ ಮುಂದೆ ಬಿಚ್ಚಿಡುತ್ತೇನೆ. ಸೂಕ್ತ ತನಿಖೆ ಮಾಡಿಸುತ್ತೇನೆ. ಹಿಂದಿನ ಭಾರಿ ಸಹ ಟಿಕೆಟ್ ತಪ್ಪಿಸಲು ಓಡಾಡಿದ್ದರು. ಸೇಡಿನ ರಾಜಕಾರಣಿ ಎಂದು ಟೀಕಿಸಿದ್ದಾರೆ.

## ರಮೇಶ ಜಾರಕಿಹೊಳಿ ನಾಮಪತ್ರ ಸಲ್ಲಿಕೆ




ಗೋಕಾಕ: ಗೋಕಾಕ ಮತಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ರಮೇಶ ಜಾರಕಿಹೊಳಿ ಅವರು ಗುರುವಾರ ನಾಮಪತ್ರ ಸಲ್ಲಿಸಿದರು.

ಗುರುವಾರ ಶುಭ ಮೂಹರ್ತದಲ್ಲಿ ತಮ್ಮ ಆಪ್ತರೊಂದಿಗೆ ನಗರದ ಮಿನಿ ವಿಧಾನಸೌದಕ್ಕೆ ಆಗಮಿಸಿದ ಬಿಜೆಪಿ ಅಧಿಕೃತ ಅಭ್ಯರ್ಥಿ ರಮೇಶ ಜಾರಕಿಹೊಳಿ ಅವರು ಚುನಾವಣಾಧಿಕಾರಿ ಗೀತಾ ಕೌಲಗಿ ಅವರಿಗೆ ತಮ್ಮ ಉಮೇದುವಾರಿಕೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಟಿ.ಆರ್. ಕಾಗಲ್, ಚಿದಾನಂದ ದೇಮಶೆಟ್ಟಿ , ಲಕ್ಷ್ಮಿಕಾಂತ ಎತ್ತಿನಮನಿ ಉಪಸ್ಥಿತ–ರಿದ್ದರು.




ಬೈಲಹೊಂಗಲ ಕ್ಷೇತ್ರದ ಆಕಾಂಕ್ಷಿ ಡಾ.ವಿಶ್ವನಾಥ ಪಾಟೀಲ್ ಬೆಂಬಲಿಗರು ಪ್ರತಿಭಟನೆ ನಡೆಸಿದರು.

## ಪಾಕ್‌ನಿಂದ ಬಂದ ಡ್ರೋಣ್ ಹೊಡೆದುರುಳಿಸಿದ ಸೇನಾಪಡೆ: ಎಕೆ 47 ರೈಫಲ್, 2 ಲಕ್ಷ ನಗದು ಪತ್ತೆ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಗಡಿ ಜಿಲ್ಲೆ ರಜೌ–ರಿಯ ಗಡಿ ನಿಯಂತ್ರಣ ರೇಖೆ (ಎಲ್‌ಒಸಿ) ಬಳಿ ಭದ್ರತಾ ಪಡೆಗಳು ಪಾಕಿಸ್ತಾನದ ಡ್ರೋಣ್' ವೊಂದನ್ನು ಹೊಡೆದುರುಳಿಸಿವೆ.

ಏಪ್ರಿಲ್ 12 ಮತ್ತು 13 ರ ಮಧ್ಯರಾತ್ರಿಯ ಸಮಯದಲ್ಲಿ, ಸುದರ್ಬಾನಿ ಸೆಕ್ಟರ್‌ನ ರಜೌ–ರಿಯ ಬೆರಿ ಪಟ್ಟನ್ ಪ್ರದೇಶದ ಗಡಿ ನಿಯಂತ್ರಣ ರೇಖೆ



ಬಳಿ ಅನುಮಾನಾಸ್ಪದ ಚಲನೆಯೊಂದನ್ನು ಭದ್ರತಾ ಪಡೆಗಳು ಪತ್ತೆಹಚ್ಚಿದ್ದವು. ಕೂಡಲೇ ಗುಂಡು ಹಾಕಿ ಡ್ರೋಣ್'ನ್ನು ಹೊಡೆದುರುಳಿ ಸಲಾಯಿತು ಎಂದು ಅಧಿಕಾ–ರಿಗಳು ಮಾಹಿತಿ ನೀಡಿದ್ದಾರೆ.

ಹೊಡೆದು ರುಳಿಸಲಾದ ಡ್ರೋಣ್ ನಲ್ಲಿ 131 ಸುತ್ತು ಏಕೆ–47. 5 ನಿಯತಕಾಲಿಕೆಗಳು ಹಾಗೂ ರೂ.2 ಲಕ್ಷ ನಗದನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಡ್ರೋಣ್ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಎಲ್‌ಒಸಿಗೆ ಸಮೀಪವಿರುವ ಹಲವು ಗ್ರಾಮಗಳಲ್ಲಿ ಸೇನೆ ಮತ್ತು ಪೊಲೀಸರು ಭಾರಿ ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ಚಟುವಟಿ–ಕೆಗಳಿಗೆ ಉತ್ತೇಜನ ನೀಡಲು ಈ ವಸ್ತುಗಳನ್ನು ಸಾಗಿಸಲು ಪದೇ ಪದೇ ಪ್ರಯತ್ನಗಳನ್ನು ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

## ದಾಖಲೆ ಇಲ್ಲದೇ 8 ಲಕ್ಷ ರೂ. ಪೊಲೀಸ್ ವಶಕ್ಕೆ



ರಾಯಬಾಗ : ಬೆಳಗಾವಿ ಜಿಲ್ಲೆಯ ರಾಯಬಾಗ ತಾಲ್ಲೂಕಿನ ಕುಡಚಿಂ–ಚೆಕ್ಪೋಸ್ಟ್ನಲ್ಲಿ 8 ಲಕ್ಷ ಹಣವನ್ನು ವಶಪಡಿಸಿಕೊಳ್ಳಲಾಗಿದೆ.

ಮಿರಜ್ ನಿಂದ ಮುಗಳಖೋಡಕ್ಕೆ ಹೊರಟಿದ್ದ ಕಾರೊಂದನ್ನು ತಡೆದು ತಪಾಸಣೆ ನಡೆಸಲಾಯಿತು.

ಕಾರಿನ ಡ್ರೈವರ್ ಲೆಂಕಪ್ಪ ಲಕ್ಕಪ್ಪ ಚೌಡಕಿ ಎಂದು ತಿಳಿದುಬಂದಿದೆ. ತಪಾಸಣೆ ನಡೆಸಿದಾಗ 8 ಲಕ್ಷ ನಗದು ಪತ್ತೆಯಾಗಿದೆ. ಪ್ರಾಥಮಿಕ ವಿಚಾರಣೆ ವೇಳೆ ದಾಖಲೆ ಇಲ್ಲದಿರುವುದು ತಿಳಿದುಬಂದಿದೆ.


## ವಿಶ್ವ ಹಿಂದೂ ಪರಿಷತ್ ಅಧ್ಯಕ್ಷರ ಕಾರಿನ ಮೇಲೆ ಗುಂಡಿನ ದಾಳಿ

ಮಡಿಕೇರಿ: ವಿಶ್ವ ಹಿಂದೂ ಪರಿಷತ್‌ನ ಕೊಡಗು ಜಿಲ್ಲಾಧ್ಯಕ್ಷರ ಕಾರಿನ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿರುವ ಘಟನೆ ಮಡಿಕೇರಿಯಲ್ಲಿ ನಡೆದಿದೆ.

ಗುರುವಾರ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದು, ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ಕೊಡಗು ಜಿಲ್ಲಾಧ್ಯಕ್ಷರು ಹಾಗೂ ವೃತ್ತಿಯಲ್ಲಿ ವಕೀಲರಾಗಿರುವ ಪಿ ಕೃಷ್ಣ ಮೂರ್ತಿಯವರು ಪ್ರಾಣಾಪಾಯದಿಂದ ಪಾರಾಗಿದ್ದಾರೆಂದು ತಿಳಿದುಬಂದಿದೆ.

ಈ ಸಂಬಂಧ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ವೃತ್ತಿಯಲ್ಲಿ ವಕೀಲರಾದ ಪಿ ಕೃಷ್ಣ ಮೂರ್ತಿ ಅವರು 2021 ರಿಂದ ವಿಶ್ವ ಹಿಂದೂ ಪರಿಷತ್ತಿನಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ರಾಜ್ಯಾದ್ಯಂತ



ಹಿಂದೂ ಕಾರ್ಯಕರ್ತರ ವಿರುದ್ಧ ದಾಖಲಾಗಿರುವ ಹಲವಾರು ಪ್ರಕರಣಗಳ ವಿರುದ್ಧ ಹೋರಾಡಲು ಕೃಷ್ಣಮೂರ್ತಿಯವರು ನ್ಯಾಯಾಲಯಕ್ಕೆ ಹಾಜರಾಗುತ್ತಿರುತ್ತಾರೆ.

ಬುಧವಾರ ಸಂಜೆ, ಪಿ ಕೃಷ್ಣ ಮೂರ್ತಿ ಅವರು ಮಡಿಕೇರಿಯಲ್ಲಿರುವ ತಮ್ಮ ಕಚೇರಿಯಿಂದ ಹೊರಟು ಸಂಜೆ 7 ಗಂಟೆ ಸುಮಾರಿಗೆ ಚೆಟ್ಟಳ್ಳಿಯಲ್ಲಿರುವ ತಮ್ಮ ಸಹೋದ್ಯೋಗಿ ಮತ್ತು ಸಹ ವಕೀಲ ಬಿ.ಯು. ಕರಿಯಪ್ಪ ಅವರನ್ನು ಭೇಟಿ ಮಾಡಿದ್ದು, ನಂತರ ಇಬ್ಬರೂ ಕುಶಾಲನಗರದ ಕಡೆಗೆ ಹೊರಟು ವಿಎಚ್‌ಪಿ ಕಾರ್ಯಕರ್ತ ವಿನು ಮತ್ತು ಭಜರಂಗದಳದ ಕಾರ್ಯಕರ್ತ ಶಿವಸ್ವಾಮಿ ಅವರನ್ನು ಭೇಟಿ ಮಾಡಿ ಸಂಘಟನೆಗಳ ಕಾರ್ಯವೈಖರಿ ಕುರಿತು ಚರ್ಚೆ ನಡೆಸಿದರು.

ನಾಲ್ವರು ಕುಶಾಲನಗರದ ಸ್ಥಳೀಯ ರೆಸ್ಟೋರೆಂಟ್‌ನಲ್ಲಿ ರಾತ್ರಿ ಊಟ ಮಾಡಿದ ನಂತರ ಕೃಷ್ಣಮೂರ್ತಿ ಮತ್ತು ಕ–ರಿಯಪ್ಪ ಚೆಟ್ಟಳ್ಳಿಗೆ ತೆರಳಿದ್ದಾರೆ. ರಾತ್ರಿ 9.50ರ ಸುಮಾರಿಗೆ ಇಬ್ಬರೂ ಚೆಟ್ಟಳ್ಳಿ ತಲುಪಿದ್ದು, ಕೃಷ್ಣಮೂರ್ತಿ ಅವರು ಕಾ–ರಿಯಪ್ಪ ಅವರನ್ನು ಪೊನ್ನತ್ಮೊಟ್ಟೆಗೆ ಡ್ರಾಪ್ ಮಾಡಿದ್ದಾರೆ. ಬಳಿಕ ಚೆಟ್ಟಳ್ಳಿ ರಸ್ತೆ ಮೂಲಕ ಮಡಿಕೇರಿ ಕಡೆಗೆ ಹೊರಟಿದ್ದಾರೆ.

ರಾತ್ರಿ 11.05 ರ ಸುಮಾರಿಗೆ ಕಾರಿನಲ್ಲಿ ಹೋಗುತ್ತಿದ್ದ. ಅಬ್ಯಾಲ ತಲುಪಿದಾಗ ದೊಡ್ಡ ಶಬ್ದವೊಂದು ಕೇಳಿಸಿತು. ಗುಂಡುವ ದಾಳಿಯಿಂದ ಕಾರಿನ ಎಡಭಾಗದ ಬಾಗಿಲಿನ ಕಿಟಕಿ ಒಡೆದು ಹೋಗಿತ್ತು. ಈ ವೇಳೆ ಕಾರಿನಿಂದ ಇಳಿದು ಓಡಿದೆ. ದುಷ್ಕರ್ಮಿಗಳು ಬಂದೂಕಿನಿಂದ ಗುಂಡು ಹಾರಿಸಿದ್ದರು. ಆದರೆ, ಅದು ಗುರಿ ತಪ್ಪಿತ್ತು ಎಂದು ಕೃಷ್ಣಮೂರ್ತಿಯವರು ಹೇಳಿದ್ದಾರೆ.

ಘಟನೆ ಬಳಿಕ ಪೊಲೀಸ್ ಠಾಣೆಗೆ ತೆರಳಿ ದೂರು ದಾಖಲಿಸಿದೆ. ಈ ಸಂಬಂಧ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದು, ತನಿಖೆ ಕೈಗೊಂಡಿದ್ದಾರೆಂದು ತಿಳಿಸಿದ್ದಾರೆ.

ವಕೀಲ ಕೃಷ್ಣಮೂರ್ತಿ ಮೇಲಿನ ಹತ್ಯೆ ಯತ್ನ ಖಂಡಿಸಿದ ವಕೀಲರ ಸಂಘದ ಸದಸ್ಯರು ದುಷ್ಕರ್ಮಿಗಳ ವಿರುದ್ಧ ಶೀಘ್ರ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಒತ್ತಾಯಿಸಿದ್ದಾರೆ.

## ರಾಜ್ಯದಲ್ಲಿ ಮತ್ತೆ ಆತಂಕ ಸೃಷ್ಟಿಸುತ್ತಿರುವ ಕೋವಿಡ್

ಬೆಂಗಳೂರು : ದಿನಕಳೆಯುತ್ತಿದ್ದಂತೆ ನೆರೆ ರಾಜ್ಯಗಳಲ್ಲಿ ಮಹಾಮಾರಿ ಕೋವಿಡ್ ಸೋಂಕು ಹೆಚ್ಚಾಗುತ್ತಲೇ ಇದ್ದು, ಈ ಬೆಳವಣಿಗೆ ರಾಜ್ಯದಲ್ಲೂ ಆತಂಕವನ್ನು ಹೆಚ್ಚಿಸಿದೆ. ಆದರೆ, ಸರ್ಕಾರ ಯಾವುದೇ ರೀತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳದೆ ಚುನಾವಣೆಗೆ ಸಿದ್ಧತೆಗಳನ್ನು ನಡೆಸುತ್ತಿದೆ.

ಕೋವಿಡ್ ಸೋಂಕು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ದೆಹಲಿ, ಹರಿಯಾಣ, ಪುದುಚೇರಿ (ಪಾಂಡಿಚೇರಿ), ರಾಜಸ್ಥಾನ, ಕೇರಳ, ಮುಂಬೈ ಮತ್ತು ಉತ್ತರ ಪ್ರದೇಶ ಸೇರಿದಂತೆ ಹಲವಾರು ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿ ಕೋವಿಡ್ ಪರೀಕ್ಷೆಯನ್ನು ಹೆಚ್ಚಿಸಿ, ಮಾಸ್ಕ್‌ಗಳನ್ನು ಕಡ್ಡಾಯ ಮಾಡಲಾಗಿದೆ. ಆದರೆ, ರಾಜ್ಯ ಆರೋಗ್ಯ ಇಲಾಖೆ ಮಾತ್ರ ಈ ಕುರಿತು ಯಾವದೇ ರೀತಿಯ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ ಎಂದು ತಿಳಿದುಬಂದಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ (ಎಚ್–ಎಫ್‌ಡಬ್ಲ್ಯೂಡಿ) ಪ್ರಧಾನ ಕಾರ್ಯದರ್ಶಿ ಅನಿಲ್ ಕುಮಾರ್ ಟಿಕೆ ಅವರು ಮಾತನಾಡಿ, ಮಾಸ್ಕ್ ಬಳಕೆಯನ್ನು ಜಾರಿಗೊಳಿಸುವ ಕುರಿತು ಯಾವುದೇ ರೀತಿಯ ಚರ್ಚೆಗಳು ನಡೆದಿಲ್ಲ ಎಂದು ಹೇಳಿದ್ದಾರೆ.

ಕೋವಿಡ್ ಸೋಂಕು ಹೆಚ್ಚಾಗುತ್ತಿದ್ದು, ನೆರೆ ರಾಜ್ಯ ಕೇರಳದಲ್ಲಿ ಅತೀ ಹೆಚ್ಚು ಸಕ್ರಿಯ ಪ್ರಕರಣಗಳು ಕಂಡು ಬಂದಿದೆ. ಹೀಗಾಗಿ ಅಗತ್ಯ ಬಿದ್ದರೆ ರಾಜ್ಯ ಸರ್ಕಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ತಿಳಿಸಿದ್ದಾರೆ.

ಇತರ ರಾಜ್ಯಗಳಿಗೆ ಹೋಲಿಸಿದರೆ, ಏಪ್ರಿಲ್ 12 ರವರೆಗೆ ದಾಖಲಾದ ಸಕ್ರಿಯ ಕೋವಿಡ್ ಪ್ರಕರಣಗಳಲ್ಲಿ ಕರ್ನಾಟಕವು ಒಂಬತ್ತನೇ ಸ್ಥಾನದಲ್ಲಿದೆ. ಕಳೆದ ಕೆಲವು ವಾರಗಳಲ್ಲಿ ಕರ್ನಾಟಕದಲ್ಲಿ ಕೋವಿಡ್ ಪ್ರಕರಣಗಳು ಕ್ರಮೇಣ ಏರಿಕೆ ಕಂಡಿದ್ದು, ಮಾರ್ಚ್ 31 ರಂದು 12 ಪ್ರಕರಣಗಳು ಕಂಡು ಬಂದಿವೆ. ಈ ಮೂಲಕ ಸಕ್ರಿಯ ಪ್ರಕರಣಗಳ ಸಂಖ್ಯೆ 1,000 ಗಡಿ ದಾಟಿದೆ. ಇನ್ನು ಸಾರಿ ಹಾಗೂ ಐಎಲ್‌ಐ, ಹೆಚ್1ಎನ್1 ಮತ್ತು ಹೆಚ್3ಎನ್2 ಪ್ರಕರಣಗಳಲ್ಲಿ ಕ್ರಮೇಣ ಏರಿಕೆ ಕಂಡು ಬಂದಿದ್ದು, ಆಸ್ಪತ್ರೆಗೆ ದಾಖಲಾಗುತ್ತಿರುವವರ ಸಂಖ್ಯೆಯಲ್ಲೂ ಏರಿಕೆಯಾಗಿವೆ.

## ಚುನಾವಣಾ ಪ್ರಕಟನೆ

ಗೋಕಾಕ: ಚುನಾವಣಾ ಆಯೋಗವು ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಗೋಕಾಕ ವಿಧಾನಸಭಾ ಮತಕ್ಷೇತ್ರದ ಚುನಾವಣಾ ವೆಚ್ಚ ವಿಕ್ಷಕರನ್ನಾಗಿ ಮಧುಕರ ಎ.ವಿ.ಇ.ಎಸ್ (ಬಿ.ಡಿ.ಟಿ. ಆಯ್.ಆರ್.ಎಸ್) ಅವರನ್ನು ನೇಮಕ ಮಾಡಲಾಗಿದ್ದು ಅವರ ಸಂಪರ್ಕಕ್ಕಾಗಿ ನಗರದ ಪ್ರವಾಸಿ ಮಂದಿರದ ಹಾಲ್ ನಂ 2 ದೂರವಾಣಿ ನಂ 08332–227606 ಮೊ–9980127719 ಇಮೇಲ್ ಆಯ್‌ಡಿ ಜಠರಠಇಚಿಇ2023@ಲಿಟಚಿಟ.ಛಿಠಟ ಚುನಾವಣೆಯ ನಿಮಿತ್ಯ ಯಾವುದೇ ದೂರುಗಳಿದ್ದರೇ ಸಂಪರ್ಕಿಸಬೇಕೆಂದು ಚುನಾವಣಾಧಿಕಾರಿಗಳು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಮಾಹಿತಿಗಾಗಿ ಚುನಾವಣಾ ವೆಚ್ಚ ವೀಕ್ಷಕರ ಕೊಠಡಿ ಸ್ಥಾಪನೆ

ಬೆಳಗಾವಿ: ಕರ್ನಾಟಕ ವಿಧಾನ ಸಭಾ ಸಾರ್ವತ್ರಿಕ ಚುನಾವಣೆ 2023 ರ ಹಿನ್ನಲೆಯಲ್ಲಿ ಬೆಳಗಾವಿ ಮಹಾನಗರ ಪಾಲಿಕೆಯ 11 – ಬೆಳಗಾವಿ ಉತ್ತರ ಹಾಗೂ 12– ಬೆಳಗಾವಿ ದಕ್ಷಿಣ ವಿಧಾನ ಸಭಾ ಮತಕ್ಷೇತ್ರದ ಖರ್ಚು ವೆಚ್ಚ ವೀಕ್ಷಕರಾದ ಅತುಲ ಪಾಂಡೆ ಅವರು ಸಾರ್ವಜನಿಕರಿಗೆ ಮಾಹಿತಿಗಾಗಿ ಲಭ್ಯವಿರುತ್ತಾರೆ.

ಬೆಳಗಾವಿ ಮಹಾನಗರ ಪಾಲಿಕೆಯ ಮುಖ್ಯ ಕಚೇರಿಯ ಕೊಠಡಿ ಸಂಖ್ಯೆ– 04, ದೂರವಾಣಿ ಸಂಖ್ಯೆ 0831–2405340 ಹಾಗೂ ಸರ್ಕಾರಿ ವಸತಿ ಗೃಹ (ಸರ್ಕ್ಯೂಟ್ ಹೌಸ್ ಬೆಳಗಾವಿ) ದೂರವಾಣಿ ಸಂಖ್ಯೆ 7044092828 ಮೂಲಕ ಸಂಪರ್ಕಿಸಿ ಸಾರ್ವಜನಿಕರು ಮಾಹಿತಿ ಪಡೆಯಬಹುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಹಾಗೂ 12– ಬೆಳಗಾವಿ ದಕ್ಷಿಣ ಮತಕ್ಷೇತ್ರದ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಸಾಯಿಖಾನೆ/ಮಾಂಸಾಹಾರಿ ಅಂಗಡಿ ಬಂದ್

ಬೆಳಗಾವಿ: ಡಾ॥ ಬಾಬಾಸಾಹೇಬ ಅಂಬೇಡ್ಕರ ರವರ ಜಯಂತಿ ನಿಮಿತ್ಯ ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲ ಕಸಾಯಿಖಾನೆ/ಮಾಂಸಾಹಾರಿ ಅಂಗಡಿಗಳನ್ನು ಶುಕ್ರವಾರ ಏಪ್ರಿಲ್.14 2023 ರಂದು ಬಂದು ಮಾಡಿ ಸಹಕರಿಸುವಂತೆ ಕೋರಲಾಗಿದೆ. ಸದರಿ ದಿನದಂದು, ಕಸಾಯಿಖಾನೆ/ಮಾಂಸಾಹಾರಿ ಅಂಗಡಿ ಮಾಲೀಕರು ಆದೇಶವನ್ನು ಉಲ್ಲಂಘನೆ ಮಾಡಿರುವುದು ಕಂಡು ಬಂದರೆ ಅಂತಹ ಮಾಲೀಕರುಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಆದೇಶಿಸಿದ್ದಾರೆ.

## 12–ಬೆಳಗಾವಿ ದಕ್ಷಿಣ ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023 ರ ನಾಮಪತ್ರ ಸಲ್ಲಿಕೆ

ಬೆಳಗಾವಿ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023 ಕುರಿತಂತೆ 12–ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸಿದ್ದು, ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳು ಅವರ ನಾಮಪತ್ರವನ್ನು ಈ ಕೆಳಕಂಡ ವಿಳಾಸದಲ್ಲಿ ಸಲ್ಲಿಸಬಹುದು ಎಂದು 12–ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರ ಚುನಾವಣಾಧಿಕಾರಿಗಳು ಮತ್ತು ಮಹಾನಗರ ಪಾಲಿಕೆ ಆಯುಕ್ತರಾದ ಡಾ॥ ರುದ್ರೇಶ್ 'ಎಸ್ ಘಾಳಿ ಅವರು ತಿಳಿಸಿದ್ದಾರೆ.

ನಾಮಪತ್ರವನ್ನು ಸಲ್ಲಿಸುವ ವಿಳಾಸ : 12–ಬೆಳಗಾವಿ ದಕ್ಷಿಣ ವಿಧಾನಸಭಾ ಮತಕ್ಷೇತ್ರ, ಪಾಲಿಕೆಯ ಆಯುಕ್ತರವರ ಕೊಠಡಿ, ಮಹಾನಗರ ಪಾಲಿಕೆ, ಸುಭಾಷನಗರ, ಬೆಳಗಾವಿ. ದೂರವಾಣಿ ಸಂಖ್ಯೆ:0831–2405304.

# ಬಿಜೆಪಿ ನಾಯಕರು ಯಾವ ಕಾರಣಕ್ಕೂ ಪಕ್ಷ ಬಿಡಬಾರದು: ಬಾಲಚಂದ್ರ ಜಾರಕಿಹೊಳಿ ಮನವಿ



ಮೂಡಲಗಿ : ಬಿಜೆಪಿಯಿಂದ ಈಗಾಗಲೇ ಅಭ್ಯರ್ಥಿಗಳ ಪಟ್ಟಿಯು ಬಿಡುಗಡೆಗೊಂಡಿದ್ದು, ಟಿಕೇಟ್ ಮೇಲೆ ಕಣ್ಣಿಟ್ಟು ನಿರಾಶೆಗೊಂಡಿರುವ ಆಕಾಂಕ್ಷಿಗಳು ಯಾವ ಕಾರಣ–ಕ್ಕೂ ಪಕ್ಷ ಬಿಡಬಾರದು. ಆತುರದ ನಿರ್ಧಾರವನ್ನು ಕೈಗೊಳ್ಳಬಾರದು. ಇಷ್ಟರಲ್ಲಿಯೇ ಪಕ್ಷದ ವ–ರಿಷ್ಠರು ಅಸಮಧಾನಿತರನ್ನು ಭೇಟಿ ಮಾಡಿ ಚರ್ಚಿಸಲಿದ್ದಾರೆ ಎಂದು ಶಾಸಕ ಹಾಗೂ ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ತಾಲೂಕಿನ ಕಲ್ಲೋಳಿ ಪಟ್ಟಣದ ಬಸವಂತ ದಾಸನವರ ತೋಟದಲ್ಲಿ ಬುಧವಾರ ಸಂಜೆ ಜರುಗಿದ ಮೂಡಲಗಿ, ನಾಗನೂರ, ಕಲ್ಲೋಳಿ ಮತ್ತು ಅರಭಾವಿ ಪಟ್ಟಣಗಳ ಬಿಜೆಪಿ ಕಾರ್ಯಕರ್ತರು, ಮುಖಂಡರು ಮತ್ತು ಹಿತೈಸಿಗಳ ಸಭೆಯನ್ನು ಉದ್ಧೇಶಿಸಿ ಮಾತನಾಡಿದ ಅವರು, ಬಿಜೆಪಿಯು ಮತ್ತೊಮ್ಮೆ ರಾಜ್ಯದಲ್ಲಿ ಪೂರ್ಣ ಪ್ರಮಾಣದಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿಯ ವರಿಷ್ಠರು ಎಲ್ಲ ಸಮುದಾಯಗಳನ್ನು ಕ್ರೋಢಿಕರಿಸಿ ಅಳೆದು ತೂಗಿ ಉತ್ತಮ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದಾರೆ. ಟಿಕೇಟ್ ಆಕಾಂಕ್ಷಿಗಳಾಗಿದ್ದ ಕೆಲವರಿಗೆ ಪಕ್ಷದ ಟಿಕೇಟ್ ನೀಡಿಲ್ಲ. ಇದರಿಂದ ಕೆಲವರಿಗೆ ನಿರಾಸೆಯಾಗಿರಬಹುದು. ಇಷ್ಟರಲ್ಲಿಯೇ ಎಲ್ಲವೂ ಸರಿಯಾಗಲಿದೆ. ಯಾರೂ ಪಕ್ಷ ಬಿಡಬಾರದು. ದುಡುಕಿನ ನಿರ್ಧಾರ ತೆಗೆದುಕೊಳ್ಳಬಾರದು ಎಂದು ಅವರು ಮನವಿ ಮಾಡಿದರು.

ದೇವರು, ತಾಯಿ–ತಂದೆ ಹಾಗೂ ಜನರ ಆಶೀರ್ವಾದದಿಂದ ಸತತ 6ನೇ ಬಾರಿಗೆ ಕ್ಷೇತ್ರದಿಂದ ಸ್ಪರ್ಧಿಸುವ ಅವಕಾಶ ಒದಗಿಬಂದಿದೆ. ನನ್ನ ಮೇಲೆ ಪ್ರೀತಿ–ವಿಶ್ವಾಸವನ್ನಿಟ್ಟು ಪಕ್ಷದ ಮುಖಂಡರು ಅರಭಾವಿ ಕ್ಷೇತ್ರದಿಂದ ಬಿಜೆಪಿ ಟಿಕೇಟ್ ನೀಡಿದ್ದಾರೆ. ಅವ–ರಿಗೆ ಸದಾ ಆಭಾರಿಯಾಗಿದ್ದೇನೆ ಎಂದು ಅವರು ತಿಳಿಸಿದರು.

ಪ್ರತಿ ಬೂತ್ ಮಟ್ಟದಲ್ಲಿ ನಮಗೆ ಮತ ಬೀಳಲು ಕಾರ್ಯಕರ್ತರು ಮನಸಾಪೂರ್ವಕವಾಗಿ ಕೆಲಸ ಮಾಡಬೇಕು. ನಮ್ಮ ಪಕ್ಷದ ಸಾಧನೆಗಳು ಮತ್ತು ಕಳೆದ 20 ವರ್ಷಗಳಿಂದ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಮತದಾರರಿಗೆ ತಿಳಿಸುವ ಕೆಲಸವನ್ನು ಮಾಡಬೇಕಿದೆ. ಎಲ್ಲರೂ ಒಗ್ಗಟ್ಟಾಗಿ ಈ ಚುನಾವಣೆಯಲ್ಲಿ ಬಿರುಸಿನ ಪ್ರಚಾರ ಕೈಗೊಳ್ಳಬೇಕೆಂದು ಅವರು ಹೇಳಿದರು.

ಮುಹೂರ್ತ ನೋಡಿಕೊಂಡು ನಾಮಪತ್ರದ ದಿನಾಂಕವನ್ನು ನಿಗದಿ ಮಾಡುತ್ತೇವೆ. ಮೊದಲು 5 ಜನರನ್ನು ಕರೆದುಕೊಂಡು ನಾಮಪತ್ರ ಸಲ್ಲಿಸುತ್ತೇನೆ. ನಂತರ ಮತ್ತೊಂದು ಸಲ ಕ್ಷೇತ್ರದ ಪ್ರಮುಖರನ್ನು ಸೇ–ರಿಸಿಕೊಂಡು ಮೂಡಲಗಿಯಲ್ಲಿ ಚುನಾವಣಾಧಿಕಾರಿಗಳಿಗೆ ಬಿಜೆಪಿ ಅಧಿಕೃತ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಲಾಗುವುದು ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಭಾಸ ಪಾಟೀಲ ಮತ್ತು ಮುಖಂಡ ಬಸವರಾಜ ಮಾಳೇದವರ ಮಾತನಾಡಿ, ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಸತತ 6ನೇ ಬಾರಿಗೆ ಈ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ. ರಾಜ್ಯದಲ್ಲಿಯೇ ಅತೀ ಹೆಚ್ಚಿನ ಲೀಡ್ ನೀಡಿ ರಾಜ್ಯದಲ್ಲಿ ಮತ್ತೊಮ್ಮೆ ರಚನೆಯಾಗಲಿರುವ ಬಿಜೆಪಿ ಸರ್ಕಾರದಲ್ಲಿ ಸಚಿವರಾಗುವ ಅವಕಾಶ ಒದಗಿಬರಲಿದೆ. ಜಿಲ್ಲೆಯಲ್ಲಿ ಬಿಜೆಪಿಯಿಂದ ಹೆಚ್ಚಿನ ಅಭ್ಯರ್ಥಿಗಳು ಆಯ್ಕೆಯಾಗಲು ಬಾಲಚಂದ್ರ ಜಾರಕಿಹೊಳಿ ಅವರು ಜಿಲ್ಲೆಯಲ್ಲಿ ಅಭ್ಯರ್ಥಿಗಳ ಪರ ಪ್ರಚಾರ ಕೈಗೊಳ್ಳಬೇಕು. ನಾವೆಲ್ಲರೂ ಅವರ ಪರ ಪ್ರಚಾರ ಕೈಗೊಂಡು ಅತೀ ಹೆಚ್ಚಿನ ಅಂತರದಿಂದ ಗೆಲ್ಲಿಸಿಕೊಡುತ್ತೇವೆ ಎಂದು ಹೇಳಿದರು.

ಪ್ರಭಾಶುಗರ ನಿರ್ದೇಶಕರಾದ ಬಸಗೌಡ ಪಾಟೀಲ, ಕೆಂಚನಗೌಡ ಪಾಟೀಲ, ಅರಭಾವಿ ಬಿಜೆಪಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಮೂಡಲಗಿ ಪುರಸಭೆ ಅಧ್ಯಕ್ಷ ಹನಮಂತ ಗುಡ್ಲಮನಿ, ಸುಭಾಸ ಕುರಬೇಟ, ಬಿ.ಬಿ. ದಾಸನವರ, ವಿಠ್ಠಲ ಪಾಟೀಲ, ಶಂಕರ ಬಿಲಕುಂದಿ, ಲಾಲಸಾಬ ಸಿದ್ಧಾಪೂರ, ಚಂದ್ರು ಬೆಳಗಲಿ, ರಮೇಶ ಸಣ್ಣಕ್ಕಿ, ಜಯಾನಂದ ಪಾಟೀಲ, ಬಿಜೆಪಿ ಪದಾಧಿಕಾರಿಗಳು, ಮೂಡಲಗಿ, ನಾಗನೂರ, ಕಲ್ಲೋಳಿ ಹಾಗೂ ಅರಭಾವಿ ಪಟ್ಟಣಗಳ ಅನೇಕ ಕಾರ್ಯಕರ್ತರು ಉಪಸ್ಥಿತ–ರಿದ್ದರು. ಪರಸಪ್ಪ ಬಬಲಿ ಸ್ವಾಗತಿಸಿ, ನಿರೂಪಿಸಿದರು.

## ಗ್ರಾಮಾಂತರ ಕ್ಷೇತ್ರದಲ್ಲಿ ಶ್ರೀರಾಮುಲು ಭರ್ಜರಿ ಪ್ರಚಾರ



ಬಳ್ಳಾರಿ: ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಶ್ರೀರಾಮುಲು ಅವರು ಕ್ಷೇತ್ರದಲ್ಲಿ ಭರ್ಜರಿ ಪ್ರಚಾರವನ್ನು ಅಧಿಕೃತವಾಗಿ ಪ್ರಾರಂಭಿಸಿದರು.

ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಚೇಳ್ಳಗುರ್ಕಿ ಗ್ರಾಮದ ಶ್ರೀರ್ರಿತಾತನವರ ಮಠಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿ, ದರ್ಶನ ಪಡೆದು ತದನಂತರ ಗ್ರಾಮದಲ್ಲಿರುವ ಹಾಲುಮತ ಸಮುದಾಯದವರ ಮನೆಗೆ ತೆರಳಿ ಅಲ್ಲಿ ತಮಗೆ ಮತ ನೀಡಬೇಕೆಂದು ವಿನಂತಿಸುವುದರೊಂದಿಗೆ ಪ್ರಚಾರಕ್ಕೆ ವಿದ್ಯುಕ್ತವಾಗಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಮುಖಂಡರುಗಳಾದ ಹಗ–ರಿಗಾದಿಲಿಂಗಪ್ಪ, ಓಬಳೇಶ್, ಗುರುಲಿಂಗನಗೌಡ, ರಾಮಲಿಂಗಪ್ಪ, ಕಕ್ಕಬೇವಿನಹಳ್ಳಿ ಪ್ರಕಾಶ್, ಕಕ್ಕಬೇವಿನಹಳ್ಳಿ ಹೊನ್ನಪ್ಪ, ಕಕ್ಕಬೇವಿನಹಳ್ಳಿ ಮಲ್ಲಿಕಾರ್ಜುನ ಸೇರಿದಂತೆ ಪಕ್ಷದ ಹಿರಿಯ ಮುಖಂಡರು, ಯುವಕರು, ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಗ್ರಾಮೀಣ ವಿಧಾನಸಭೆ–93ಗೆ ಬಿಜೆಪಿಯಿಂದ ಸ್ಪರ್ಧಿಸಿರುವ ಬಿ.ಶ್ರೀರಾಮುಲು ಅವರ ಪರವಾಗಿ ಅವರ ಪತ್ನಿ ಬಿ.ಭಾಗ್ಯಲಕ್ಷ್ಮಿ ರಾಮುಲು ಅವರು ಮತ ಯಾಚಿಸಿದರು. ರಾಜ್ಯದಲ್ಲಿಯೇ ಹೈ ವೋಲ್ಟೇಜ್ ಕ್ಷೇತ್ರವಾಗಿರುವ ಬಳ್ಳಾರಿ ಗ್ರಾಮೀಣ ಪ್ರದೇಶದಲ್ಲಿ ಮತದಾರರನ್ನು ಕಮಲದತ್ತ ಸೆಳೆಯಲು ಇದೇ ಮೊದಲ ಬಾರಿಗೆ ಮನೆಯಿಂದ ಆಚೆ ಬಂದಿರುವ ಬಿ.ಭಾಗ್ಯಲಕ್ಷ್ಮಿ ಶ್ರೀರಾಮುಲು ಅವರು ಮತದಾರರನ್ನು ಓಲೈಸಲು ಸ್ವ ಇಚ್ಛೆಯಿಂದ ಪ್ರಚಾರ ಕಾರ್ಯದಲ್ಲಿ ಧುಮುಕಿದ್ದಾರೆ.

ಅತ್ಯಂತ ಜಿದ್ದಾ ಜಿದ್ದಿನ ಕಣವಾಗಿ ಮಾರ್ಪಟ್ಟಿರುವ ಬಳ್ಳಾರಿ ಗ್ರಾಮೀಣ ಕ್ಷೇತ್ರದಲ್ಲಿ ತಮ್ಮ ಪತಿಯನ್ನು ಹೇಗಾದರೂ ಮಾಡಿ ಗೆಲ್ಲಿಸಿಕೊಡುವ ಉತ್ಸಾಹದಲ್ಲಿರುವ ಬಿ.ಭಾಗ್ಯಲಕ್ಷ್ಮಿ ಶ್ರೀರಾಮುಲು ಕಮ್ಮರಚೇಡು ಗ್ರಾಮದಿಂದ ಚುನಾವಣಾ ಪ್ರಚಾರ ಆರಂಭಿಸಿದದರು.

## ಕಮಲಕ್ಕೆ ಗುಡ್ ಬೈ ಹೇಳಿದ ಶಶಿಕಾಂತ ನಾಯಕ



ಬೆಳಗಾವಿ : ಬಿಜೆಪಿ ತೊರೆಯುವವರ ಸಂಖ್ಯೆ ಇದೀಗ ಮಹಾಪ್ರವಾಹದಂತೆ ಏರಿಕೆಯಾಗುತ್ತಿದೆ. ಸೊಗಡು ಶಿವಣ್ಣ, ಲಕ್ಷ್ಮಣ ಸವದಿ, ನೆಹರು ಓಲೆಕಾರ, ಎಂ.ಪಿ. ಕುಮಾರಸ್ವಾಮಿ ಸೇರಿದಂತೆ ಅತಿರಥ ಮಹಾರಥರು ಬಿಜೆಪಿ ತೊರೆಯುತ್ತಿದ್ದಾರೆ. ಇದೀಗ ಆ ಸಾಲಿಗೆ ಬೆಳಗಾವಿ ಜಿಲ್ಲೆಯ ರೈತ ನಾಯಕ ಶಶಿಕಾಂತ ನಾಯಕ ಹೊಸ ಸೇರ್ಪಡೆ.

ಬೆಳಗಾವಿಯಲ್ಲಿ ಗುರುವಾರ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯಲ್ಲಿ ನನಗೆ ಸಿಗಬೇಕಾದ ಸ್ಥಾನಮಾನ ಸಿಗುತ್ತಿಲ್ಲ. ಒಂದು ಕಾಲದಲ್ಲಿ ಬೆಳಗಾವಿಯಲ್ಲಿ ಬಿಜೆಪಿ ಕಟ್ಟಿ ಬೆಳೆಸಿದ ನನಗೆ ಪಕ್ಷ ಕಡೆಗಣಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಒಟ್ಟಾರೆ ಒಂದು ಕಾಲದಲ್ಲಿ ಬಿಜೆಪಿಯನ್ನು ಬೃಹದಾಕಾರವಾಗಿ ಕಟ್ಟಿ ಬೆಳೆಸಿದ ನಾಯಕರು ಒಬ್ಬೊಬ್ಬರೇ ಈಗ ತೊರೆಯುತ್ತಿರುವುದು ಅತ್ಯಂತ ಕಳವಳದ ಸಂಗತಿ.

ಬೆಳಗಾವಿ ನಗರಕ್ಕೆ ಸೀಮಿತವಾಗಿದ್ದ ಬಿಜೆಪಿಯನ್ನು ಹಳ್ಳಿ ಮಟ್ಟದಲ್ಲಿ ಬೆಳೆಸಿದ್ದ ಬಾಬಾಗೌಡರು ಹಾಗೂ ನಾನು ಆದರೆ ಈ ಬಾರಿ ಹುಕ್ಕೇರಿ ಮತಕ್ಷೇತ್ರದಿಂದ ಟಿಕೆಟ್ ನೀಡದೆ ಇರುವುದರಿಂದ ನಾನು ಕತ್ತಿ ಅವರ ಕುಟುಂಬದ ಕಿರುಕುಳದಿಂದ ಬಿಜೆಪಿ ನೀಡಿರುವ ಜವಾಬ್ದಾ–ರಿಗೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಮಾಜಿ ಸಚಿವ ಶಶಿಕಾಂತ ನಾಯಕ ಹೇಳಿದರು.

ಬುಧವಾರ ನಗರದಲ್ಲಿ ಕರೆಯಲಾದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು. ಪಕ್ಷಕ್ಕೆ ದ್ರೋಹ ಮಾಡಿದವ–ರಿಗೆ ಟಿಕೆಟ್ ನೀಡಿದ್ದಾರೆ. ಯಮಕನಮರಡಿ ಯಲ್ಲಿ ಉಸ್ತುವಾರಿ ಹಾಗೂ ಬೆಳಗಾವಿ ಗ್ರಾಮಾಂತರ ಜಿಲ್ಲಾ ಸ್ಥಾನಕ್ಕೆ ಹಾಗೂ ಪ್ರಾಥಮಿಕ ಸದಸ್ಯತ್ವಕ್ಕೆ ಬೆಂಗಳೂರಿಗೆ ತೆರಳಿ ರಾಜೀನಾಮೆ ಸಲ್ಲಿಸುತ್ತೇನೆ ಎಂದರು.

ಕಳೆದ 20 ವರ್ಷದಿಂದ ಬಿಜೆಪಿಯಲ್ಲಿ ವಿವಿಧ ಹುದ್ದೆಗಳಲ್ಲಿ ಕೆಲಸ ಮಾಡಿದ್ದೇನೆ. ಬಿಜೆಪಿ ಹಳ್ಳಿಯ ಮಟ್ಟದಲ್ಲಿ ಇರದ ಪಕ್ಷವನ್ನು ಬಾಬಾಗೌಡ ಹಾಗೂ ನಾವು ಸೇರಿಕೊಂಡು ಪಕ್ಷ ಕಟ್ಟುವ ಕೆಲಸ ಮಾಡಿದ್ದೇವು. ಐದಾರು ಬಾರಿ ಕೆಲಸ ಮಾಡಿದ್ದನ್ನು ನೋಡಿ ಪಕ್ಷ ನನಗೆ ಟಿಕೆಟ್ ನೀಡಿದ್ದರು. ಆಗ ಗೆಲವು ಸಾಧಿಸಿದ್ದೆ. ಅಲ್ಲದೆ ಸಚಿವನಾಗಿಯೂ ಕೂಡ ಕೆಲಸ ಮಾಡಿದ್ದೇನೆ ಎಂದರು.

ಉತ್ತರ ಕರ್ನಾಟಕ ಅಭಿವೃದ್ಧಿ ಯಾಗಬೇಕೆಂದು ಮೊದಲ ಬಾರಿಗೆ ಅಧಿವೇಶ ನಡೆಸಿ ಇಲ್ಲಿ ಸುವರ್ಣ ವಿಧಾನಸೌಧ ನಿರ್ಮಾಣ ಮಾಡಿ ನಿರಂತರ ಕಾರ್ಯ ಚಟುವಟಿಕೆ ಮಾಡಲು ಸಾಧ್ಯವಾಯಿತು ಎಂದು ನೆನಪಿಸಿಕೊಂಡರು.

ಉಮೇಶ ಕತ್ತಿ ಹುಕ್ಕೇರಿ ಮತಕ್ಷೇತ್ರದಿಂದ ಬಿಜೆಪಿಗೆ ಬಂದ ಬಳಿಕ ನನಗೆ ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿದರು. ಅದು ಕೇವಲ 11 ತಿಂಗಳು ಮಾತ್ರ ನೀಡಿತ್ತು. ಪಂಚಾಯತ್ ಕೆಲಸ ಹೆಚ್ಚಿಗೆ ಆಗಿದ್ದಂತೆ ಚಿನ್ನದ ಪದಕ ಬಂದಿದ್ದು ನನ್ನ ಅವಧಿಯಲ್ಲಿ ಎಂದ ಅವರು, ಪಕ್ಷ ನೀಡಿದ ಕೆಲಸವನ್ನು ನಾನು ಚಾಚು ತಪ್ಪದೆ ಮಾಡಿದ್ದೇನೆ ಎಂದರು.

ಉಮೇಶ ಕತ್ತಿ ನಿಧನ ಬಳಿಕ ನಾನು ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಬಳಿಯೂ ಟಿಕೆಟ್ ನೀಡುವಂತೆ ಮನವಿ ಮಾಡಿದ್ದೆ. ಆದರೆ ಈಗಲೂ ನನಗೆ ಅನ್ಯಾಯ ಮಾಡಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಬೂತ್ ಮಟ್ಟದ ಕಾರ್ಯಕರ್ತರ ಸಂಘಟನ ಸಭೆ ಮತ್ತು ಪಕ್ಷ ಸೇರ್ಪಡೆ



ಬಳ್ಳಾರಿ: ಶೀಘ್ರದಲ್ಲಿ ಎದು–ರಿಸಲಿರುವ ಚುನಾವಣೆಗೆ ಬೂತ್ ಮಟ್ಟದಲ್ಲಿ ಕಾರ್ಯಕರ್ತರನ್ನು ಸಂಘಟಿಸಿ ಚುನಾವಣೆಗೆ ಅಣಿಗೊಳಿಸಲು ಕಂಪ್ಲಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ನಾಯಕರಾದ ಟಿ ಹೆಚ್ ಸುರೇಶ್ ಬಾಬುರವರು ಚಿಟಿ–ಗಿನಹಾಳ ಗ್ರಾಮಕ್ಕೆ ತೆರಳಿ, ಏರ್ಪಡಿಸಿದ್ದ ಬೂತ್ ಮಟ್ಟದ ಕಾರ್ಯಕರ್ತರ ಸಂಘಟನಾ ಸಭೆಯಲ್ಲಿ ಭಾಗವಹಿಸಿದರು. ಗ್ರಾಮದಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಕ್ರಮಗಳ ಕು–ರಿತು ಸ್ಥಳೀಯ ಮುಖಂಡರು, ಕಾರ್ಯಕರ್ತರೊಂದಿಗೆ ಮಾಹಿತಿ ಪಡೆದು ಅವುಗಳೆಲ್ಲವನ್ನು ಈಡೇ–ರಿಸುವ ಭರವಸೆ ನೀಡಿದರು.

ಈ ವೇಳೆ ಗ್ರಾಮದ ಹಾಲುಮತ ಸಮುದಾಯದ, ಮತ್ತು ಇನ್ನಿತರ ಸಮುದಾಯದ ಮುಖಂಡರು ಕಾಂಗ್ರೆಸ್ ಪಕ್ಷ ತೊರೆದು ಟಿ ಹೆಚ್ ಸುರೇಶ್ ಬಾಬು ರವರ ನೇತೃತ್ವದಲ್ಲಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾದರು. ಕಾರ್ಯಕ್ರಮದಲ್ಲಿ ಪಕ್ಷದ ಹಿರಿಯರಾದ ಯರಂಗಳಿ ತಿಮ್ಮರೆಡ್ಡಿ, ಪಕ್ಷದ ಹಿರಿಯ ಕಾರ್ಯ ಕರ್ತರು, ಮುಖಂಡರು, ಅಭಿಮಾನಿಗಳು ಜೊತೆಯಲ್ಲಿದ್ದರು.

## ಚುನಾವಣಾಧಿಕಾರಿಗಳ ಕಾರ್ಯಾಲಯದ ಮಾಹಿತಿ

ಬೆಳಗಾವಿ: ಕರ್ನಾಟಕ ವಿಧಾನ ಸಭಾ ಚುನಾವಣೆ 2023 ರ ಕುರಿತು 11–ಬೆಳಗಾವಿ ಉತ್ತರ ವಿಧಾನ ಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಉಪ ಚುನಾವಣಾಧಿಕಾರಿಗಳ ಕಾರ್ಯಾಲಯವನ್ನು ಬೆಳಗಾವಿ ಮಹಾನಗರ ಪಾಲಿಕೆಯ ಮುಖ್ಯ ಕಚೇರಿಯ ಕೊಠಡಿ ಸಂಖ್ಯೆ 01 ರಲ್ಲಿ ಸ್ಥಾಪಿಸಲಾಗಿದೆ

ಏಪ್ರಿಲ್.13 2023 ರಿಂದ ಸದರಿ ಕಚೇರಿಯಲ್ಲಿ ನಾಮಪತ್ರ ಸ್ವೀಕರಿಸಲಾಗುವುದು. ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಚುಣಾವಣಾಧಿಕಾರಿಗಳ ಮಾಹಿತಿ: ಗುರುಸಿದ್ದಯ್ಯ ಹಿರೆಮಠ, ಚುನಾವಣಾಧಿಕಾರಿಗಳು ದೂರವಾಣಿ ಸಂ 0831–2405319, ಸುಹಾಸ ಎಸ್ ಇಂಗಳೆ, ಸಹಾಯಕ ಚುನಾವಾಧಿಕಾರಿಗಳು ದೂರವಾಣಿ ಸಂ 0831–2405319 ಗೆ ಸಂಪರ್ಕಿಸಬಹುದು ಎಂದು 11–ಬೆಳಗಾವಿ ಉತ್ತರ ವಿಧಾನಸಭಾ ಮತಕ್ಷೇತ್ರ ಚುನಾವಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾತಿ ವಿನಾಶದಿಂದ ಸಮ ಸಮಾಜ ನಿರ್ಮಾಣ ಸಾಧ್ಯ: ಅಂಬೇಡ್ಕರ್ ಪ್ರತಿಪಾದನೆ


ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನ ಶಿಲ್ಪಿ ಮತ್ತು ದಲಿತೋದ್ಧಾರಕ ಮಾತ್ರ ಅಲ್ಲ, ಸಮ ಸಮಾಜದ ನಿರ್ಮಾಣಕ್ಕಾಗಿ ಎಲ್ಲ ವರ್ಗಗಳ ಏಳಿಗೆಯ ಕನಸನ್ನು ಕಂಡಿದ್ದ ಮಹಾನ್ ಮಾನವತಾವಾದಿ. ಅವರ ಚಿಂತನೆ ಮತ್ತು ಬರಹಗಳತ್ತ ಒಮ್ಮೆ ಕಣ್ಣಾಡಿಸಿದರೆ ಸಾಕು, ದೇಶ ಸರ್ವ ಜನಾಂಗದ ಶಾಂತಿಯ ತೋಟವಾಗಲು ಏನೆಲ್ಲಾ ಕಾರ್ಯಕ್ರಮಗಳನ್ನು ರೂಪಿಸಿದ್ದರು ಎನ್ನುವುದು ಮನದಟ್ಟಾಗುತ್ತದೆ.ಭ್ರಮಾಲೋಕದಲ್ಲಿ ಮಹಲುಗಳನ್ನು ಕಟ್ಟುವುದಕ್ಕಿಂತ ವಾಸ್ತವದಲ್ಲಿ ಆಗಬೇಕಾದ ಬದಲಾವಣೆಗಳನ್ನು ಕುರಿತು ಅಂ–ದೇ ಅವರು ಕನಸು ಕಂಡಿದ್ದು ಮಾತ್ರವಲ್ಲ, ಜಾರಿಗೊಳಿಸಲು ಪ್ರಯತ್ನಗಳನ್ನು ನಡೆಸಿದ್ದರು. ಮದ್ಯ ನಿಷೇಧಕ್ಕಿಂತ ಶೈಕ್ಷಣಿಕ ಪ್ರಗತಿ, ಸಾಮ್ರಾಜ್ಯಶಾಹಿ, ಬಂಡವಾಳಶಾಹಿ ಮತ್ತು ಭೂಮಾಲೀಕರ ಕಪಿಮುಷ್ಟಿಯಿಂದ ದೇಶವನ್ನು ಮುಕ್ತಗೊಳಿಸುವುದರ ಮಹತ್ವ, ಹಿಂದುಳಿದ ವರ್ಗಗಳ ಒಗ್ಗಟ್ಟು, ದೇಶದ ಹಿತಕ್ಕಾಗಿ ವೈಯಕ್ತಿಕ ತ್ಯಾಗ, ಮಕ್ಕಳಿಗೆ ಶಿಕ್ಷಣ, ಮಾಧ್ಯಮದ ಅಗತ್ಯ, ನಮ್ಮ ಏಳಿಗೆ ನಮ್ಮಿಂದಲೇ ಎಂಬ ಕಟು ಸತ್ಯ, ಪ್ರಜಾಪ್ರಭುತ್ವದ ಉಳಿವು, ಪುರೋಹಿತಶಾಹಿಯ ತಿರಸ್ಕಾರ, ಸಮಾಜದ ಪ್ರಗತಿ, ಮಹಿಳೆಯ ಪ್ರಗತಿಯ ಅವಲಂಬನೆ ಹೀಗೆ ಅವರ ಚಿಂತನೆಗಳ ದಾರಿ ಸಾಗುತ್ತದೆ.

ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ಇಡೀ ವಿಶ್ವಕ್ಕೆ ಪರಿಚಯಿಸಿದ ಕೀರ್ತಿ ದಾದಾ ಸಾಹೇಬರಿಗೆ ಸಲ್ಲುತ್ತದೆ. ದೇಶಕ್ಕೆ ಸ್ವಾತಂತ್ರ್ಯ ಲಭಿಸಿದಾಗ ಮೂಲಭೂತ ಸೌಕರ್ಯಗಳಿಗಿಂತ ಜ್ವಲಂತ ಸಮಸ್ಯೆಗಳೇ ತಾಂಡವವಾಡುತ್ತಿದ್ದವು. ಅಂಬೇಡ್ಕರ್ ಅವರು, ಸಮಾನತೆಯ ಸ್ಥಾಪನೆ, ತಾರತಮ್ಯ ನಿವಾರಣೆ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಸಮಾನತೆಗಾಗಿ ಜೀವನವಿಡೀ ಹೋರಾಟ ನಡೆಸಿದರು.ಅವರ ಹೋರಾಟ ಮತ್ತು ಪರಿಶ್ರಮದ ಫಲವಾಗಿಯೇ ಇಂದು ಮಹಿಳೆಯರೂ ಸೇರಿದಂತೆ ಎಲ್ಲ ವರ್ಗಗಳು ಸಮಾನತೆಯತ್ತ ಹೆಜೆ ಹಾಕಲು ಸಾಧ್ಯವಾಗಿದೆ. ಆದರೂ ಅಲ್ಲಲ್ಲಿ ಅಸಮಾನತೆಯ ಆಚರಣೆಗಳ ಸುದ್ದಿಗಳು ಮನಸ್ಸನ್ನು ಕಲಕುತ್ತವೆಯಾದರೂ ಶತಮಾನದ ಹಿಂದಿನ ಪರಿಸ್ಥಿತಿಯನ್ನು ಊಹಿಸಿಕೊಂಡರೆ ಭಯವಾಗದೆ ಇರದು.

ದಿನಾಂಕ 20. ಸೆಪ್ಟಂರ್, 1944 ರಲ್ಲಿ ಸಿಕಂದರಾಬಾದ್‌ಗೆ ಭೇಟಿ ನೀಡಿದ್ದ ಅಂಬೇಡ್ಕರ್ ಅವರ ಗೌರವಾರ್ಥ ಸಭೆಯೊಂದನ್ನು ಏರ್ಪಾಟು ಮಾಡಲಾಗಿರುತ್ತದೆ. ಅವರು ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಗಬೇಕು ಎನ್ನುವುದು ನಮ್ಮ ಧ್ಯೇಯ. ಆದರೆ ಈ ದೇಶದಲ್ಲಿ ಹಲವಾರು ಪಂಥಗಳಿವೆ. ಹಿಂದೂ ಮುಸ್ಲಿಂ, ಕ್ರೈಸ್ತ ಮತ್ತು ಅಸ್ಪೃಶ್ಯ ಸಮಾಜಗಳಿವೆ. ಅಸ್ಪೃಶ್ಯರು ಯಾರು? ಅಸ್ಪೃಶ್ಯ ಜಾತಿಯು ಹಿಂದೂವಿನಿಂದ ಬೇರೆಯಾಗಿದೆ. ನಮ್ಮನ್ನು ಹಿಂದೂ ಸಮಾಜವು ಸಾವಿರಾರು ವರ್ಷಗಳಿಂದ ಸಾಮಾಜಿಕ, ಆರ್ಥಿಕ ರಾಜಕೀಯ ಬಾಬತ್ತಿನಲ್ಲಿ ಗುಲಾಮರನ್ನಾಗಿ ಮಾಡಿದೆ. ಈ ದೇಶಕ್ಕೆ ಪ್ರಜಾಸತ್ತಾತ್ಮಕ ರಾಜ್ಯ ಬೇಕೆಂದು ಬೊಬ್ಬೆ ಹೊಡೆಯುತ್ತೇವೆ. ಅಸ್ಪೃಶ್ಯರನ್ನು ಬಿಟ್ಟು ಪ್ರಜಾಸತ್ತಾತ್ಮಕ ರಾಜ್ಯವನ್ನು ನಿರ್ಮಿಸುವುದು ಸಾಧ್ಯವೇ ಎಂಬ ಪ್ರಶ್ನೆಯನ್ನು ಕೇಳಲು ಬಯಸುತ್ತೇನೆ ಎಂದು ಹೇಳುತ್ತಾರೆ.

ಜಾತಿಯಿಂದಾಗಿ ಹಿಂದೂಗಳ ನೈತಿಕತೆ ಶೋಚನೀಯ ಅವಸ್ಥೆ ತಲುಪಿದೆ. ಜಾತಿ ಸಾರ್ವಜನಿಕ ಭಾವನೆಯನ್ನು ನಾಶಗೊಳಿಸಿ, ಹೃದಯ ವೈಶಾಲ್ಯತೆಯನ್ನು ಹಾಳು ಮಾಡಿದೆ. ಸಾರ್ವಜನಿಕ ಅಭಿಪ್ರಾಯಗಳಿಗೆ ಕಿಮ್ಮತ್ತು ಇಲ್ಲದಂತೆ ನೋಡಿಕೊಂಡಿದೆ.ಹಿಂದೂವಿನ ಸಮಾಜ ಮತ್ತು ಹೊಣೆಗಾರಿಕೆ ಅವನ ಜಾತಿಗೆ ಸೀಮಿತವಾಗಿದೆ.ಅವನ ನಿಷ್ಠೆ ಜಾತಿಗೆ ಪರಿಮಿತವಾಗಿದೆ. ಸದ್ಗುಣ ಹಾಗೂ ನೀತಿಗಳೆರಡೂ ಜಾತೀಯತೆಯ ಕಪಿಮುಷ್ಠಿಯಲ್ಲಿ ಸಿಲುಕಿವೆ.ಶ್ಲಾಘನೆ, ದಯೆ, ದಾನಧರ್ಮ ಎಲ್ಲವೂ ಇದೆ. ಆದರೆ ಅದು ಜಾತಿಯನ್ನು ಮೀರಿ ಹೋಗುವುದಿಲ್ಲ. ಸಹಾನುಭೂತಿ ಇರುತ್ತದೆ. ಆದ–ರೆ ಅದು ತನ್ನ ಜಾತಿಯವರಿಗೆ ಮಾತ್ರ ಸೀಮಿತವಾಗಿರುತ್ತದೆ. ನೇಕಾರ ಸಮುದಾಯಕ್ಕೆ ಸೇರಿದವನೊಬ್ಬ ಮಹಾನ್ ನಾಯಕನಾದರೆ ಆತನನ್ನು ಎಲ್ಲ ಹಿಂದೂಗಳು ಅನುಕರಿಸಲಾರರು. ಆತ ಮಹಾತ್ಮನೇ ಆಗಿದ್ದರೂ ಅವನನ್ನು ಮುಂದಾಳು ಎಂದು ಒಪ್ಪಿಕೊಳ್ಳಲು ಅವನು ತಮ್ಮ ಜಾತಿಯವನೇ ಆಗಿರಬೇಕು. ಮುಂದಾಳು ಬ್ರಾಹ್ಮಣನಾಗಿದ್ದರೆ ಬ್ರಾಹ್ಮಣರು ಮಾತ್ರ ಅನುಯಾಯಿಗಳಾಗುತ್ತಾರೆ. ಕ್ಷತ್ರಿಯರು ಮುಂದಾಳಾಗಿದ್ದರೆ ಮಾತ್ರ ಕ್ಷತ್ರಿಯರು ಅವನ ಹಿಂಬಾಲಕರಾಗುತ್ತಾರೆ. ಇತರ ಜಾತಿಗಳಿಗೂ ಈ ಮಾತು ಅನ್ವಯಿಸುತ್ತದೆ ಎಂಬ ಕಟು ಸತ್ಯವನ್ನು ಅಂಬೇಡ್ಕರ್ ಶತಮಾನದ ಹಿಂದೆಯೇ ಪ್ರತಿಪಾದಿಸಿದ್ದರು. ಈಗ ಆಗುತ್ತಿರುವುದೂ ಅದೇ ಅಲ್ಲವೇ? ದೇಶದ ಉದ್ದಗಲಕ್ಕೂ ಮಹಾನ್ ಪುರುಷರನ್ನು ಜಾತಿಗೆ ಕಟ್ಟು ಹಾಕಿ ಸೀಮಿತಗೊಳಿಸಿಬಿಟ್ಟಿದ್ದೇವೆ. ಸರಕಾರಗಳೂ ಇಂತಹ ಬೆಳವಣಿಗೆಗಳಿಗೆ ಕುಮ್ಮಕ್ಕು ನೀಡುತ್ತಿವೆ. ವೀರಶೈವರಿಗೆ ಬಸವಣ್ಣ, ಒಕ್ಕಲಿಗರಿಗೆ ಕೆಂಪೇಗೌಡ, ನಾಯಕರಿಗೆ ಸಂಗೊಳ್ಳಿ ರಾಯಣ್ಣ ಹೀಗೆ ಮುಂದುವರಿಯುತ್ತದೆ. ಅಷ್ಟೇ ಏಕೆ? ಸಾಹಿತಿ ಕಲಾವಿದರನ್ನೂ ಜತಿಗೆ ಸೀಮಿತಗೊಳಿಸಿಬಿಟ್ಟ ಸಮಾಜ ನಮ್ಮದು. ಅಂಬೇಡ್ಕರ್ ಅವರನ್ನು ದಲಿತ ವರ್ಗಗಳ ಐಕಾನ್ ಆಗಿ ಕಟ್ಟಿ ಹಾಕಿಲ್ಲವೇ?

ಒಬ್ಬ ಮನುಷ್ಯನ ಜಾತಿ ಯಾವುದೇ ಇರಲಿ, ಅವನ ಯೋಗ್ಯತೆಯನ್ನು ಮಾತ್ರ ಪರಿಗಣಿಸಬೇಕೆಂಬ ಕನಿಷ್ಠ ಪ್ರಜ್ಞೆ ಅಥವಾ ಧೈರ್ಯ ಹಿಂದೂಗೆ ಇಲ್ಲ. ತಮ್ಮ ಜಾತಿಯವನಾದರೆ ಮಾತ್ರ ಪರಿಗಣಿಸುತ್ತಾರೆ. ಅನಾಗರೀಕ ಜನರ ಗುಂಪಿನ ನೀತಿ ಎಷ್ಟು ಸಂಕುಚಿತವೋ ಅಷ್ಟು ಸಂಕುಚಿತವಾಗಿದೆ ಜಾತಿಯ ನೀತಿ. ಸರಿ ಇರಲಿ, ತಪ್ಪಿರಲಿ, ತನ್ನ ಜಾತಿ ಮುಖ್ಯ. ಸಜ್ಜನ ಅಥವಾ ದುರ್ಜನನಿರಲಿ ತಮ್ಮ ಜಾತಿಗೆ ಸೇರಿದ್ದಾನೆ ಎನ್ನುವುದನ್ನಷ್ಟೇ ಪರಿಗಣನೆಗೆ ತೆಗೆದುಕೊಳ್ಳಲಾಗುತ್ತಿದೆ. ಹೀಗೆ ತಮ್ಮ ಜಾತಿಯ ಹಿತವನ್ನೇ ಪರಿಗಣಿಸುತ್ತಾ ಹಿಂದೂಗಳು ದೇಶಕ್ಕೆ ದ್ರೋಹ ಬಗೆಯುತ್ತಿಲ್ಲವೇ ಎಂದು ಅಂಬೇಡ್ಕರ್ ಪ್ರಶ್ನಿಸುತ್ತಾರೆ.



ಹೊಸ ಸಮಾಜ ಹೇಗಿರಬೇಕು?

ಮನುಷ್ಯ ವಿದ್ಯಾವಂತನಾಗುತ್ತಿರ್ದ್ದಾನೆ. ನಾಗರೀಕ ಪ್ರಜ್ಞೆ ಬೆಳೆಸಿಕೊಳ್ಳುತ್ತಿದ್ದಾನೆ. ವಿಜ್ಞಾನ ಯುಗದಲ್ಲಿ ಬದುಕು ಸಾಗಿಸುತ್ತಿದ್ದಾನೆ. ಅವನ ಶೈಕ್ಷಣಿಕ ಅರ್ಹತೆ, ಹುದ್ದೆ ಅಥವಾ ಜೀವನ ಶೈಲಿಗೂ ಜಾತಿಗೂ ಸಂಬಂಧವೇ ಇರುವುದಿಲ್ಲ. ಆದರೂ ಜಾತಿ ಅವನಲ್ಲಿ ಸದಾ ಅಂತರ್ಗತವಾಗಿರುತ್ತದೆ. ಜಾತಿ ಪ್ರಜ್ಞೆ ಜಾಗೃತಾವಸ್ಥೆಯಲ್ಲಿರುತ್ತದೆ. ಉದಾಹರಣೆಗೆ ಸ್ವಾತಂತ್ರ್ಯ ಲಭಿಸಿದಾಗ ಇದ್ದ ಜಾತಿಗಳ ಸಂಖ್ಯೆ ಇಂದು ದ್ವಿಗುಣಗೊಂಡಿದೆ. ಜಾತಿ ಆಚರಣೆ ಕೇವಲ ಶ್ರೀಸಾಮಾನ್ಯನಲ್ಲಿ ಮಾತ್ರ ಉಳಿದುಕೊಂಡಿಲ್ಲ. ಉನ್ನತ ಸ್ತರದ ಹುದ್ದೆಗಳಲ್ಲಿರುವವರಲ್ಲಿಯೂ ಜಾತಿ ತಾಂಡವವಾಡುತ್ತಿದೆ. ಹೆಸರಿನ ಮುಂದೆ ಜಾತಿಯ ಸೂಚಕವನ್ನು ಧಾರಾಳವಾಗಿ ಬಳಸುತ್ತಿದ್ದಾನೆ. ಇದು ಜಾತಿ ಅಳಿವಿನಲ್ಲಿದೆ ಎಂಬುದನ್ನು ಸೂಚಿಸುತ್ತದೆ ಎಂದು ಹೇಳಲು ಸಾಧ್ಯವೇ?

ಅಂಬೇಡ್ಕರ್ ಈ ಸಮಸ್ಯೆಗೂ ಅಂದೇ ಪರಿಹಾರ ರೂಪಸಿದ್ದಾರೆ. ಜಾತಿ ಬೇಡ ಎಂದಾದರೆ ನೀವು ಕಲ್ಪಿಸುವ ಆದ–ರ್ಶ ಸಮಾಜ ಯಾವುದು ಎಂದು ಪ್ರಶ್ನಿಸುತ್ತಾರೆ. ಮುಂದುವ–ರಿದು, ಅವರು “ನನ್ನ ಮಟ್ಟಿಗೆ ಹೇಳುವುದಾದರೆ ಈ ಹೊಸ ಸಮಾಜವು ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವಗಳ ಆದ–ರದ ಮೇಲೆ ನಿರ್ಮಾಣವಾಗಬೇಕು. ಆದರ್ಶ ಸಮಾಜದಲ್ಲಿ ಚಲನಶೀಲಸ್ವಾತಂತ್ರ್ಯ, ಅಂದರೆ ಬದಲಾಗುವವರಿಗೆ ಮುಕ್ತ ಅವಕಾಶಗಳಿರಬೇಕು” ಎಂದು ಒತ್ತಿ ಹೇಳುತ್ತಾರೆ. ಒಂದು ಭಾಗದಲ್ಲುಂಟಾದ ಪರಿವರ್ತನೆಯನ್ನು ಇತರ ಭಾಗಗಳಿಗೆ ಸಾಗಿದಸುವುದಕ್ಕೆ ಹೇರಳವಾದ ಮಾರ್ಗಗಳಿರಬೇಕು. ಆದರ್ಶ ಸಮಾಜದಲ್ಲಿ ಪರಸ್ಪರ ತಿಳಿದುಕೊಂಡು ಪಾಲ್ಗೊಳ್ಳುವಂತಹ ಹಿತಾಸಕ್ತಿ ಅನೇಕವಾಗಿರಬೇಕು. ಒಟ್ಟಾರೆ ಸಾಮಾಜಿಕ ಒಳ ಸೇರ್ಪಡೆ ಇರಬೇಕು. ಇದೇ ಭ್ರಾತೃತ್ವ, ಪ್ರಜಾಪ್ರಭುತ್ವದ ಇನ್ನೊಂದು ಹೆಸರೇ ಇದು. ಪ್ರಜಾಪ್ರಭುತ್ವ ಒಂದು ಬಗೆಯ ಆಡಳಿತ ವಿಧಾನ ಮಾತ್ರವಲ್ಲ. ಅದೊಂದು ಸಾಮಾಜಿಕ ಜೀವನ ಪದ್ಧತಿ;ದೇಶವಾಸಿಗಳಲ್ಲಿ ಪರಸ್ಪರರನ್ನು ಗೌರವದಿಂದ ಕಾಣುವ ಮನೋವೃತಿ ಪ್ರಜಾಪ್ರಭುತ್ವದ ಮೂಲ ಲಕ್ಷಣವಾಗಿದೆ.

ಚಾತುರ್ವರ್ಣ್ಯ ಪದ್ಧತಿಯನ್ನು ಮೇಲ್ವರ್ಗಗಳ ಸಮಾಜ ವ್ಯವಸ್ಥಿತವಾಗಿ ಪೋಷಿಸಿಕೊಂಡು ಬಂದಿದೆ.ಜನ್ಮಸಿದ್ದವಾಗಿ ಒಂದು ಮೇಲು, ಮತ್ತೊಂದು ಕೀಳು, ಮಗದೊಂದು ಅದಕ್ಕಿಂತ ಕೆಳಗೆ, ಹೀಗೆ ಒಂದು ತಾರತಮ್ಯದ ಶ್ರೇಣೀಕರಣದ ಮನೋಭಾವವನ್ನು ಮುಂದುವರಿಸಿಕೊಂಡು ಬರಲಾಗುತ್ತಿದೆ. ವರ್ಣವು ಯೋಗ್ಯತೆಯಿಂದ ನಿರ್ಣಯಿಸಲ್ಪಡುತ್ತದೆ ಎನ್ನುವುದಾದರೆ ಕೆಲವರು ಯೋಗ್ಯತೆ ಇಲ್ಲದಿದ್ದರೂ ತಮ್ಮ ಜನ್ಮ ಬಲದಿಂದ ಮೇಲು ಜಾತಿಗೆ ಸೇರಿಕೊಂಡು ಬಿಡುತ್ತಾರೆ. ಅಂ–ದರೆ ಸಮಾಜದಲ್ಲಿ ಅವರಿಗೆ ಉನ್ನತ ಸ್ಥಾನಮಾನಗಳಿರುತ್ತವೆ. ಇನ್ನು ಕೆಲವರು ಯೋಗ್ಯತೆ ಇದ್ದರೂ ಕೆಳ ಜಾತಿಯಲ್ಲಿ ಹುಟ್ಟಿದ ಕಾರಣಕ್ಕಾಗಿ ಸಮಾಜದಲ್ಲಿ ಕೆಳಗಿನವರೇ ಆಗಿ ಬಿಡುತ್ತಾರೆ. ವಾಸ್ತವ ಪರಿಸ್ಥಿತಿ ಹೀಗಿರುವಾಗ ಯೋಗ್ಯತೆಯಆಧಾರದ ಮೇಲೆ ಮೇಲಿನವರನ್ನು ಕೆಳಗಿಳಿಸಲು ಮತ್ತು ಕೆಳಗಿನವರನ್ನು ಮೇಲೇರಿಸಲು ಹೇಗೆ ಸಾಧ್ಯವಾಗುತ್ತದೆ ಎಂಬ ಪ್ರಶ್ನೆಯನ್ನು ಮುಂದಿಡುತ್ತಾರೆ.

ಜಾತಿ ಪದ್ದತಿ ಕುರಿತು ಪ್ರಶ್ನಿಸಿದರೆ ಸಿಖ್, ಮುಸ್ಲಿಂ, ಕ್ರೈಸ್ತರಲ್ಲಿಯೂ ಜಾತಿ ಪದ್ದತಿ ಇದೆ ಎಂದು ತೋರಿಸಿ ಸಮಾಧಾನ ಮಾಡುವವರೂ ಇಲ್ಲದಿಲ್ಲ. ನೆಪಿನಲ್ಲಿಡಬೇಕು. ಮಾನವ ಸಮಾಜ ಎಲ್ಲಿಯೂ ಒಂದು ಅಖಂಡತೆಯನ್ನು ಪಡೆದಿರುವುದಿಲ್ಲ. ಅದರಲ್ಲಿ ಅನೇಕತೆ ಇರುತ್ತದೆ. ಕ್ರಿಯಾಪ್ರಪಂಚದಲ್ಲಿ ವ್ಯಕ್ತಿ ಒಂದು ತುದಿಯಾದರೆ ಸಮಾಜ ಇನ್ನೊಂದು ತುದಿ. ಈ ಎರಡೂ ಅಂಶಗಳ ನಡುವೆ ಕುಟುಂಬ, ಬಂಧು, ಬಳಗ, ರಾಜಕಾರಣ, ಕಳ್ಳಕಾಕರು–ಎಲ್ಲರೂ ಇರುತ್ತಾರೆ. ಎಲ್ಲ ಧರ್ಮಗಳಲ್ಲೂ ಒಳ ಜಾತಿಗಳಿವೆ. ಆದರೆ ಹಿಂದೂ ಸಮಾಜದಲ್ಲಿರುವ ಜಾತಿಗಳಿಗೂ ಸಿಖ್, ಮುಸ್ಲಿಂ ಕ್ರೈಸ್ತರಲ್ಲಿರುವ ಜಾತಿಗಳಿಗೂ ವ್ಯತ್ಯಾಸಗಳಿವೆ. ಮೊದಲನೆಯದಾಗಿ ಹಿಂದೂ ಜಾತಿಗಳಲ್ಲಿ ಐಕ್ಯತೆಯನ್ನುಂಟು ಮಾಡುವ ಪರಸ್ಪರ ಸಂಬಂಧಗಳು ಇಲ್ಲ. ಇತರೆ ಧರ್ಮಗಳಲ್ಲಿ ಐಕ್ಯತೆ ಇರುವುದನ್ನು ಅಂಬೇಡ್ಕರ್ ಅವರು ತೋರಿಸಿ ಕೊಡುತ್ತಾರೆ.ಭಿನ್ನ ಭಿನ್ನ ಗುಂಪುಗಳಲ್ಲಿ ಪರಸ್ಪರ ಸಂಪರ್ಕ ಹಾಗೂ ಕೊಡುಕೊಳ್ಳುವಿಕೆ ಎಷ್ಟರ ಮಟ್ಟಿಗೆ ಇರುವುದೋ ಅಷ್ಟರ ಮಟ್ಟಿಗೆ ಆ ಸಮಾಜ ಬಲಿಷ್ಠವಾಗಿರುತ್ತದೆ ಎಂದು ಹೇಳುತ್ತಾರೆ.

ಇವುಗಳನ್ನು ಕಾರ್ಲೈಲ್ 'ಜೈವಿಕ ತಂತುಗಳು' ಎಂದು ಕರೆಯುತ್ತಾನೆ. ಅಂದರೆ ಪ್ರತ್ಯೇಕವಾಗಿರುವ ಅಂಗಗಳನ್ನು ಪುನಃ ಎಳೆದು ಕೂಡಿಸುವಂತಹ ಸ್ಥಿತಿಸ್ಥಾಪಕರ ತಂತುಗಳು ಎಂದು ಕರೆಯುತ್ತಾರೆ. ಜಾತಿ ಪದ್ಧತಿಯಿಂದ ಪ್ರತ್ಯೇಕಿತವಾದ ಗುಂಪುಗಳನ್ನು ಕೂಡಿಸುವಂತಹ ಜೈವಿಕ ತಂತುಗಳು ಹಿಂದೂ ಸಮಾಜದಲ್ಲಿಲ್ಲ.'ನೀನು ಯಾರು' ಎಂದು ಎಂದು ಯಾವುದೇ ಹಿಂದೂವನ್ನು ಕೇಳಿದರೂ ನಾನು ಹಿಂದೂ ಎಂದು ಉತ್ತರ ನೀಡಲಾರ. ಒಂದು ವೇಳೆ ನೀಡಿದರೂ ನಿನ್ನ ಜಾತಿ ಎಂಬ ಮರುಪ್ರಶ್ನೆ ಸಿದ್ಧವಾಗಿರುತ್ತದೆ.

ಜಾತಿ ವಿನಾಶ ಸಾಧ್ಯವೇ?

ಪ್ರತಿಯೊಂದು ಸಮಸ್ಯೆಗೂ ಪರಿಹಾರ ಇದ್ದೇ ಇರುತ್ತದೆ. ಹಾಗೆಯೇ ಜಾತಿ ಪದ್ಧತಿ ನಿರ್ಮೂಲನೆಗೂ ಪರಿಹಾರ ಇದ್ದೇ ಇರುತ್ತದೆ. ಆದರೆ ಬೇಕಿರುವುದು ಮನಸ್ಸು ಮಾತ್ರ. ಜಾತಿ ಪದ್ಧತಿಯನ್ನು ಪೋಷಿಸಿಕೊಂಡು ಬರುತ್ತಿರುವ ವರ್ಗ ಒಂದು ಕಡೆಯಾದರೆ ಕೀಳರಿಮೆಯಿಂದ ಬದುಕುತ್ತಿರುವ ವರ್ಗ ಮತ್ತೊಂದು ಕಡೆ ಇದೆ. ಜಾತಿಯನ್ನು ಧಿಕ್ಕರಿಸುವ ಧೈರ್ಯವನ್ನು ಎರಡೂ ಕಡೆಯವರು ತೋರಿದರೆ ಜಾತಿ ವಿನಾಶ ಆರಂಭವಾದೀತು.

ಅಂತರ್ಜಾತೀಯ ಸಹಭೋಜನದಿಂದ ಜಾತಿ ನಿರ್ಮೂಲನೆಯನ್ನು ಸಾಧಿಸಬಹುದು ಎಂಬ ಮಾರ್ಗವನ್ನು ಕೆಲವರು ತೋರುತ್ತಾರೆ. ಇದು ಸಂಪೂರ್ಣವಾದ ಮಾರ್ಗ ಅಲ್ಲ ಎಂದು ಅಂಬೇಡ್ಕರ್ ಹೇಳುತ್ತಾರೆ.ಈಗಲೂ ಅನೇಕ ಜಾತಿಗಳು ಸಹಭೋಜನ ವ್ಯವಸ್ಥೆಯನ್ನು ಅನುಸ–ರಿಸುತ್ತಿವೆಯದರೂ ಜಾತಿ ವಿನಾಶ ಸಾಧ್ಯವಾಗಿಲ್ಲ. ಜಾತಿ ಪ್ರಜ್ಞೆ ಅಳಿದಿಲ್ಲ.

ಜಾತಿ ನಿರ್ಮೂಲನೆಗೆ ಅಂತರ್ಜಾತೀಯ ವಿವಾಹ ಸರಿಯಾದ ಮಾರ್ಗ ಎಂದು ಅಂಬೇಡ್ಕರ್ ಪ್ರತಿಪಾದಿಸುತ್ತಾರೆ. ತಾವು ತಮ್ಮವರೆಂಬ ಭಾವನೆ ರಕ್ತ ಸಂಬಂಧದಿಂದ ಮಾತ್ರ ಬರಬಲ್ಲದು.ಈ ಭಾವನೆ ಹುಟ್ಟದೆ ಹೋದರೆ ಜಾತಿ ಪದ್ಧತಿ ಬೆಳೆದು ಬಂದ ಪ್ರತ್ಯೇಕತಾ ಭಾವನೆ ಅಳಿಯಲಾರದು. ಅಂತರ್ಜಾತಿ ವಿವಾಹವಾಗಿರುವವರಲ್ಲಿ ಮತ್ತು ಅಂತಹ ಕುಟುಂಬಗಳಲ್ಲಿ ಜಾತಿ ಪದ್ಧತಿ ಆಚರಣೆ ಕಡಿಮೆಯಾಗಿದೆ ಎನ್ನುವುದನ್ನು ಒಪ್ಪಲೇಬೇಕಾಗುತ್ತದೆ. ದುರ್ದೈವವೆಂದರೆ ಅಂತರ್ಜಾತಿ ವಿವಾಹಕ್ಕೆ ಮಠಾಧೀಶರೇ ಕೊಕ್ಕೆ ಹಾಕುತ್ತಿದ್ದಾರೆ. ಅನ್ಯ ಜಾತಿಗಳ ಜತೆ ಸಂಬಂಧ ಬೆಳಸದಂತೆ ತಾಕೀತು ಮಾಡುತ್ತಾರೆ.ಜಾತಿ ನಿವಾರಣೆಗೆ ಅಂತರ್ಜಾತಿ ವಿವಾಹಕ್ಕಿಂತ ಬಲಿಷ್ಠವಾದ ಮಾರ್ಗ ಮತ್ತೊಂದಿಲ್ಲ. ಅಂತರ್ಜಾತಿ ಸಹಭೋಜನ ಮತ್ತು ಅಂತರ್ಜಾತಿ ವಿವಾಹ ತೀರಸಾಮಾನ್ಯ ಪ್ರಕ್ರಿಯೆಗಳೆಂಬ ಭಾವನೆ ಉಂಟಾದಾಗ ಜಾತಿ ತನ್ನ ಬಲವನ್ನು ಕಳೆದುಕೊಳ್ಳುತ್ತದೆ. ಆದರೆ ಈ ಎರಡೂ ಮಾರ್ಗಗಳಿಗೆ ಹಿಂದೂ ಸಮಾಜ ಒಪ್ಪಿಗೆ ನೀಡುತ್ತಿಲ್ಲ. ಏಕೆಂದರೆ ಈ ಎರಡೂ ಅಂಶಗಳು ಪಾವಿತ್ರ್ಯಭಂಗ ಉಂಟು ಮಾಡುತ್ತವೆ ಎಂದು ನಂಬಿಸಲಾಗಿದೆ.

ಜಾತಿ ಎನ್ನುವುದು ಇಟ್ಟಿಗೆ ಕಲ್ಲುಗಳಿಂದ ಕಟ್ಟಿರುವ ಗೋಡೆಯಲ್ಲ. ಆದ್ದರಿಂದ ಕಿತ್ತು ಹಾಕಲು ಸಾಧ್ಯವಿಲ್ಲ. ಜಾತಿ–ಒಂದು ಮನೋಭಾವ. ಮನೋಪರಿವರ್ತನೆಯದರೆ ಮಾತ್ರ ಜಾತಿ ವಿನಾಶ ಸಾಧ್ಯ. ಶಾಸ್ತ್ರಗಳಲ್ಲಿ ಜನರಿಗಿರುವ ನಿಷ್ಠೆಯನ್ನು ನಾಶಮಾಡಿದರೆ ಅಂತರ್ಜಾತೀಯ ಸಹಭೋಜನ ಮತ್ತು–ಅಂತರ್ಜಾತೀಯ ವಿವಾಹಸ್ವಾಭಾವಿಕವಾಗಿ ಹೆಚ್ಚುತ್ತವೆ. ಶಾಸ್ತ್ರಗಳ ಬಂಧನದಿಂದ ಪ್ರತಿಯೊಬ್ಬ ಸ್ತ್ರೀಪುರುಷರನ್ನು ಮುಕ್ತಗೊಳಿಸಿದರೆ ಮನಸ್ಸುಗಳು ಶುದ್ಧಿಯಾಗುತ್ತವೆ.ಶಾಸ್ತ್ರಗಳ ಆಚರಣೆಗಳಿಗಿಂತ ಜಾತಿ ವಿನಾಶ ಮುಖ್ಯ ಎನ್ನುವುದನ್ನು ಈಗಲಾದರೂ ಅರ್ಥ ಮಾಡಿಕೊಂಡರೆ ಸಮ ಸಮಾಜ ನಿರ್ಮಾಣ ಸಾಧ್ಯವಾದೀತುಎಂದು ಅಂಬೇಡ್ಕರ್ ಪ್ರತಿಪಾದಿಸುತ್ತಾರೆ.

**ಲೇಖನ: ಎಚ್. ಮಾರುತಿ**

## ಸಂಕೇಶ್ವರ ಪುರಸಭೆ: ಆಸ್ತಿ ತೆರಿಗೆ ಪರಿಷ್ಕರಣೆ

ಬೆಳಗಾವಿ: ಸಂಕೇಶ್ವರ ಪುರಸಭೆ ವ್ಯಾಪ್ತಿಯ ಸಾರ್ವಜನಿಕರಿಗೆ ಆಸ್ತಿ ತೆರಿಗೆ ಮೇಲೆ ಪ್ರತಿ ವರ್ಷ ಆಸ್ತಿ ತೆರಿಗೆಯನ್ನು 3% ರಿಂದ 5% ರವರೆಗೆ ಹೆಚ್ಚಿಸಿಕೊಳ್ಳಲು ಸರ್ಕಾರದ ನಿರ್ದೇಶನ ದಂತೆ 2023–24 ನೇ ಸಾಲಿನ ಆಸ್ತಿ ತೆರಿಗೆಯನ್ನು ಎಲ್ಲಾ ಖಾಲಿ ನಿವೇಶನಗಳಿಗೆ, ವಸತಿ, ವಾಣಿಜ್ಯ, ಕೈಗಾರಿಕೆ, ಶೈಕ್ಷಣಿಕ ಮತ್ತು ಸಾರ್ವಜನಿಕ ಕಟ್ಟಡಗಳಿಗೆ 3% ಆಸ್ತಿ ತೆರಿಗೆಯನ್ನು ಹೆಚ್ಚಿಸಿ ಪರಿಷ್ಕರಿಸಲಾಗಿದೆ.

ಸಾರ್ವಜನಿಕರು ಏ. 01, 2023 ರಿಂದ ಪರಿಷ್ಕರಣೆಯಾದಂತೆ ಆಸ್ತಿ ತೆರಿಗೆ ಭರಣಾ ಮಾಡಿ ಸಂಕೇಶ್ವರ ಪುರಸಭೆಯ ಸರ್ವತೋಮುಖ ಅಭಿವೃದ್ಧಿಗೆ ಸಹಕರಿಸಬೇಕು ಹಾಗೂ ಏಪ್ರೀಲ್, 2023 ನೇ ಸಾಲಿನಲ್ಲಿ ಆಸ್ತಿ ತೆರಿಗೆ ಭರಣಾ ಮಾಡಿದ್ದಲ್ಲಿ ಶೇ. 5% ರಷ್ಟು ರಿಯಾಯಿತಿ ಇರುತ್ತದೆ,

ಮೇ. 2023 ಹಾಗೂ ಜೂನ. 2023 ನೇ ತಿಂಗಳಿನಲ್ಲಿ ಆಸ್ತಿ ತೆರಿಗೆ ಪಾವತಿ ಮಾಡಿದ್ದಲ್ಲಿ ಯಾವುದೇ ರಿಯಾಯಿತಿ ಹಾಗೂ ದಂಡ ಇರುವುದಿಲ್ಲ ಹಾಗೂ ಜುಲೈ. 2023 ರ ನಂತರ ಪಾವತಿಸಿದ್ದಲ್ಲಿ ಪ್ರತಿ ತಿಂಗಳು ಶೇ. 2% ರಷ್ಟು ದಂಡ ಇರುತ್ತದೆ.

ಆದ್ದರಿಂದ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು ಎಂದು ಸಂಕೇಶ್ವರ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 16.04.2023 ರಂದು ಬೆಳಿಗ್ಗೆ 09.00 ಘಂಟೆಯಿಂದ ಸಾಯಂಕಾಲ 04.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಕಣಬರ್ಗಿ ಉಪಕೇಂದ್ರದಲ್ಲಿ ಮೊದಲನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಮುಚ್ಚಂಡಿ, ಅಷ್ಟೆ, ಕ್ಯಾಂಪ್‌ಬೆಲ್, ಮಾರಿಹಾಳ, ಕರಡಿಗುದ್ದಿ, ಪಂತಬಾಳೇಕುಂದ್ರಿ, ಬಾಳೇಕುಂದ್ರಿ, ಹೊನ್ನಿಹಾಳ, ಮಾವಿನಕಟ್ಟಿ, ತಾರಿಹಾಳ, ಚಂದನ ಹೊಸೂರ, ಎಮ್.ಇ.ಎಸ್, ಸಾಂಬ್ರಾ, ಮುತಗಾ, ಸುಳೇಭಾವಿ, ಪಂತ ನಗರ, ಮೋದಗಾ, ಯದ್ದಲಭಾವಿಹಟ್ಟಿ, ಖನಗಾಂವ, ಚಂದೂರ, ಚಂದಗಡ, ಗಣಿಕೊಪ್ಪ, ಗುಂಜ್ಯಾನಟ್ಟಿ, ಕೇದನೂರ, ಮನ್ನಿಕೇರಿ, ಹಂದಿಗನೂರ, ಚೆಲುವ್ಯಾನಟ್ಟಿ, ಮಾಳೇನಟ್ಟಿ, ಅತಿವಾಡ, ಬೋಡಕ್ಯಾನಟ್ಟಿ, ಕುರಿಹಾಳ, ಕಟ್ಟಣಭಾವಿ, ನಿಂಗ್ಯಾನಟ್ಟಿ, ಗುರಾಮಟ್ಟಿ, ಹಳೆಇದ್ದಲಹೊಂಡ, ಶಿವಾಪೂರ, ಪರಶ್ಯಾನಟ್ಟಿ, ಹೊನಗಾ, ದಾಸರವಾಡಿ, ಕೆಂಚ್ಯಾನಟ್ಟಿ, ಸೋನಟ್ಟಿ, ಬೈಲೂರ, ಹೆಗ್ಗೇರಿ, ದೇವಗಿರಿ, ಹುಲ್ಯಾನೂರ, ಬುಡ್ರ್ಯಾನೂರ, ಧರನಟ್ಟಿ, ಭರನಟ್ಟಿ, ಕಡೋಲಿ, ಅಗಸಗಾ ಹಾಗೂ ಜಾಫರವಾಡಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

## ರಿಕ್ಷಾ ಡಿಕ್ಕಿ; ಸ್ಥಳದಲ್ಲೇ ಗರ್ಭಿಣಿ ಸಾವು



ಕಾರವಾರ: ರಿಕ್ಷಾ ಡಿಕ್ಕಿ ಹೊಡೆದ ಪರಿಣಾಮ ಗರ್ಭಿಣಿ ಮಹಿಳೆ ಸಾವನ್ನಪ್ಪಿದ ಘಟನೆ ಅಂಕೋಲಾದ ಭಾವಿಕೇರಿ ಗ್ರಾಮದಲ್ಲಿ ನಡೆದಿದೆ. ರಸ್ತೆ ಬದಿ ತೆರಳುತ್ತಿದ್ದ ವೇಳೆ ರಿಕ್ಷಾ ಡಿಕ್ಕಿಯಾಗಿ ಗರ್ಭಿಣಿ ಸಾವು 28 ವರ್ಷ ವಯಸ್ಸಿನ ಶೋಭಾ ಗೋಪಾಲ ನಾಯಕ ಎಂಬವರು ಮೃತಪಟ್ಟಿದ್ದಾರೆ.

ಶೋಭಾ ನಾಲ್ಕು ತಿಂಗಳ ಗರ್ಭಿಣಿಯಾಗಿದ್ದು, ಗಂಡನೊಂದಿಗೆ ಮನೆಯ ಎದುರಿನ ರಸ್ತೆಯಲ್ಲಿ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಅತಿವೇಗವಾಗಿ ಅಜಾಕರೂಕತೆಯಿಂದ ಬಂದ ರಿಕ್ಷಾ ಚಾಲಕನ ನಿಯಂತ್ರಣ ತಪ್ಪಿ ಡಿಕ್ಕಿ ಶೋಭಾಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಗಂಭೀರ ಗಾಯಗೊಂಡು ಗರ್ಭಿಣಿ ಮೃತಪಟ್ಟಿದ್ದಾರೆ.

ಅಪಘಾತದ ಬಳಿಕ ರಿಕ್ಷಾ ಸಮೇತ ಚಾಲಕ ಪರಾರಿಯಾಗಿದ್ದಾನೆ. ಅಂಕೋಲಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಆಂಧ್ರ ಪ್ರದೇಶದ ಮುಖ್ಯಮಂತ್ರಿ ಪೋಸ್ಟರ್ ಹರಿದ ನಾಯಿ ವಿರುದ್ಧ ಪೊಲೀಸರಿಗೆ ದೂರು

ವಿಜಯವಾಡ: ವಿಲಕ್ಷಣ ಘಟನೆಯೊಂದರಲ್ಲಿ, ಆಂಧ್ರ ಪ್ರದೇಶದ ಮುಖ್ಯಮಂತ್ರಿ ವೈಎಸ್ ಜಗನ್ ಮೋಹನ್ ರೆಡ್ಡಿ ಅವರ ಪೋಸ್ಟರ್ ಅನ್ನು ಹರಿದಿದ್ದಕ್ಕಾಗಿ ನಾಯಿಯೊಂದರ ವಿರುದ್ಧ ಪೊಲೀಸ್ ದೂರು ದಾಖಲಾಗಿದೆ.

ವಿಜಯವಾಡದಲ್ಲಿ ಮನೆಯ ಗೋಡೆಯ ಮೇಲಿದ್ದ ಮುಖ್ಯಮಂತ್ರಿಗಳ ಪೋಸ್ಟರ್ ಅನ್ನು ನಾಯಿಯೊಂದು ಹರಿದು ಹಾಕಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ನಂತರ ಮಹಿಳೆಯರ ಗುಂಪೊಂದು ಪೊಲೀಸರಿಗೆ ದೂರು ನೀಡಿದೆ.

ಪ್ರತಿಪಕ್ಷ ತೆಲುಗು ದೇಶಂ ಪಕ್ಷದ (ಟಿಡಿಪಿ) ಕಾರ್ಯಕರ್ತೆ ಎನ್ನಲಾದ ದಾಸರಿ ಉದಯಶ್ರೀ ಎಂಬುವವರು ವ್ಯಂಗ್ಯವಾಗಿ



ಪೊಲೀಸರಿಗೆ ದೂರು ನೀಡಿದ್ದಾರೆ. ಮುಖ್ಯಮಂತ್ರಿಗೆ ಅವಮಾನ ಮಾಡಿರುವ ನಾಯಿ ಹಾಗೂ ಅದರ ಹಿಂದಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಇತರ ಕೆಲ ಮಹಿಳೆಯರೊಂದಿಗೆ ಒತ್ತಾಯಿಸಿದರು.

151 ವಿಧಾನಸಭಾ ಸ್ಥಾನಗಳನ್ನು ಗೆದ್ದಿರುವ ಜಗನ್ ಮೋಹನ್ ರೆಡ್ಡಿ ಅವರ ಬಗ್ಗೆ ನಮಗೆ ಅಪಾರ ಗೌರವವಿದೆ. ಅಂತಹ ನಾಯಕನನ್ನು ನಾಯಿಯೊಂದು ಅವಮಾನಿಸಿದ್ದು, ರಾಜ್ಯದ ಆರು ಕೋಟಿ ಜನರಿಗೆ ನೋವುಂಟು ಮಾಡಿದೆ ಎಂದು ಸ್ಥಳೀಯ ದೂರದರ್ಶನ ಚಾನೆಲ್‌ಗಳಿಗೆ ತಿಳಿಸಿದರು. ನಮ್ಮ ಪ್ರೀತಿಯ ಮುಖ್ಯಮಂತ್ರಿಯನ್ನು ಅವಮಾನಿಸಿದ ನಾಯಿ ಮತ್ತು ನಾಯಿಯ ಹಿಂದಿರುವವರನ್ನು ಬಂಧಿಸುವಂತೆ ನಾವು ಪೊಲೀಸರಿಗೆ ಮನವಿ ಮಾಡಿದ್ದೇವೆ ಎಂದು ಅವರು ಹೇಳಿದರು. ಈ ಹಿಂದೆ ಜಗನ್ ಮೋಹನ್ ರೆಡ್ಡಿ ಅವರ ಫೋಟೊ ಇರುವ ಸ್ಟಿಕ್ಕರ್ ಅನ್ನು ನಾಯಿಯೊಂದು ಹರಿದು ಹಾಕಿರುವ ವಿಡಿಯೋ ವೈರಲ್ ಆಗಿತ್ತು. ಆಡಳಿತಾರೂಢ ವೈಎಸ್‌ಆರ್ ಕಾಂಗ್ರೆಸ್ ಪಕ್ಷ (ವೈಎಸ್‌ಆರ್‌ಸಿಪಿ) ರಾಜ್ಯದಾದ್ಯಂತ ನಡೆಯುತ್ತಿರುವ ಸಮೀಕ್ಷೆಯ ಭಾಗವಾಗಿ ಜಗನನ್ಣ ಮಾ ಭವಿಷ್ಯತು (ಜಗನ್ ಅಣ್ಣ ನಮ್ಮ ಭವಿಷ್ಯ) ಎಂಬ ಸ್ಟಿಕರ್ ಅನ್ನು ಮನೆಯೊಂದರ ಮೇಲೆ ಅಂಟಿಸಲಾಗಿದೆ.

## ವಿಜಯಪುರದಲ್ಲಿ ಅಕ್ರಮವಾಗಿ ವನ್ಯಜೀವಿಗಳ ಅಂಗಾಂಗ ಸಾಗಾಟ : ಇಬ್ಬರು ಆರೋಪಿ ಅರೆಸ್ಟ್

ವಿಜಯಪುರ : ಸಿಂದಗಿ ತಾಲ್ಲೂಕಿನ ಬಾಗಲೂರ ಬಳಿ ಅಕ್ರಮವಾಗಿ ವನ್ಯಜೀವಿಗಳ ಅಂಗಾಂಗ ಸಾಗಿಸುತ್ತಿದ್ದ ಇಬ್ಬರು ಆರೋಪಿ ಅರೆಸ್ಟ್ ಮಾಡಲಾಗಿದೆ.

ಅಕ್ರಮವಾಗಿ ಕೃಷ್ಣಮೃಗದ ಕೊಂಬು, ತಲೆಬುರುಡೆ, ಚರ್ಮಗಳು, ವಿವಿಧ ಜಾತಿಯ ವನ್ಯ ಪ್ರಾಣಿಗಳ ಅಂಗಾಂಗಗಳನ್ನು ವಶ ಕ್ಕೆ ಪಡೆಯಲಾಗಿದೆ. ಮಹಾರಾಷ್ಟ್ರದ ಅಸವಲದಾರಾ ಗ್ರಾಮದ ಪವನ್ ಹಾಗೂ ಭೋಸಲೆ ಬಂಧಿತ ಆರೋಪಿಗಳೆಂದು ಎಂದು ಗುರುತಿಸಲಾಗಿದೆ. ಬಂಧಿತರಿಂದ 807 ಉಡದ ಶಿಶ್ನಗಳು, 116 ಇಂದ್ರಜಾಲಗಳು, 2 ಕಾಡು ಬೆಕ್ಕಿನ ಪಾದಗಳು, 2 ಕಾಡು ಬೆಕ್ಕು ಉಗುರುಗಳು, 3 ಕರಡಿಯ ಉಗುರುಗಳು, 28 ನೀರು ಪಕ್ಷಿಗಳ ಕಾಲುಗಳು, 2 ಉಡ–



ದ ಕಾಲುಗಳು, 73 ಗೂಬೆಯ ಪುಕ್ಕಗಳು, 4 ಕರಡಿಯ ಹಲ್ಲುಗಳು, 32 ಮುಂಗಸಿಯ ಕಾಲುಗಳು, 7 ಮುಂಗುಸಿಯ ದವಡೆಗಳು, 16 ಮುಂಗುಸಿಯ ಚರ್ಮದಿಂದ ಮಾಡಿದ ಉಂಡೆಗಳು, 26 ಕಾಡು ಹಂದಿಯ ಹಲ್ಲುಗಳು, 3 ಅಪರಿಚಿತ ಕಾಡು ಪ್ರಾಣಿಯ ಉಗುರುಗಳು ವಶಕ್ಕೆ ಪಡೆದುಕೊಂಡಿದ್ದಾರೆ. ಸಿಂದಗಿ ಸಿಐಡಿ ಅರಣ್ಯ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಲಕ್ಷ್ಮಣ ಸವದಿ ಬೆಂಬಲಿಗರಿಂದ ಮುತ್ತಿಗೆ



ಅಥಣಿ : ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಅವರಿಗೆ ಟಿಕೆಟ್ ತಪ್ಪಿದ್ದರಿಂದ ಅವರ ಬೆಂಬಲಿಗರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಷ್ಟೇ ಅಲ್ಲದೆ ಚಿಕ್ಕೋಡಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಡಾ.ರಾಜೇಶ ನೇರ್ಲಿ ಕಾರಿಗೆ ಮುತ್ತಿಗೆ ಹಾಕಿದ ಪ್ರಸಂಗ ಇಂದು ನಡೆದಿದೆ.

ಲಕ್ಷ್ಮಣ ಸವದಿ ಬೆಂಬಲಿಗರು ರಾಜೇಶ ನೇರ್ಲಿ ಕಾರಿಗೆ ಗುದ್ದಿ, ಅವಾಚ್ಯ ಪದಗಳಿಂದ ನಿಂದಿಸುವ ದೃಶ್ಯ ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಅವರ ಮನೆಯ ಮುಂದೆ ನಡೆದಿದೆ. 'ನಮ್ಮ ನಾಯಕ ಲಕ್ಷ್ಮಣ ಸವದಿ ಅವರಿಗೆ ಯಾಕೆ ಟಿಕೆಟ್ ಕೈ ತಪ್ಪಿಸಿದ್ದು ಎಂಬುದಕ್ಕೆ ಉತ್ತರ ಕೊಡಿ' ಎಂದು ಪಟ್ಟು ಹಿಡಿದರು.

ಸವದಿ ಮನೆಯಲ್ಲಿ ರಾಜೇಶ ನೇರ್ಲಿ ಅವರನ್ನು ಲಕ್ಷ್ಮಣ ಸವದಿ ಬೆಂಬಲಿಗರು ಎಳೆದಾಡಿದ್ದಾರೆ. ಕಾರ್ಯಕರ್ತರ ಗದ್ದಲಕ್ಕೆ ಬೆದರಿ ರಾಜೇಶ ನೇರ್ಲಿ ಅವರು ಸವದಿ ಮನೆಯಿಂದ ತಕ್ಷಣ ಕಾಲ್ಕಿತ್ತಿದ್ದಾರೆ.

## ನರೇಗಾ ಕೂಲಿಕಾರರಿಗೆ ಸ್ವೀಪ್ ಸಮೀತಿ ವತಿಯಿಂದ ಮತದಾನ ಮಹತ್ವದ ಅರಿವು

ಬೆಳಗಾವಿ: ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟವಾಗಿದೆ. ಇಲ್ಲಿ ಎಲ್ಲರಿಗೂ ಮತದಾನದ ಹಕ್ಕಿದೆ. ದೇಶದ ಭವಿಷ್ಯಕ್ಕಾಗಿ ನಿಮ್ಮದೊಂದು ಮತ ಅತ್ಯಮೂಲ್ಯವಾದ್ದು, ದೇಶದ ಸುಭದ್ರ ಭವಿಷ್ಯಕ್ಕಾಗಿ ಪ್ರತಿಯೊಬ್ಬರು ತಪ್ಪದೇ ಮತ ಚಲಾಯಿಸಿ, ಪ್ರಜಾಪ್ರಭುತ್ವ ಗೆಲ್ಲಿಸಿ ಎಂದು ತಾಪಂ ಐಇಸಿ ಸಂಯೋಜಕ ಮಲೀಕಜಾನ ಮೋಮಿನ ಮನರೇಗಾ ಕೂಲಿಕಾರರಿಗೆ ತಿಳಿಸಿದರು.

ಸವದತ್ತಿ ತಾಲೂಕಿನ ಹೂಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮನರೇಗಾ ಯೋಜನೆಯಡಿ



ಕಿರುಗಾಲುವೆ ನಿರ್ಮಾಣ ಮಾಡುವ ನರೇಗಾ ಕೂಲಿಕಾರರಿಗೆ , ಕರ್ನಾಟಕ ವಿಧಾನ ಸಭಾ ಸಾರ್ವತ್ರಿಕ ಚುನಾವಣೆ–2023ರ ಅಂಗವಾಗಿ ಮತದಾರರಿಗೆ ಮತದಾನದ ಮಹತ್ವವನ್ನು ಅರಿಯಲು ಸ್ವೀಪ್ ಚಟುವಟಿಕೆ ಹಮ್ಮಿಕೊಂಡು ಪ್ರತಿಜ್ಞಾ ವಿಧಿಯನ್ನು ಭೋದಿಸಲಾಯಿತು.

ಏಪ್ರೀಲ್ 1 ರಿಂದ ನರೇಗಾ ಕೂಲಿ ಮೊತ್ತವು 309 ರಿಂದ 316 ರೂ ಗೆ ಹೆಚ್ಚಿಸಲಾಗಿದೆ. ಯೋಜನೆಯಡಿ ಸಿಗುವ ವೈಯಕ್ತಿಕ ಕಾಮಗಾರಿಗಳ ಸೌಲಭ್ಯಗಳನ್ನು ಪಡೆಯಲು ಮಾಹಿತಿ ತಿಳಿಸಲಾಯಿತು.

ಅಭಿವೃದ್ಧಿ ಅಧಿಕಾರಿ ಎಮ್. ಆಯ್ ಕಳ್ಳಿ ಮಾತನಾಡಿ 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಪ್ರಜೆಯು ಕಡ್ಡಾಯವಾಗಿ ಮತದಾನ ಮಾಡಬೇಕು ವಿಶೇಷ ಚೇತನರು, ಹಿರಿಯ ನಾಗರಿಕರು ಮತದಾನ ಮಾಡುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ತಾಂತ್ರಿಕ ಸಹಾಯಕ ವಿಜಯ ಪೇಠೆ, ಬಿಎಫ್‌ಟಿ ಶಂಕರ ಬಡಿಗೇರ, ಕಾಯಕ ಮಿತ್ರ ರೇಖಾ ಅಂಗಡಿ, ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## ಆರೋಗ್ಯ ಶಿಬಿರದಲ್ಲಿ ಮತದಾನ ಜಾಗೃತಿ

ಬೆಳಗಾವಿ: ತಾಲೂಕು ಸ್ವೀಪ್ ಸಮಿತಿ ಬೈಲಹೊಂಗಲ ಹಾಗೂ ಪಂಚಾಯತ ರಾಜ್ ಇಲಾಖೆ ಮತ್ತು ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಬೈಲಹೊಂಗಲ ತಾಲೂಕಿನ ನಾಗನೂರ ಗ್ರಾಮ ಪಂಚಾಯತ ವ್ಯಾಪ್ತಿಯ ಸಮುದಾಯ ಆರೋಗ್ಯ ಕೇಂದ್ರ ನಾಗನೂರದಲ್ಲಿ ಸಾರ್ವತ್ರಿಕ ಚುನಾವಣೆ 2023 ರ ನಿಮಿತ್ಯವಾಗಿ ಉದ್ಯೋಗ ಖಾತ್ರಿ ಕೂಲಿಕಾರರಿಗೆ ಹಾಗೂ ಸಾರ್ವಜನಿಕರಿಗೆ ಆರೋಗ್ಯ ಶಿಬಿರವನ್ನು ಆಯೋಜನೆ ಮಾಡುವ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ತಾಲೂಕಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್ ಎಸ್ ಸಂಪಗಾವಿ ರವರು ಚಾಲನೆ ನೀಡಿದರು.

ಪ್ರತಿಯೊಬ್ಬ ವ್ಯಕ್ತಿಗೆ ಆರೋಗ್ಯವು ಬಹಳ ಉಪಯುಕ್ತ ಹಾಗೂ ಆದ–ನಿಕ ಆಹಾರದ ಮೊರೆಯಿಂದ ಹೊರಗುಳಿದು ಉತ್ತಮ ಆರೋಗ್ಯಕ್ಕಾಗಿ ಮತ್ತು ಉತ್ತಮ ಭವಿಷ್ಯಕ್ಕಾಗಿ ಆರೋಗ್ಯವು ಎಷ್ಟು




ಮುಖ್ಯವೋ ಅಷ್ಟೇ ಮತದಾನವು ಮುಖ್ಯ ಮತ್ತು ಯಾವುದೇ ಇನ್ನಿತರ ಆಮಿಷಗಳಿಗೆ ಒಳಗಾಗದೆ ಕಡ್ಡಾಯವಾಗಿ ನಿಮ್ಮ ಅಮೂಲ್ಯವಾದ ಮತವನ್ನು ಚಾಲಿಸುವಂತೆ ಅವರು ಕರೆ ನೀಡಿದರು.

ವಿಜಯ ಪಾಟೀಲ ರವರು ಮಾತನಾಡಿ, ಗ್ರಾಮದ ಪ್ರತಿಯೊಬ್ಬರು ಆರೋಗ್ಯವಾಗಿರಬೇಕು ಮತ್ತು ಕಡ್ಡಾಯವಾಗಿ ಮತದಾನವನ್ನು ಸಹ ಮಾಡುವುದು ನಿಮ್ಮೆಲ್ಲರ ಹಕ್ಕು ಮತ್ತು ಕರ್ತವ್ಯ ಎಂದು ತಿಳಿಸುತ್ತಾ ನರೇಗಾ ಕೂಲಿಕಾರರು 100 ದಿವಸ್ ಕೆಲಸವನ್ನು ಪಡದುಕೊಳ್ಳಬೇಕು ಹಾಗೂ ಹೆಚ್ಚಿನ ಮಾನವ ದಿನಗಳನ್ನು ಸೃಜನೆ ಮಾಡಲು ಎಲ್ಲರ ಆರೋಗ್ಯ ಬಹಳ ಮುಖ್ಯ ಎಂದರು

ಗ್ರಾಮಸ್ಥರು ಕಡ್ಡಾಯವಾಗಿ ಮತದಾನವನ್ನು ಮಾಡುವುದು ಹಾಗೂ ಸುಭದ್ರ ಸರ್ಕಾರವನ್ನು ರಚನೆ ಮಾಡಲು ಕಡ್ಡಾಯ ಮತದಾನ ಮಾಡಬೇಕು ಮುಂದುವರೆದು ಪ್ರತಿಯೊಬ್ಬರು ಆರೋಗ್ಯದ ಕಡೆ ಗಮನಹರಿಸಬೇಕು ಶುದ್ಧವಾದ ಕುಡಿಯುವ ನೀರು ಹಾಗೂ ಆಹಾರವನ್ನು ಸೇವನೆ ಮಾಡುವಂತೆ ಡಾ. ಸಾಗರ ದೇಸಾಯಿ ರವರು ತಿಳಿಸಿದರು.

ಡಾ. ಕುಂದರನಾಡ ರವರು ಮಾತನಾಡಿ ನಾಗನೂರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆರೋಗ್ಯಕ್ಕೆ ಸಂಬಂಧಿಸಿದಂತೆ, ಎಲ್ಲಾ ತರಹದ ಸೌಲಭ್ಯಗಳನ್ನು ಒದಗಿಸುವ ಮೂಲಕ ಸುತ್ತಮುತ್ತಿಲಿನ ಗ್ರಾಮಸ್ಥರಿಗೆ ತುಂಬಾ ಸಹಕಾರಿಯಾಗಿದೆ ಮತ್ತು ಎಲ್ಲರೂ ಆರೋಗ್ಯದ ಕಡೆ ಗಮನಹರಿಸಿ ಕಾಲಕಾಲಕ್ಕೆ ತಮ್ಮ ಆರೋಗ್ಯದ ಕಡೆ ಎಚ್ಚರ ವಹಿಸುವಂತೆ ತಿಳಿಸಿದರು.

ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕರದ ವಿಜಯ ಪಾಟೀಲ, ವೈಧ್ಯಾಧಿಕಾರಿಗಳಾದ ಆಯ್ ಕುಂದರನಾಡ ಮತ್ತು ಸಾಗರ ದೇಸಾಯಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಜಿ ಎಫ್ ಮರೆಣ್ಣವರ, ಎಸ್ ಬಿ ಸಂಗನಗೌಡರ ಎಸ್ ವ್ಹಿ ಹಿರೇಮಠ, ನಾಗರಾಜ್ ಕಾಗತಿ, ಬಿ ಕೆ ಹರಿಜನ, ಸನೀಲ್ ತಲ್ಲೂರ ಹಾಗೂ ನರೇಗಾ ಕಾಯಕ ಬಂಧುಗಳು ಮತ್ತು ಕೂಲಿಕಾರರು ಗ್ರಾಮಸ್ಥರು ಒಟ್ಟು 245 ಜನರು ಪಾಲ್ಗೊಂಡು ಶಿಬಿರವನ್ನು ಯಶಸ್ವಿಗೊಳಿಸಿದರು.

## ಕುಡಿಯುವ ನೀರಿನ ಘಟಕ ನಿರ್ವಹಣೆ ಪ್ರಾತ್ಯಕ್ಷಿಕೆ



ಬೆಳಗಾವಿ : ಬೇಸಿಗೆಕಾಲದಲ್ಲಿ ಎದುರಾಗುವ ಸಂಭವನೀಯ ಶುದ್ಧ ಕುಡಿಯುವ ನೀರಿನ ಸಮಸೆ ್ಯಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಹಾಗೂ ಸಮಸ್ಯೆ ತಲೆದೋರದಂತೆ ಮುನ್ನೆಚ್ಚರಿಕೆ ವಹಿಸುವುದಕ್ಕಾಗಿ ತಾಪಂ ವತಿಯಿಂದ ಶುದ್ಧ ಕುಡಿಯುವ ನೀರಿನ ನಿರ್ವಹಣೆ ಕುರಿತು ಗ್ರಾಪಂ ಅಭಿವೃದ್ಧಿ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಪ್ರಾತ್ಯಕ್ಷಿಕೆ ನೀಡಲಾಯಿತು.

ಕಿತ್ತೂರು ತಾಲೂಕಿನ ದೇಗಾಂವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಸರಕೋಡ ಗ್ರಾಮದಲ್ಲಿ ಕುಡಿಯುವ ನೀರಿನ ಘಟಕ್ಕೆ ಸೋಮವಾರ ಭೇಟಿ ನೀಡಿದ ತಾಪಂ ಇಒ ಶ್ರೀ ಸುಭಾಷ ಸಂಪಗಾವಿ ಅವರು, ಫಿಲ್ಟರ್ ಸ್ವಚ್ಛತೆ ಕಾಪಾಡುವುದರ ಅಗತ್ಯತೆ ಹಾಗೂ ಅದರ ಮಹತ್ವವನ್ನು ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಪಿಡಿಓ ಗಳಿಗೆ ನೀರು ಫಿಲ್ಟರ್ ಮಷಿನ್ ನಿರ್ವಹಣೆ ಬಗ್ಗೆ ತರಬೇತಿ ನೀಡಲಾಯಿತು.

ತಹಶೀಲ್ದಾರ್ ರವೀಂದ್ರ ಹಾದಿಮನಿ, ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆಯ ಬೈಲಹೊಂಗಲ ಉಪವಿಭಾಗದ ಸಹಾಯಕ ಕಾರ್ಯಕಾರಿ ಅಭಿಯಂತರ ಎಸ್.ಕೆ. ಮುಕಸಜ್ಜಿ, ಕಿತ್ತೂರ ಹೆಸ್ಕಾಂ ನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಂ.ಕೆ.ಹಿರೇಮಠ, ಸಹಾಯಕ ನಿರ್ದೇಶಕರಾದ ಸುರೇಶ ನಾಗೋಜಿ, ಲಿಂಗರಾಜ ಹಲಕರ್ಣಿಮಠ ಇದ್ದರು.

## ರಂಜಾನ್ ಹಬ್ಬ ಸೌಹಾರ್ದತೆಯ ಸಂಕೇತವಾಗಿದೆ: ಅಸ್ಕಿ

ತಾಳಿಕೋಟೆ: ರಂಜಾನ್ ತಿಂಗಳು ಪ್ರತಿಯೊಬ್ಬ ಮುಸ್ಲಿಂರಿಗೆ ಪವಿತ್ರ ತಿಂಗಳಾಗಿದ್ದು ದೇವರನ್ನು ಸಾಕ್ಷಾತ್ಕಾರ ಮಾಡಿಕೊಳ್ಳುವ ಮಾರ್ಗವಾಗಿದೆ. ಅಲ್ಲದೇ ಇದು ಸೌಹಾರ್ದತೆ ಬೆಸೆಯುವ ಸಂಕೇತವಾಗಿದೆ ಅಸ್ಕಿ ಪೌಂಡೇಶನ್ ಅಧ್ಯಕ್ಷ ಸಮಾಜ ಸೇವಕ ಸಿ.ಬಿ.ಅಸ್ಕಿ(ಕೊಣ್ಣೂರ) ಅವರು ಹೇಳಿದರು.

ಪಟ್ಟಣದ ಕಾಯಪಲ್ಲೆ ಮಾರುಕಟ್ಟೆ ಆವರಣದಲ್ಲಿ ಪವಿತ್ರ ರಂಜಾನ್ ಹಬ್ಬದ ನಿಮಿತ್ಯ ಮುಸ್ಲಿಂ ಬಾಂದವರಿಗಾಗಿ ಅಸ್ಕಿ ಪೌಂಡೇಶನ್ ವತಿಯಿಂದ ಆಯೋಜಿಸಲಾದ ಇಪ್ತಿಯಾರ ಕೂಟ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮುಸ್ಲಿಂ ಬಾಂದವರಿಂದ ಸನ್ಮಾನ ಸ್ವಿಕರಿಸಿ ಮಾತನಾಡುತ್ತಿದ್ದ ಅವರು ಹಬ್ಬ ಹರಿದಿನಗಳು ಪರಸ್ಪರ ಬಾಂದವ್ಯ ಬೆಸೆಯುವಂತವುಗಳಾಗಿವೆ ಎಲ್ಲರೂ ಕೂಡಿ ಹಬ್ಬ ಹರಿದಿನಗಳನ್ನು ಆಚರಿಸಿದರೆ ಸಮಾಜದಲ್ಲಿ ಸಂತೋಷ ನೆಮ್ಮದಿ ಶಾಂತಿ ಸದಾಕಾಲ ನೆಲಸಲಿದೆ ಎಂದ ಅವರು ತಿಂಗಳ ಪರ್ಯಂತ ಮುಸ್ಲಿಂ ಬಾಂದವರು ದೇವರಲ್ಲಿ ಪ್ರಾರ್ಥನೆ ಸಲ್ಲಿಸುವದರೊಂದಿಗೆ ಆಚರಿಸುವ ಪವಿತ್ರ ರಂಜಾನ್ ಹಬ್ಬದಲ್ಲಿ ಕಾಮ, ಕ್ರೋದ, ಮದ, ಮಸ್ತರ ಎಲ್ಲವನ್ನು ತೆಜಿಸಿ ಸಾಮರಸ್ಯದ ಬಧುಕನ್ನು ನಡೆಸಲು ಮುಂದಾಗುತ್ತಾರೆ.

ಅಂತಹ ಪವಿತ್ರ ಹಬ್ಬದಲ್ಲಿ ಉಪವಾಸ ವೃತ ಕೈಗೊಂಡ ಮುಸ್ಲಿಂ ಬಾಂದವರಿಗೆ ಪ್ರತಿವರ್ಷವೂ ಕೊಣ್ಣೂರ ಗ್ರಾಮದಲ್ಲಿ ಇಪ್ತಿಯಾರ(ಭೋಜನ)ಕೂಟವನ್ನು



ಅಸ್ಕಿ ಪೌಂಡೇಶನ್ ವತಿಯಿಂದ ಆಯೋಜಿಸುತ್ತಾ ಬರಲಾಗಿದೆ ಈ ಇಪ್ತಿಯಾರ ಕೂಟವನ್ನು ತಾಲೂಕಿನಾಧ್ಯಂತ ವಿಸ್ತರಿಸಬೇಕೆಂಬ ಇಚ್ಚೆಯೊಂದಿಗೆ ಮುದ್ದೇಬಿಹಾಳ, ನಾಲತವಾಡ, ತಾಳಿಕೋಟೆ ಪಟ್ಟಣದಲ್ಲಿ ಹಮ್ಮಿಕೊಳ್ಳುತ್ತಾ ಬರಲಾಗಿದೆ ಇಂತಹ ಇಪ್ತಿಯಾರ ಕೂಟದಲ್ಲಿ ಪಾಲ್ಗೊಳ್ಳುವುದರಿಂದ ಪ್ರತಿಯೊಬ್ಬರು ಸನ್ಮಾರ್ಗದಲ್ಲಿ ನಡೆಯಲು ಪ್ರೇರಣೆಯಾಗಲಿದೆ, ಆಯೋಜಿಸಲಾಗಿರುವ ಇಪ್ತಿಯಾರ ಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಪಾಲ್ಗೊಳ್ಳುವ ಮೂಲಕ ತೋರಿಸಿರುವ ಪ್ರೀತಿ ಭಾವೈಕ್ಯತೆಗೆ ಸಾಕ್ಷಿಯಾಗಿದೆ ಎಂದರು.

ಇನ್ನೋರ್ವ ಪುರಸಭೆ ಮಾಜಿ ಸದಸ್ಯ ಇಬ್ರಾಹಿಂ ಮನ್ಸೂರ, ಖಾಜಾಹುಸೇನ ಚೌದ್ರಿ ಮಾತನಾಡಿ ಸಾಮರಸ್ಯಕ್ಕೆ ಹೆಸರಾದಂತಹ ತಾಳಿಕೋಟೆ ಪಟ್ಟಣದಲ್ಲಿ ಹಿಂದೂ–ಮುಸ್ಲಿಂ ಬಾಂದವರು ಹಬ್ಬ ಹರಿದಿನಗಳಲ್ಲಿ ಪರಸ್ಪರ ಕೂಡಿಕೊಂಡು ಹಬ್ಬಗಳನ್ನು ಈ ಹಿಂದಿನಿಂದಲೂ ಆಚರಿಸುತ್ತಾ ಬಂದಿದ್ದಾರೆ.

ಆಚರಗಳು ಬೇರೆಯಾದರೂ ವಿಚಾರಗಳು ಒಂದೇ ಆಗಿವೆ ಎಂದ ಅವರು ಸಾಮರಸ್ಯದ ಹಾದಿಯಲ್ಲಿ ಜನರನ್ನು ಕೊಂಡೊಯಲು ಕೊಣ್ಣೂರಿನ ಸಿ.ಬಿ.ಅಸ್ಕಿ ಪರಿವಾರ ಮುಸ್ಲಿಂ ಬಾಂದವರ ಮೇಲಿಟ್ಟ ಪ್ರೀತಿ ಅಘಾದವಾದುದ್ದಾಗಿದೆ.

ರಂಜಾನ್ ಹಬ್ಬದ ಸಮಯದಲ್ಲಿ ಪ್ರತಿವರ್ಷವೂ ಇಪ್ತಿಯಾರಕೂಟ ಆಯೋಜಿಸಿ ಸಮಾಜದಲ್ಲಿ ಸಾಮರಸ್ಯವನ್ನು ಬಿತ್ತುವಂತಹ ಕೆಲಸ ಮಾಡುತ್ತಿರುವ ಸಮಾಜ ಸೇವಕ ಸಿ.ಬಿ.ಅಸ್ಕಿ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದ ಅವರು ಹಣ ಸಾಕಷ್ಟು ಜನರ ಬಳಿ ಇದೆ ಆದರೆ ಅದರಲ್ಲಿ ಸಮಾಜ–ಕ್ಕಾಗಿ ಸ್ವಲ್ಪ ಉಪಯೋಗಿಸುವ ಮನೋಭಾವನೆ ಇರುವದಿಲ್ಲಾ ಸಿ.ಬಿ.ಅಸ್ಕಿ ಅವರು ಹಣಕ್ಕಿಂತ ಜನಪ್ರೀತಿ ದೊಡ್ಡದು ಎಂದು ಅರೀತುಕೊಂಡು ಸಮಾಜ ಸೇವೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದಾರೆ ಹಿಂದೂ ದೇವಾಲಯಗಳಿರಲಿ, ಮುಸ್ಲಿಂ ಮಸೀದಿ ದರ್ಗಾಗಳಿರಲಿ ಎಲ್ಲವುಗಳ ಕಟ್ಟಡಗಳಿಗೆ ಸದಾ ಸಹಾಯ ಹಸ್ತ ಚಾಚುತ್ತಾ ಬಂದಿದ್ದಾರೆ ಇವರ ಸೇವೆ ಹೀಗೆ ಮುಂದುವರೆಯಲಿ ದೇವರು ಸಮಾಜಕ್ಕೆ ಇನ್ನಷ್ಟು ಹೆಚ್ಚಿನ ಸೇವೆ ಒದಗಿಸುವ ಶಕ್ತಿ ನೀಡಲಿ ಎಂದರು.

## ಮನುಜ ಕುಲದ ಚಿತ್ಸೂರ್ಯ ಶ್ರೀ ಜಗದ್ಗುರು ರೇಣುಕಾಚಾರ್ಯರು: ಶ್ರೀ ರಂಭಾಪುರಿ ಜಗದ್ಗುರು

ಅಜ್ಜಂಪುರ: ಶಿವನಿಂದ ಬೋಧಿಸಲ್ಪಟ್ಟ ಶಿವಾಗಮಗಳ ಸಾರವನ್ನು ಸಿದ್ಧಾಂತ ಶಿಖಾಮಣಿಯಲ್ಲಿ ಕಾಣಬಹುದು. ಶ್ರೀ ಜಗದ್ಗುರು ರೇಣುಕಾಚಾರ್ಯರು ಶಿವಾದ್ವೈತ ಸಿದ್ಧಾಂತದ ಚಿತ್ಸೂರ್ಯರೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಶಿವನಿ ಗ್ರಾಮದ ಬಯಲು ರಂಗಮಂದಿರದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಅತ್ಯಂತ ಪ್ರಾಚೀನ ಇತಿಹಾಸ ಮತ್ತು ಪರಂಪರೆ ಹೊಂದಿದ ವೀರಶೈವ ಧರ್ಮ ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸುತ್ತಾ ಬಂದಿದೆ. ಅಂಗ ಲಿಂಗವಾಗುವ ಮತ್ತು ಜೀವಾತ್ಮ ಪರಮಾತ್ಮನಾಗುವ ಸಾಧನ ಮಾರ್ಗವನ್ನು ಅರ್ಥಪೂರ್ಣವಾಗಿ



ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದನ್ನು ಮರೆಯಲಾಗದು. ಸತ್ಯ ಸೈದ್ಧಾಂತಿಕದ ಮೇಲೆ ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ದಾರಿ ತೋರಿದ ಯುಗ ಪುರುಷರು ಶ್ರೀ ಜಗದ್ಗುರು ರೇಣುಕಾಚಾರ್ಯರು. ಕಣ್ಣು ಜಗತ್ತನ್ನೆಲ್ಲ ಕಂಡರೂ ತನ್ನ ಮುಖ ತನಗೆ ಕಾಣದು. ಮುಖ ನೋಡಲು ಮುಕುರ ಬೇಕಾಗುವಂತೆ ಅಜ್ಞಾನ ಕಳೆಯಲು ಜ್ಞಾನದ ಬೆಳಕು ತೋರಲು ಗುರುವಿನ ಮಾರ್ಗದರ್ಶನ ಅವಶ್ಯಕ. ತಿಳುವಳಿಕೆಗಿಂತ ನಡವಳಿಕೆ ಬಹು ಮುಖ್ಯವೆಂದು ಸಾರಿದ ಅವರು ಮನುಷ್ಯ ಎಷ್ಟೇ ಸಿರಿವಂತನಾದರೂ ಗುಣಕ್ಕೆ ಬೆಲೆ ಜಾಸ್ತಿ.

ನೋವುಗಳ ನಡುವೆ ನೆಮ್ಮದಿ ಪಡೆಯುವುದೇ ನಿಜವಾದ ಜೀವನ. ಜಾತಿ ಮತ ಪಂಥಗಳ ಗಡಿ ಮೀರಿ ಸಾಮರಸ್ಯ ಬದುಕಿಗೆ ಧರ್ಮದ ದಶವಿಧ ಸೂತ್ರಗಳನ್ನು ಬೋಧಿಸಿ ಉದ್ಧರಿಸಿ ಶಿವತಪ, ಶಿವಕರ್ಮ, ಶಿವಜಪ, ಶಿವಧ್ಯಾನ ಮತ್ತು ಶಿವಜ್ಞಾನದ ಮೂಲಕ ಬದುಕನ್ನು ಶ್ರೀಮಂತಗೊಳಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದರು.

ಹುಲಿಕೆರೆ ವಿರೂಪಾಕ್ಷ ಶಿವಾಚಾರ್ಯರು, ತರೀಕೆರೆ ಜಗದೀಶ ಶಿವಾಚಾರ್ಯರು, ಹುಣಸಘಟ್ಟ ಗುರುಮೂರ್ತಿ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ಚಿಕ್ಕಮಗಳೂರು ಚಂದ್ರಶೇಖರ ಶಿವಾಚಾರ್ಯರು, ಕೆ.ಬಿದರೆ ಪ್ರಭುಕುಮಾರ ಶಿವಾಚಾರ್ಯರು, ತೆಂಡೇಕೆರೆ ಗಂಗಾಧರ ಶಿವಾಚಾರ್ಯರು, ನಂದೀಪುರ ನಂದೀಶ್ವರ ಶಿವಾಚಾರ್ಯರು, ಬೀರೂರು ರುದ್ರಮುನಿ ಶಿವಾಚಾರ್ಯರು, ಹಣ್ಣೆ ಮರುಳಸಿದ್ಧ ಶಿವಾಚಾರ್ಯರು, ತಾವರೆಕೆರೆ ಅಭಿನವ ಸಿದ್ಧಲಿಂಗ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಎಸ್.ವಿ. ಗಂಗಾಧರಯ್ಯನವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಪಿ.ಶಿವಮೂರ್ತಿ ವಿಶೇಷ ಉಪನ್ಯಾಸವನ್ನಿತ್ತರು. ಅಧ್ಯಕ್ಷತೆ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಮಲತ್ರಯಗಳನ್ನು ದೂರಮಾಡಿ ಶಿವಜ್ಞಾನ ಉಂಟು ಮಾಡುವ ಶ್ರೀ ಗುರುವಿನ ಮಹಿಮೆ ಅಪಾರ. ಯುಗಪುರುಷರಾದ ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ ಬದುಕಿಗೆ ದಶವಿಧ ಸೂತ್ರಗಳನ್ನು ಬೋಧಿಸಿದ್ದಾರೆ ಎಂದರು.

ಚಿಕ್ಕಮಗಳೂರು ಅ.ಭಾ.ವೀ. ಮಹಾಸಭಾ ಜಿಲ್ಲಾಧ್ಯಕ್ಷ ಹೆಚ್. ಎಂ.ಲೋಕೇಶ, ಜಿ.ವಿ.ಯೋಗೀಶ್, ಸಿ.ಎಸ್.ಪ್ರಭುಲಿಂಗಶಾಸ್ತ್ರೊ. ಎ.ಎಸ್. ಆರಾಧ್ಯ, ಸಿ.ರಾಮಚಂದ್ರಪ್ಪ, ಎಸ್. ಎಸ್.ಶ್ರೀಕಂಠಪ್ಪ, ಕೆ.ಹೆಚ್.ರಾಜಣ್ಣ, ಎಸ್.ಪಿ.ಮಂಜುನಾಥ ಹಾಗೂ ವಿ.ಕೆ. ಕುಮಾರಸ್ವಾಮಿ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಹರಸಿದರು.

ಸಮಾರಂಭಕ್ಕೂ ಮುನ್ನ ಸಾರೋಟದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಭವ್ಯ ಮೆರವಣಿಗೆ ಮೂಲಕ ಬರಮಾಡಿಕೊಂಡರು.

## ಹರಪನಹಳ್ಳಿಯಿಂದ ಮತ್ತೆ ಕರುಣಾಕರರೆಡ್ಡಿ ಸ್ಪರ್ಧೆಗೆ ಟಿಕೆಟ್ ಘೋಷಣೆ



ಬಳ್ಳಾರಿ: ನಗರದವರೇ ಆದ ಶಾಸಕ ಗಾಲಿ ಕರುಣಾಕರ ರೆಡ್ಡಿ ಅವರಿಗೆ ಬಿಜೆಪಿ ಎರಡನೇ ಪಟ್ಟಿಯಲ್ಲಿ ಹರಪನಹಳ್ಳಿಯಿಂದ ಮತ್ತೆ ಸ್ಪರ್ಧೆ ಮಾಡಲು ಟಿಕೆಟ್ ಘೋಷಣೆ ಮಾಡಿದೆ.

ನಿರೀಕ್ಷೆಯಂತೆ ಮೊದಲ ಪಟ್ಟಿಯಲ್ಲಿಯೇ ಪ್ರಕಟವಾಗಬೇಕಿತ್ತು. ಆದ್ಯಾವ ಕಾರಣಕ್ಕೆ ತಪ್ಪಿತ್ತೋ ತಿಳಿಯದು.

ಆದರೆ ಬುಧವಾರ ರಾತ್ರಿ ಪ್ರಕಟಿಸಿದ ಎರಡನೇ ಪಟ್ಟಿಯಲ್ಲಿ ಘೋಷಣೆ ಆಗಿದೆ. ಹರಪನಹಳ್ಳಿಯಿಂದ ಇವರು 2008 ಮತ್ತು 2018 ರಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದರು. ಯಡಿಯೂರಪ್ಪ ಅವರ ಸಂಪುಟದಲ್ಲಿ ಕಂದಾಯ ಸಚಿವರಾಗಿದ್ದರು.

2008ರಲ್ಲಿ ದಿ. ಉಪಮುಖ್ಯಮಂತ್ರಿ ಎಂ.ಪಿ.ಪ್ರಕಾಶ್ ಅವರನ್ನು ಸೋಲಿಸಿದ್ದರು. ಆದರೆ ಈ ಕ್ಷೇತ್ರದಿಂದ 2013 ರಲ್ಲಿ ಪ್ರಕಾಶ್ ಅವರ ಪುತ್ರ ಎಂ.ಪಿ.ರವೀಂದ್ರ ಅವರಿಂದ ಸೋಲು ಕಂಡಿದ್ದರು.

ಸೇಡಿಗೆ ಸೇಡು ಎಂಬಂತೆ 2018 ರಲ್ಲಿ ರವೀಂದ್ರ ಅವರನ್ನು ಸೋಲಿಸಿದರು. ಈಗ ಎಂ.ಪಿ.ಪಿ ಅವರ ಪುತ್ರಿಯರು ಸೇರಿದಂತೆ ಹಲವರು ಇವರ ವಿರುದ್ಧ ಸ್ಪರ್ಧೆಗೆ ಸಿದ್ಧತೆ ನಡೆಸಿದ್ದಾರೆ. ಕರುಣಾಕರ ರೆಡ್ಡಿ ಅವರು ಮೂರನೇ ಬಾರಿಗೆ ವಿಧಾನಸೌಧ ಪ್ರವೇಶ ಏನಾಗಲಿದೆ ಎಂಬುದರ ಬಗ್ಗೆ ಕ್ಷೇತ್ರದ ಮತದಾರ ತೀರ್ಮಾನ ಮಾಡಬೇಕಿದೆ.

# 15 ವರ್ಷ ಜನಸೇವೆಗೆ ಅವಕಾಶ ನೀಡಿದ್ದು, ಈ ಭಾರೀಯೂ ಆಶೀರ್ವದಿಸಿ: ಸತೀಶ್ ಜಾರಕಿಹೊಳಿ

ಯಮಕನಮರಡಿ: ಯಮಕನಮರಡಿ ಮತಕ್ಷೇತ್ರದ ಜನ ಕಳೆದ 15 ವರ್ಷಗಳ ಕಾಲ ಜನ ಸೇವೆ ಮಾಡಲು ಅವಕಾಶ ನೀಡಿದ್ದು, ಈ ಭಾರೀಯೂ ಪ್ರೀತಿ, ವಿಶ್ವಾಸ ಜತೆ ಬೆಂಬಲ ನೀಡಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಮುಚ್ಚಂಡಿ ಗ್ರಾಮದಲ್ಲಿ ಸರಣಿ ಸಭೆಗಳನ್ನು ನಡೆಸಿ ಮಾತನಾಡಿದ ಅವರು, ಕಳೆದ 15 ವರ್ಷಗಳಿಂದ ಯಮಕನಮರಡಿ ಮತಕ್ಷೇತ್ರದ ಜನರ ಸೇವೆಯಲ್ಲಿ ತೊಡಗಿ ನಿರಂತರವಾಗಿ ಜನರ ಸಂಪರ್ಕದಲ್ಲಿದ್ದೇನೆ. ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ನೀಡುವುದರ ಮೂಲಕ ಮಾದರಿ ಕ್ಷೇತ್ರವಾಗಿ ಮಾಡಲು ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ.

ಕ್ಷೇತ್ರದ ಜನ ಈ ಭಾರೀಯೂ ಮತ್ತೊಮ್ಮೆ ಆಶೀರ್ವಾದಿಸಬೇಕೆಂದು ಮನವಿ ಮಾಡಿದರು.

ನಾವು ಅಧಿಕಾರಕ್ಕೆ ಬರುವ ಮುನ್ನ ಯಾವ ರೀತಿ



ಮುಚ್ಚಂಡಿ, ಕಲಖಾಂಬ ಗ್ರಾಮದ ಸ್ಥಿತಿ ಹೇಗಿ–ತ್ತು ಎಂಬುವುದನ್ನು ನೀವು ನೋಡಿದ್ದಿರಿ. ಆದ–'ರೆ ಈಗ ಮುಚ್ಚಂಡಿ, ಕಲಖಾಂಬ ಮೂಲಭೂತ ಸೌಕರ್ಯವುಳ್ಳ ಗ್ರಾಮವಾಗಿದೆ. ಹೀಗಾಗಿ ಅಭಿವೃದ್ಧಿಗೆ ಆದ್ಯತೆ ನೀಡುವ ನನ್ನನ್ನು ಬೆಂಬಲಿಸಬೇಕು. ಜತೆಗೆ ನಾವು ಕ್ಷೇತ್ರದಲ್ಲಿ ಶಿಕ್ಷಣಕ್ಕೂ ಪ್ರಾಶಸ್ತೆ ನೀಡಿದ್ದೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮುಚ್ಚಂಡಿ, ಕಲಖಾಂಬ ಗ್ರಾಮದ ಗ್ರಾಪಂ ಅಧ್ಯಕ್ಷರು, ಸದಸ್ಯರು, ಕಾಂಗ್ರೆಸ್ ಮುಖಂಡರು ಇದ್ದರು.

# ನಾನೇನಾದ್ರೂ ರೇಪ್ ಮಾಡಿದ್ನಾ: ಟಿಕೆಟ್ ಕೈತಪ್ಪಿದ್ದಕ್ಕೆ ಸವದಿ ಬೇಸರ

ಬೆಳಗಾವಿ: ನನ್ನನ್ನು ಯಾಕೆ ಡಿಸಿಎಂ ಸ್ಥಾನದಿಂದ ತೆಗದ್ರಿ? ಏನ್ ತಪ್ಪು ಮಾಡಿದ್ದೆ, ಯಾರನ್ನಾದರೂ ರೇಪ್ ಮಾಡಿದ್ನಾ? ಯಾವ ಅಪರಾಧದ ಮೇಲೆ ತೆಗೆದು ಹಾಕಿದ್ರಿ ಎಂದು ಮಾಜಿ ಸಚಿವ ಲಕ್ಷ್ಮಣ ಸವದಿ ಅಸಮಾಧಾನ ವ್ಯಕ್ತಪಡಿಸಿದರು.

ಸೋತರು ಪಕ್ಷ ಡಿಸಿಎಂ ಮಾಡಿದ್ರು ಪಕ್ಷ ಬಿಡ್ತಿದ್ದಾರೆ ಎಂದು ಬಿಜೆಪಿ ನಾಯಕರ ಮಾತಿಗೆ ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ ಅವರು, ಡಿಸಿಎಂ ಸ್ಥಾನ ಕೊಡಬೇಕೆಂದು ನಾನು ಕೇಳಿದ್ನಾ? ನನಗೆ ಕೊಟ್ಟ ಮೇಲೆ ಕೆಲಸ ಮಾಡಿದೆ ಎಂದ ಅವರು, ಮೊದಲು ಪಕ್ಷದ ಸದಸ್ಯತ್ವ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ. ಬಿಜೆಪಿ ಬಿಡುವ ನನ್ನ ನಿರ್ಧಾರ ಅಚಲ. ಅದನ್ನು ಪ್ರಕಟ ಮಾಡುವ ಪೂರ್ವದಲ್ಲಿ ಏನು ಹೇಳಲ್ಲ. ಪಕ್ಷದಿಂದ ಹೊರಗೆ ಬಂದು ತೀರ್ಮಾನ ಮಾಡುವೆ. ಅಥಣಿ ಹೈಕಮಾಂಡ್ ತೀರ್ಮಾನ ಬಳಿಕ ಎಲ್ಲವೂ ಗೊತ್ತಾಗಲಿದೆ ಎಂದು ಎಚ್ಚರಿಕೆ ನೀಡಿದರು.

ಸಿಎಂ ಬೊಮ್ಮಾಯಿ ಅವ–ರಿಂದ ಟಿಕೆಟ್ ಕೈತಪ್ಪಿತ್ತಾ ಪ್ರಶ್ನೆಗೆ ಪ್ರತಿಕ್ರಿಯಿಸಿ, ಬೊಮ್ಮಾಯಿ ಅವರು



ಹಳೆ ಸ್ನೇಹಿತರು. ಅವರೊಂದು ಪಕ್ಷ, ನಾನೊಂದು ಪಕ್ಷದಲ್ಲಿ ಇದ್ದೆವು. ಅವರ ವಿಚಾರಧಾರೆ ಬೇರೆ ನನ್ನ ವಿಚಾರಧಾರೆ ಬೇರೆ ಆಗಿತ್ತು. ಆನಂತರ ಒಂದೇ ಪಕ್ಷದಲ್ಲಿ ಒಟ್ಟಾಗಿ, ನಾನು ಅವರು ಸಚಿವರಾಗಿ ಕೂಡಿ ಕೆಲಸ ಮಾಡಿದ್ದೇವೆ. ಅನೇಕ ಮುಖಂಡರು ನನ್ನ ನಿರ್ಲಕ್ಷ್ಯ ಮಾಡಿದ್ದಕ್ಕೆ ಬೇಸರವಾಗಿದೆ ಎಂದು ಹೇಳಿದರು.

ಟಿಕೆಟ್ ತಪ್ಪಿದ್ದಕ್ಕೆ ಪಕ್ಷ ಬಿಡ್ತಿದ್ದಾರೆ ಅಂತಾ ಮೇಲ್ನೋಟಕ್ಕೆ ಕಾರಣ ಅನಿಸುತ್ತದೆ.

ಆದರೆ ನನಗಾಗಿರೋ ನೋವು, ಹಿಂಸೆ ಬಹಳಷ್ಟು ಇದೆ. ಆಂತ–ರಿಕ ಹಿಂಸೆಗಳು ಜಿಲ್ಲೆ, ರಾಜ್ಯದಲ್ಲಿ ಅನುಭವಿಸಿರುವೆ. ನನ್ನ ಪಕ್ಷ ತಾಯಿ ಅಂತಾ ತಿಳಿದು ಸುಮ್ಮನಿದ್ದೆ.

ರಾಷ್ಟ್ರೀಯ ನಾಯಕರು ಬಂದಾಗ ವೇದಿಕೆ ಹಂಚಿಕೊಳ್ಳಲು ಆಗಿಲ್ಲ. ನನ್ನ ನೋವು ತಡೆದುಕೊಂಡು ಬಂದಿದ್ದೆ ಎಂದು ಬೇಸರ ವ್ಯಕ್ತಪಡಿಸಿದರು.

ಡಿಸಿಎಂ ಸ್ಥಾನದಿಂದ ಯಾವುದೇ ಸೂಚನೆ ಇಲ್ಲದೇ ತೆಗೆದರು. ನಾನು ವಿರೋಧ ಮಾಡಿಲ್ಲ. ನಾನು ಎಂದು ಪಕ್ಷ ವಿರೋಧಿ, ಟೀಕೆ ಟಿಪ್ಪಣಿ ನಾನು ಮಾಡಿಲ್ಲ. ನನಗೆ ಯಾರ ಮೇಲೂ ದ್ವೇಷ, ಅಸೂಯೆ ಇಲ್ಲ. ಇನ್ನೊಬ್ಬರಿಗೆ ನಾನು ಮನಸು ನೋವು ಮಾಡಲ್ಲ. ಅವ–ರಿಗೆ ಕೆಡಕು ಬಯಸುವುದಿಲ್ಲ ಎಂದರು.

# ಅಕ್ಕಮಹಾದೇವಿ ಜಯಂತಿ ಆಚರಣೆ



ಬೆಳಗಾವಿ: ಲಿಂಗಾಯತ ಮಹಿಳಾ ಸಮಾಜ ವತಿಯಿಂದ ವೀರವಿರಾಗಿಣಿ, ಶಿವಶರಣೆ ಅಕ್ಕಮಹಾದೇವಿಯವರ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಗರದ ಲಿಂಗಾಯತ ಭವನದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ–ಯಾಗಿ ಆಗಮಿಸಿದ್ದ ಹಿರಿಯ ಸಾಹಿತಿ ನೀಲಗಂಗಾ ಚರಂತಿಮಠ ಅವರು ಮಾತನಾಡಿ, ಅಕ್ಕಮಹಾದೇವಿ ಅವರು ತ್ಯಾಗಿಯಾಗಿ, ವಿರಾಗಿಯಾಗಿ, ಭೋಗವನ್ನು ತೊರೆದು ಬಹು ದೂರ ಹೋದವಳು, ಇಂದು ನಮ್ಮ ಮನಸಿನಂಗಳದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ. ನಾವೆಲ್ಲಾ ಬಸವಣ್ಣನವರು, ಅಕ್ಕಮಹಾದೇವಿ, ಅಲ್ಲಮಪ್ರಭು, ಸಿದ್ಧರಾಮೇಶ್ವರ, ಚನ್ನಬಸವಣ್ಣನವರ ಅನುಯಾಯಿಗಳು. ಅಹಿಂಸೆ, ಧರ್ಮ, ತ್ಯಾಗ, ಕಾಯಕ, ದಾಸೋಹ ತತ್ವಗಳ ಪ್ರತಿನಿಧಿಯಾಗಿ ಇಂದು ನಾವೆಲ್ಲಾ ಬದುಕುತ್ತಿದ್ದೇವೆ ಎಂದರು.

ಹೆಣ್ಣು ಮಕ್ಕಳಿಗೆ ಯಾವುದೇ ಸ್ವಾತಂತ್ರ್ಯ ಇಲ್ಲದ ಕಾಲಘಟ್ಟದಲ್ಲಿ ಹೆಣ್ಣು ಮಕ್ಕಳಿಗೆ ಸಮಾನತೆ ಕೊಟ್ಟವರು ಬಸವಾದಿ ಶಿವಶರಣರು. ಹೆಣ್ಣು ದೇವ–ರಿಗೆ ಸಮಾನವೆಂದು ಇಷ್ಟಲಿಂಗದ ಮೂಲಕ ಹೆಣ್ಣು ಮಕ್ಕಳಿಗೂ ಪೂಜಿಸುವ, ದೇವರನ್ನು ಮುಟ್ಟುವ ಅಧಿಕಾರ ಕೊಟ್ಟಿದ್ದು ಬಸವಣ್ಣನವರು ಧ್ವನಿ ಎಂದು ಸ್ಮರಿಸಿಕೊಂಡರು.

ಬಳಿಕ ಅಕ್ಕಮಹಾದೇವಿಯವರ ವಚನಗಳನ್ನು ಲಿಂಗಾಯತ ಮಹಿಳೆಯರು ಪ್ರಸ್ತುತ ಪಡಿಸಿದರು. ಲಿಂಗಾಯತ ಮಹಿಳಾ ಸಮಾಜದ ಸಂಸ್ಥಾಪಕಿ ಶೈಲಜಾ ಭಿಂಗೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ವೇಳೆ ನೀಲಗಂಗಾ ಚರಂತಿಮಠ ಮತ್ತು ಕದಳಿ ಮಹಿಳಾ ವೇದಿಕೆ ಗೌರವ ಅಧ್ಯಕ್ಷೆ ರಾಜೇಶ್ವರಿ ಕವಟಗಿಮಠ ಅವರನ್ನು ಸತ್ಕರಿಸಲಾಯಿತು. ಲಿಂಗಾಯತ ಮಹಿಳಾ ಸಮಾಜದ ಅಧ್ಯಕ್ಷೆ ವೀಣಾ ಚಿನ್ನಣ್ಣವರ ಅಧ್ಯಕ್ಷತೆ ವಹಿಸಿದ್ದರು.

ಪ್ರತಿಭಾ ಕಳ್ಳಿಮಠ ನಿರೂಪಿಸಿದರು. ರಕ್ಷ ದೇಗಿನಾಳ ವಂದಿಸಿದರು. ಲಿಂಗಾಯತ ಮಹಿಳಾ ಸಮಾಜದ ಸದಸ್ಯೆಯರು ಮತ್ತಿತರರು ಉಪಸ್ಥಿತರಿದ್ದರು.

# ಮುರುಗೇಶ ನಿರಾಣಿ ನಾಮಪತ್ರ ಸಲ್ಲಿಕೆ



ಬಾಗಲಕೋಟೆ: ಜಿಲ್ಲೆಯ ಬೀಳಗಿ ವಿಧಾನಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಮುರುಗೇಶ ನಿರಾಣಿ ನಾಮಪತ್ರ ಸಲ್ಲಿಸಿದರು.

ಬೀಳಗಿ ತಹಶೀಲ್ದಾರ ಕಚೇರಿಗೆ ತೆರಳಿ ತಮ್ಮ ಉಮೇದುವಾ–ರಿಕೆಯನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.



**ಅಭಿಮಾನಿಗಳು ಮತ್ತು ಕಾರ್ಯಕರ್ತರನ್ನು ಸಮಾಧಾನ ಮಾಡುತ್ತಿರುವ ಶಾಸಕ ಮಹದೇವಪ್ಪ ಯಾದವಾಡ.**

# ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಘೋಷಿಸಿದ ಬಿಜೆಪಿ ಸಂಸದ ಶ್ರೀನಿವಾಸ್ ಪ್ರಸಾದ್

ಬೆಂಗಳೂರು: ಚಾಮರಾಜನಗರ ಸಂಸದ ಶ್ರೀನಿವಾಸ್ ಪ್ರಸಾದ್ ರಾಜಕೀಯಕ್ಕೆ ವಿದಾಯ ಘೋಷಿಸಿದ್ದಾರೆ. ಗುಂಡ್ಲುಪೇಟೆಯಲ್ಲಿ ತಮ್ಮ ಪಕ್ಷದ ಅಭ್ಯರ್ಥಿ ಸಿಎಸ್ ನಿರಂಜನ್ ಕುಮಾರ್ ಪರ ಪ್ರಚಾರ ನಡೆಸಿ ಮಾತನಾಡಿದ ಅವರು, ಲೋಕಸಭೆ ಅವಧಿ ಮುಗಿದ ತಕ್ಷಣ ರಾಜಕೀಯಕ್ಕೆ ವಿದಾಯ ಹೇಳ್ತೇನೆ ಎಂದಿದ್ದಾರೆ.

ಮುಂದಿನ ವರ್ಷ ನನ್ನ ಲೋಕಸಭಾ ಸದಸ್ಯತ್ವದ ಅವಧಿ ಮುಕ್ತಾಯವಾಗಲಿದೆ. ಆ ಬಳಿಕ ನಾನು ಯಾವುದೇ ಚುನಾವಣೆಗೆ ಸ್ಪರ್ಧಿಸುವುದಿಲ್ಲ. ನಾನು



ಪ್ರಮಾಣಿಕವಾಗಿ, ಯಾವುದೇ ಆರೋಪಗಳಿಲ್ಲದೇ ಕೆಲಸ ಮಾಡಿದ್ದೇನೆ.

ಬರೋಬ್ಬರಿ 14 ಚುನಾವಣೆಗಳನ್ನು ಎದು–ರಿಸಿದ್ದೇನೆ. ನನಗೆ ರಾಜಕೀಯ ಸಾಕು, ಈಗಲೇ ವೇದಿಕೆ ಮೇಲೆ ಭಾಷಣ ಮಾಡುವ ಶಕ್ತಿ ಇಲ್ಲ ಎಂದರು.

ಮುಂದುವರಿದು ಮಾತನಾಡಿದ ಅವರು, ಇದು ನನ್ನ ರಾಜ–ಕೀಯದ ಕೊನೆ ಚುನಾವಣೆಯ ಪ್ರಚಾರ. 2024ರಲ್ಲಿ ಲೋಕಸಭೆ ಚುನಾವಣೆ ನಡೆಯುತ್ತಿದೆ. ನನಗೆ ಸಾಕಾಗಿದೆ. ನಾನು ಸ್ಪರ್ಧೆ ಮಾಡಲ್ಲ.

ಜನ ಮೆಚ್ಚುವ ಕೆಲಸವನ್ನು ನಾನು ಮಾಡಿದ್ದೇನೆ. ಇಂದಿರಾ ಗಾಂಧಿಯಿಂದ ಹಿಡಿದು ಮೋದಿಯವರೆಗೆ 7 ಪ್ರಧಾನಿಗಳನ್ನು ನಾನು ಕಂಡಿದ್ದೇನೆ ಎಂದರು.

# ಚುನಾವಣೆಗೆ ದುಡ್ಡು ಮಾನದಂಡವಲ್ಲ: ಡಾ.ಹಾರುಗೊಪ್ಪ

ಬೆಳಗಾವಿ: ರಾಷ್ಟ್ರೀಯ ಪಕ್ಷಗಳು ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳ ಸಾಮಾಜಿ–ಕ ಸೇವೆಯನ್ನು ಗುರುತಿಸಿ ಪಕ್ಷದ ಟಿಕೆಟ್ ನೀಡಬೇಕು ವಿನಃ ದುಡ್ಡನ್ನು ಮಾನದಂಡವಾಗಿ ಪರಿಗಣಿಸಬಾರದು ಎಂದು ಕಿತ್ತೂರು ಮತಕ್ಷೇತ್ರದ ಬಿಜೆಪಿ ಪಕ್ಷದ ಬಂಡಾಯ ಅಭ್ಯರ್ಥಿ ಡಾ.ಜಗದೀಶ ಹಾರುಗೊಪ್ಪ ಆಕ್ರೋಶ ವ್ಯಕ್ತಪಡಿಸಿದರು.

ಬೆಳಗಾವಿ ಜಿಲ್ಲೆಯ ಕಿತ್ತೂರು ಮತಕ್ಷೇತ್ರದ ಎಂ.ಕೆ. ಹುಬ್ಬಳ್ಳಿಯ ತಮ್ಮ ನಿವಾಸದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಇಂದಿನ ವ್ಯವಸ್ಥೆ ನೋಡಿದರೇ ಕೇವಲ ಬಂಡವಾಳಶಾಹಿಗಳು ಮಾತ್ರ ರಾಜಕಾರಣ ಮಾಡುವಂತಾಗಿದೆ. ಇದು ಪ್ರಜಾಪ್ರಭುತ್ವದ ದುರಂತವೇ ಸರಿ. ಇದೇ ಪರಿಸ್ಥಿತಿ ಮುಂದುವರೆದರೇ ಮುಂಬರುವ ಹತ್ತು ವರ್ಷಗಳಲ್ಲಿ ನಮ್ಮ ಸಮಾಜ ಅದೋಗತಿಗೆ ತಳ್ಳಲ್ಪಡುತ್ತದೆ. ಮದ್ಯಪಾನ ನಿಷೇದ, ಗೋಹತ್ಯಾ ನಿಷೇದ, ಪ್ಲ್ಯಾಸ್ಟಿಕ್ ನಿಷೇದ, ಸಾವಯವ ಕೃಷಿ, ಸುಸ್ಥಿರ ಬೆಳವಣಿಗೆ, ಆಡಳಿತ ಸುಧಾರಣೆ,



ಭ್ರಷ್ಟಾಚಾರ ಮುಕ್ತ ಸಮಾಜ ಇವುಗಳು ಚುನಾವಣೆಯ ಮುಖ್ಯ ವಿಷಯಗಳಾಗಬೇಕು ಎಂದ ಅವರು, ನಮ್ಮ ಸಮಾಜ ಸುಭದ್ರವಾಗ ಬೇಕಾದಲ್ಲಿ ಒಳ್ಳೆಯ ಪ್ರಜ್ಞಾವಂತ ಜನ ರಾಜಕೀಯದಿಂದ ವಿಮುಕ್ತರಾಗಕೂಡದು ಎಂದರು.

ನಾನು ಕಳೆದ ಇಪ್ಪತ್ತು ವರ್ಷಗಳಿಂದ ಆರ್‌ಎಸ್‌ಎಸ್ ಸಂಘದ ಸ್ವಯಂ ಸೇವಕನಾಗಿ, ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ನಿಸ್ವಾಥ–'ರ್ವಾಗಿ ಸೇವೆ ಸಲ್ಲಿಸಿದ್ದು, ಕಳೆದ ಸಾರ್ವತ್ರಿಕ ಚುನಾವಣೆ ಯಲ್ಲಿಯೂ ಬಿಜೆಪಿ ಪಕ್ಷದ ಟಿಕೆಟ್ ಆಕಾಂಕ್ಷಿಯಾಗಿದ್ದರೂ ಪಕ್ಷ ಬೇರೆಯವರಿಗೆ ಮಣೆ ಹಾಕಿತ್ತು.

ಈ ಸಲವೂ ನಾನು ಬಿಜೆಪಿ ಪಕ್ಷದ ಪ್ರಭಲ ಟಿಕೆಟ್ ಆಕಾಂಕ್ಷಿ ಆಗಿದ್ದರೂ ಮತ್ತೇ ಪಕ್ಷ ಟಿಕೆಟ್ ನೀಡದೇ ಇರುವುದು ತುಂಬಾ ಬೇಸರ ತ–ರಿಸಿದ್ದು, ನನ್ನ ಮತಕ್ಷೇತ್ರದ ಹಿತ್ಯೆಸಿಗಳ ಆಶಯದಂತೆ ಈ ಸಲ ಚುನಾವಣೆಗೆ ಸ್ಪರ್ಧಿಸುವ ಇಚ್ಛೆ ನನಗಿದ್ದು, ಬಿಜೆಪಿ ಪಕ್ಷದ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸಲಿದ್ದೇನೆ ಎಂದು ಅವರು ತಿಳಿಸಿದರು. ಕಿತ್ತೂರಿನ ಪ್ರಜ್ಞಾವಂತ ಮತದಾರರು ಈ ಸಲ ತಮ್ಮ ಆತ್ಮಸಾಕ್ಷಿಯ ಮತ ನೀಡಿ, ನಿಮ್ಮ ಸೇವೆಗೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಡಾ.ಜ್ಯೋತಿ ಹಾರುಗೊಪ್ಪ, ಮಹಾಂತೇಶ ಇಟ್ನಾಳ, ನಾಗೇಶ ಬಸರಕೋಡ ಸೇರಿದಂತೆ ಇತರರು ಇದ್ದರು.

# ಕಾಂಗ್ರೆಸ್ ಸರ್ವರ ಸಮಾನವಾಗಿ ಕಾಣುವ ಪಕ್ಷ: ರಾಶಿಂಗೆ

ಹುಕ್ಕೇರಿ: ಜಾತ್ಯತೀತತೆ, ಸಾಮರಸ್ಯ, ಅಭಿವೃದ್ಧಿ ಪರ ಚಿಂತನೆ, ಉದಾತ್ತ ತತ್ವ ಸಿದ್ಧಾಂತವನ್ನು ಹೊಂದಿದ ಕಾಂಗ್ರೆಸ್ ಸರ್ವ ಜನಾಂಗದವರನ್ನು ಸಮಾನವಾಗಿ ಕಾಣುವ ಪಕ್ಷವಾಗಿದೆ. ಆದ–'ರಿಂದಲೇ ಕಾಂಗ್ರೆಸ್ ಸರ್ವ ಜನಾಂಗ ಸುಂದರ ತೋಟವಾಗಿದೆ ಎಂದು ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಹೇಳಿದರು.

ತಾಲೂಕಿನ ಪುರ್ವಬಾಗದಗ್ರಾಮಗಳಲ್ಲಿಏರ್ಪಡಿಸಿದ್ದ ಕಾಂಗ್ರೆಸ್



ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಮತ್ತು ದೇಶದ ಅಭಿವೃದ್ಧಿಯಲ್ಲಿ ಕಾಂಗ್ರೆಸ್ ಕೊಡುಗೆ ಅಪಾರವಾಗಿದೆ ಎಂದರು.

ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಅನುಷ್ಠಾನ ಗೊಳಿಸಿದ ಯೋಜನೆಗಳೇ ಜನರ ಬಾಳಿಗೆ ಬೆಳಕಾಗಿವೆ. ಸಿದ್ಧರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ಕರ್ನಾಟಕವನ್ನು ಸುವರ್ಣ ರಾಜ್ಯವನ್ನಾಗಿ ಮಾಡಿದ್ದರು. ಅನ್ನಭಾಗ್ಯ, ಕ್ಷೀರಭಾಗ್ಯ, ಕೃಷಿಭಾಗ್ಯ ಸೇರಿದಂತೆ ಅನೇಕ ಜನೋಪಕಾರಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಜನಮನ ಗೆದ್ದಿದ್ದಾರೆ ಎಂದು ಅವರು ಹೇಳಿದರು.

ಅಭ್ಯರ್ಥಿ ಎ.ಬಿ.ಪಾಟೀಲ ಮಾತನಾಡಿ, ರಾಜ್ಯದ ಜನತೆ ಈ ಹಿಂದೆ ರಾಜ್ಯದಲ್ಲಿ ಆಡಳಿತ ನಡೆಸಿದ ಕಾಂಗ್ರೆಸ್ ಕಾರ್ಯವನ್ನು ನೋಡಿದ್ದಾರೆ. ಸದ್ಯ ರಾಜ್ಯದಲ್ಲಿನ ಬಿಜೆಪಿ ದುರಾಡಳಿತವನ್ನು ನೋಡಿದ್ದಾರೆ. ಬಿಜೆಪಿ ಜನವಿರೋಧಿ ನೀತಿಗೆ ಬೇಸತ್ತ ಜನರು ಕಾಂಗ್ರೆಸ್ ಬೆಂಬಲಿಸುವ ಮೂಲಕ ಬಿಜೆಪಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿಜಯ ರವದಿ, ಪುರಸಭೆ ಸದಸ್ಯೆ ರೇಖಾ ಚಿಕ್ಕೋಡಿ, ಮುಖಂಡರಾದ ರಾಜು ಸಿದ್ನಾಳ, ದಿಲೀಪ ಹೊಸಮನಿ, ಶಾನೂರ್ ತಹಶೀಲ್ದಾರ, ಮಂಜು ಪಡದಾರ, ಕುಮಾರ ಬೆಂಕಿ ಮತ್ತಿತರರು ಉಪಸ್ಥಿತ–ರಿದ್ದರು. ಇದಕ್ಕೂ ಮೊದಲು ಶಿರಹಟ್ಟಿ ಬಿ.ಕೆ., ಸಾರಾಪುರ, ಶೇಲಾಪುರ ಸೇರಿದಂತೆ ಕ್ಷೇತ್ರದ ವಿವಿಧ ಹಳ್ಳಿಗಳಲ್ಲಿ ಕಾಂಗ್ರೆಸ್ ಮುಖಂಡರು ಅಬ್ಬರದ ಪ್ರಚಾರ ನಡೆಸಿ ಮತಯಾಚಿಸಿದರು.

# ಹೊಸ ಯುವ ಮುಖವನ್ನು ಕ್ಷೇತ್ರದ ಜನತೆ ಬಯಸುತಿದೆ

ಹುಕ್ಕೇರಿ: ಯುವಕ–ರಿಗೆ ಉದ್ಯೋಗ ಹಾಗೂ ಅಭಿವೃದ್ಧಿಗೆ ಸ್ಪಂದಿಸುವ ಹೊಸ ಯುವ ಮುಖವನ್ನು ಕ್ಷೇತ್ರದ ಜನತೆ ಬಯಸುತಿದೆ ಎಂದು ಸಂಕೇಶ್ವರದ ಲಕ್ಷ ಫೌಂಡೇಶನ್ ಸಂಸ್ಥಾಪಕ ಮಂಜುನಾಥ ಗಡೆನ್ನವರ ಹೇಳಿದರು.

ಅವರು ಹುಕ್ಕೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ ಕಳೆದ ಹಲವಾರು ವರ್ಷಗಳಿಂದ ಲಕ್ಷ ಪೌಂಡೇಶನ ಮೂಲಕ ಸಾಮಾಜಿಕ ಕಾರ್ಯಗಳನ್ನು ಕೈಗೊಳ್ಳುತ್ತಿ ರುವದ–ರಿಂದ ಹುಕ್ಕೇರಿ ಕ್ಷೇತ್ರದಿಂದ



ಸ್ಪರ್ಧಿಸಲು ಜನರು ಒತ್ತಾಯ ಮಾಡುತ್ತಿದ್ದಾರೆ.

ತಾಲೂಕಿನ ಜನರ ಹಿತ ದೃಷ್ಟಿಯಿಂದ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿಯಲು ತೀರ್ಮಾನಕ್ಕೆ ಬಂದಿದ್ದು

ಗಡಿನಾಡು ಪ್ರದೇಶದಲ್ಲಿ ಉದ್ಯೋಗ ಸೃಷ್ಟಿಸಲು ಮತ್ತು ನೀರಾವರಿಗೆ ಒತ್ತು ನೀಡಲಾಗುವದು.

ತಾಲೂಕಿನಲ್ಲಿ ವೃತ್ತಿಪರ ಶಿಕ್ಷಣ, ಆಸ್ಪತ್ರೆಗಳು ನಿರ್ಮಾಣವಾಗ ಬೇಕಾಗಿದೆ. ಹಿಂದೆ ಆಡಳಿತ ನಡೆಸಿದ ದಿಗ್ಗಜರಾದ ಕಾಂಗ್ರೆಸ್ ನ ಎ.ಬಿ ಪಾಟೀಲ. ಹಾಗೂ ದಿ. ಉಮೇಶ ಕತ್ತಿ ಅವರು ಆರ್ಥಿಕವಾಗಿ ಬಲಾಡ್ಯವಾಗಿದ್ದರು ಅಭಿವೃದ್ಧಿಕಡೆ ಗಮನ ಹರಿಸಿಲ್ಲ ಎಂದು ಆರೋಪಿಸಿದರು.

ತಾಲೂಕು ಸಾಕಷ್ಟು ಅಭಿವೃದ್ಧಿಯಾಗ ಬೇಕಾಗಿ–ತ್ತು. ಈ ಸಲ ಜನರು ಹೊಸ ಯೋಜನೆ,ಹೊಸ ಯುವ ಮುಖಗಾಗಿ ಕ್ಷೇತ್ರದ ಜನತೆಗಾಗಿ ಸ್ಪರ್ಧೆಗಿಳಿಯಲು ಸಿದ್ದತೆ ಮಾಡಿಕೊಳ್ಳಲಾಗಿದೆಂದರು.

ಲಕ್ಷ ಪೌಂಡೇಶನ್ ಹಲವಾರು ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿದ್ದ–ರಿಂದ ಸೋಶಿಯಲ್ ಮಿಡಿಯಾ ಮೂಲಕ ಜನರು ಪಕ್ಷೇತರವಾಗಿ ಸ್ಪರ್ಧಿಸಲು ಒತ್ತಾಯ ಮಾಡುತ್ತಿದ್ದಾರೆ. 19/20 ದಿನಾಂಕದಂದು ನಾಮ ಪತ್ರ ಸಲ್ಲಿಸುವದಾಗಿ ತಿಳಿಸಿದರು.

# ಮಿಲಿಟರಿ ಠಾಣೆಯ ಮೇಲೆ ದಾಳಿ: ಬೆಳಗಾವಿ ಮೂಲದ ಯೋಧ ಹುತಾತ್ಮ

ಬೆಳಗಾವಿ: ಪಂಜಾಬ್ ನ ಬಟಿಂಡಾ ಮಿಲಿಟರಿ ಠಾಣೆಯ ಮೇಲೆ ಬುಧವಾರ ಬೆಳಗ್ಗೆ ನಡೆದ ಅಪರಿಚಿತರ ದಾಳಿಯಲ್ಲಿ ನಿಪ್ಪಾಣಿ ತಾಲೂಕಿನ ಬೇನಾಡಿ ಗ್ರಾಮದ ಯೋಧವೀರಮರಣ ಹೊಂದಿದ್ದಾರೆ.

ಬೇನಾಡಿ ಗ್ರಾಮದ ಸಾಗರ ಅಪ್ಪಾಸಾಹೇಬ ಬನ್ನೆ(25) ಎಂಬ ಯೋಧ ಗುಂಡಿನ ದಾಳಿಯಲ್ಲಿ ಮೃತಪಟ್ಟಿದ್ದಾರೆ.

ಕುಟಂಬದವರಿಗೆ ಮಾಹಿತಿ ಸಿಗುತ್ತಿದ್ದಂತೆ ಆಕ್ರಂದನ ಮುಗಿಲು ಮುಟ್ಟಿದ್ದು, ಇಡೀ ಗ್ರಾಮ ಶೋಕ ಸಾಗರದಲ್ಲಿ ಮುಳುಗಿದೆ. ಎ.



13ರಂದು ಪಾರ್ಥಿವ ಶರೀರ ಗ್ರಾಮಕ್ಕೆ ಆಗಮಿಸಲಿದೆ.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಪಾರ್ಥಿವ ಶರೀರದ ಮೆರವಣಿಗೆ ನಡೆಸಿ ನಂತರ ಬೀರದೇವ ಮಾಳದಲ್ಲಿ ಅಂತ್ಯಸಂಸ್ಕಾರ ನಡೆಯಲಿದೆ.

ಮೃತಸಾಗರ್ ತಂದೆ ತಾಯಿ ಸಹೋದರ ಹಾಗೂ ಸಹೋದ–ರಿಯನ್ನು ಅಗಲಿದ್ದಾರೆ.

ತಂದೆ ಕುರಿ ಸಾಕಾಣಿಕೆ ಮಾಡುತ್ತಿದ್ದು, ಬಡತನದಲ್ಲಿಯೇ ಸಾಗರನನ್ನು ಭಾರತೀಯ ಸೇನೆಗೆ ಸೇರಿಸಿದ್ದರು.

2018ರಲ್ಲಿ ರಾಯಚೂ–ರಿನಲ್ಲಿ ನಡೆದ ಸೈನ್ಯ ಭರ್ತಿಯಲ್ಲಿ ಸೇನೆಗೆ ಸಾಗರ ಆಯ್ಕೆ ಆಗಿದ್ದರು. ಮಹಾರಾಷ್ಟ್ರದ ನಾಸಿಕದಲ್ಲಿ ಒಂದು ವರ್ಷ ತರಬೇತಿ ಮುಗಿಸಿ ಪಂಜಾಬದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದನು.

ಬೇನಾಡಿ ಗ್ರಾಮದಲ್ಲಿ ಪ್ರಾಥ–'ಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ಪೂರೈಸಿ ನಿಪಾಣಿಯ ಪಿಎಸ್‌ಎಂವಿ ಸಂಸ್ಥೆಯ ಮಹಾವಿದ್ಯಾಲಯದಲ್ಲಿ ಪದವಿ ಅವರಿಗೆ ಶಿಕ್ಷಣ ಮುಗಿಸಿದ್ದನು.

ಮುಂದಿನ ತಿಂಗಳು ಯೋಧನ ವಿವಾಹ ಇತ್ತು: ಸಾಗರ್ ಬನ್ನೆಯ ವಿವಾಹ ಸಮಾರಂಭ ಮೇ 21ರಂದು ನಿಶ್ಚಯವಾಗಿ–ತ್ತು. ಮದುವೆಗಾಗಿ ಎಪ್ರಿಲ್ 18 ಅಥವಾ 20 ರಂದು ಗ್ರಾಮಕ್ಕೆ ಆಗಮಿಸುವವನಿದ್ದರು. ಇಷ್ಟರಲ್ಲಿಯೇ ಗುಂಡಿನ ದಾಳಿಗೆ ವೀರಮರಣ ಹೊಂದಿದ್ದು, ಬೇನಾಡಿ ಗ್ರಾಮದಲ್ಲಿ ದುಃಖ ಮಡುಗಟ್ಟಿದೆ.

# ರಾಷ್ಟ್ರೀಯ ಪಕ್ಷಗಳಿಂದ ಜೈನ ಸಮಾಜಕ್ಕೆ ಅನ್ಯಾಯ: ಸಮಾಜದ ಅಭ್ಯರ್ಥಿಗಳಿಗೆ ಟಿಕೆಟ್ ನೀಡಲು ಆಗ್ರಹ

ಬೆಳಗಾವಿ: ಇದೇ 2023 ರಲ್ಲಿ ನಡೆಯುತ್ತಿರುವ ರಾಜ್ಯ ವಿಧಾನ ಸಭೆ ಚುನಾವಣೆಯಲ್ಲಿ ಎಲ್ಲ ರಾಷ್ಟ್ರೀಯ ಪಕ್ಷಗಳು ಜೈನ ಸಮಾಜವನ್ನು ಕಡೆಗೆಣಿಸಿರುವುದು ಖಂಡನೀಯವಾಗಿದ್ದು, ಬಿಜೆಪಿ ಪಕ್ಷದಿಂದ ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಸಂಜಯ ಪಾಟೀಲ ಮತ್ತು ಖಾನಾಪೂರ ಕ್ಷೇತ್ರದಿಂದ ಪ್ರಮೋದ ಕೊಚೆರಿ ಹಾಗೂ ಕಾಂಗ್ರೆಸ ಪಕ್ಷದಿಂದ ತೇರದಾಳ ಮತಕ್ಷೇತ್ರಕ್ಕೆ ಡಾ. ಪದ್ಮಜೀತ ನಾಡಗೌಡ ಅವರಿಗೆ ಟಿಕೆಟ್ ಘೋಷಣೆ ಮಾಡಬೇಕೆಂದು ಜೈನ ಸಮಾಜದ ಮುಖಂಡ ವಿನೋದ ದೊಡ್ಡಣ್ಣವರ ಅವರು ಇಂದಿಲ್ಲಿ ಆಗ್ರಹಿಸಿದರು.

ಬೆಳಗಾವಿಯ ಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲ ರಾಷ್ಟ್ರೀಯ ಪಕ್ಷಗಳು ಜೈನ ಸಮಾಜವನ್ನು ಕಡೆಗೆಣಿಸಿವೆ. ಜೈನ ಸಮಾಜ ಎಲ್ಲ ಸಮುದಾಯದೊಂದಿಗೆ ಬೆರೆತು ಸಾಮಾಜಿಕ ಸೇವೆಗಳನ್ನು ಕೈಗೊಳ್ಳುವಲ್ಲಿ ಮುಂಚೂಣಿಯಲ್ಲಿದೆ. ಆದರೆ ರಾಜಕೀಯ ಮತ್ತು ಅಧಿಕಾರದ ವಿಷಯ ಬಂದಾಗ ಎಲ್ಲ ರಾಷ್ಟ್ರೀಯ ಪಕ್ಷಗಳು ಜೈನ ಸಮಾಜವನ್ನು ತುಳಿಯುತ್ತ ಬಂದಿವೆ. ಈ ಬೆಳವಣಿಗೆಯನ್ನು ಜೈನ ಸಮಾಜ ಒಕ್ಕೂರಲಿನಿಂದ ಖಂಡಿಸುತ್ತದೆ.



ಬೆಳಗಾವಿ ಜಿಲ್ಲೆಯ ಖಾನಾಪೂರ ಕ್ಷೇತ್ರದಲ್ಲಿ ಬಿಜೆಪಿ ಪಕ್ಷ ಪ್ರಭಲವಾಗಲು ಪ್ರಮೋದ ಕೊಚೇರಿ ಅವರ ಕೊಡುಗೆ ಅಪಾರವಾಗಿದೆ. ಪ್ರತಿ ಬಾರಿ ಚುನಾವಣೆಯಲ್ಲಿ ಅವರಿಗೆ ಟಿಕೆಟ್ ನಿರಾಕರಿಸಲಾಗುತ್ತದೆ. ಈ ಬಾರಿಯಾದರೂ ಅವರಿಗೆ ಟಿಕೆಟ್ ನೀಡಬೇಕು. ಅದರಂತೆ ಬಿಜೆಪಿ ಬೆಳಗಾವಿ ಜಿಲ್ಲಾ ಗ್ರಾಮಾಂತರ ಅಧ್ಯಕ್ಷರಾಗಿ ಕಳೆದ ಐದು ವರ್ಷಗಳಿಂದ ಪಕ್ಷ ಸಂಘಟನೆ ಮಾಡಿ ಹಾಗೂ ಕಳೆದ ಲೋಕಸಭಾ ಚುನಾವಣೆಯಲ್ಲಿ ಚಿಕ್ಕೋಡಿ ಕ್ಷೇತ್ರದ ಗೆಲುವಿಗೆ ಕಾರಣ–ಕರ್ತರಾದ ಮಾಜಿ ಶಾಸಕ ಸಂ–ಜಯ ಪಾಟೀಲ ಅವರಿಗೂ ಸಹ ಟಿಕೆಟ ನಿರಾಕರಿಸಿವುದು ದುಃಖದ ಸಂಗತಿಯಾಗಿ.

ಇವರಿಬ್ಬರಿಗೂ ಟಿಕೆಟ್ ನೀಡುವ ಮೂಲಕ ಅನ್ಯಾಯ ಸರಿಪಡಿಸಬೇಕೆಂದು ಅವರು ಹೇಳಿದರು.

ಇದೆ ಸಂದರ್ಭದಲ್ಲಿ ಜೈನ ಸಮಾಜದ ಮುಖಂಡರಾದ ಡಾ. ಎನ್,.ಎ. ಮಗದುಮ್ಮ ಮತ್ತು ಅರುಣ ಯಲಗುದ್ರಿ ಆವರು ಮಾತನಾಡಿ, ತೇರದಾಳ ಮತ ಕ್ಷೇತ್ರದಲ್ಲಿ ಜೈನ ಸಮಾಜದ ಡಾ. ಪದ್ಮಜೀತ ನಾಡಗೌಡ ಅವರು ಕಾಂಗ್ರೆಸ ಪಕ್ಷದ ಅತ್ಯಂತ ಕ್ರೀಯಾಶೀಲ ವ್ಯಕ್ತಿಯಾಗಿದ್ದು, ಅವರಿಗೆ ಟಿಕೆಟ್ ನೀಡಬೇಕೆಂದು ಅವರು ಆಗ್ರಹಿಸಿದರು.

ಒಟ್ಟಾರೆ ಎಲ್ಲ ರಾಷ್ಟ್ರೀಯ ಪಕ್ಷಗಳು ರಾಜಕೀಯ ಮತ್ತು ಅಧಿಕಾರದ ವಿಷಯ ಬಂದಾಗ ಜೈನ ಸಮಾಜವನ್ನು ಕಡೆಗೆಣಿಸುತ್ತ ಬಂದಿವೆ.

ಆದರೆ ಈ ಬಾರಿ ಈ ಅನ್ಯಾಯವನ್ನು ಸಹಿಸಲು ಸಾಧ್ಯವಿಲ್ಲ . ಈ ಬಗ್ಗೆ ಎರಡೂ ಪಕ್ಷದ ಹಿರಿಯರೂ ಗಮನ ಹರಿಸಬೇಕು. ಇಲ್ಲದಿದ್ದಲ್ಲಿ ಸಮಾಜ ಒಂದು ಗಟ್ಟಿಯಾದ ನಿರ್ಧಾರ ಕೈಗೊಳ್ಳಬೇಕಾಗುತ್ತದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹುಕ್ಕೇರಿ ಜೈನ ಸಮಾಜದ ಪ್ರಮುಖ ಮಹಾವೀರ ನಿಲಜಗಿ, ಬಾಹುಬಲಿ ನಾಗನೂರಿ, ಉಗಾರ ಗ್ರಾಮದ ಆನಂದ ಸದಲಗೆ, ರಾಜೇಂದ್ರ ಜೈನ, ಶ್ರೀಪಾಲ ಖೆಮಲಾಪೂರೆ, ಜಬರಚಂದ ಸಾಮಸುಖಾ, ಅಭಯ ಅವಲಕ್ಕಿ, ಸೇರಿದಂತೆ ಬೆಳಗಾವಿ ಜಿಲ್ಲೆಯ ಜೈನ ಸಮಾಜದ ಮುಖಂಡರು ಉಪಸ್ಥಿತ–ರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089